ಸಂಪುಟ : 13 Volume ಸಂಚಿಕೆ : 253 Issue ಪುಟಗಳು : 08 Pages ಮಂಗಳವಾರ 25 ನವೆಂಬರ 2025 ₹6 PRGINO. 120927(RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಚಿಂತೆ ಮಾಡಿ ಯಾಕೆ ನಾವು ಕೊರಗಬೇಕು ಆ ಚಿಂತೆ ಹುಟ್ಟಿಸಿದವರನ್ನು ಮರೆತು ಮುಂದೆ ನಡೆಯಬೇಕು.
ಗೌತಮ ಬುದ್ಧ.

4 ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ | 2 ಪ್ರಗತಿ ಆರೋಗ್ಯ ಮತ್ತು ಶಿಕ್ಷಣ ಸಂಸ್ಥೆ ಬೀದರ | 8 ಅಧಿಕಾರದ ಹಿಂದೆ ಬಿದ್ದ ರಾಜ್ಯ ಸರ್ಕಾರ | 3 ನೀರು ಸರಬರಾಜಿನಲ್ಲಿ ವ್ಯತ್ಯಯ

# ಕುರ್ಚಿಯ ಪವರ್ ಪಾಲಿಟಿಕ್ಸ್

## ಸಿಎಂ ಗದ್ದುಗೆಗಾಗಿ ನಿಲ್ಲದ ಗುದ್ದಾಟ, ಪಟ್ಟು ಬಿಡದ ಡಿಕೆ ಬ್ರದರ್ಸ್, ಶಾಂತರಾದ ಸಿದ್ದು

### ಜಾರ್ಜ್, ಡಿಕೆಶಿ ಪ್ರತ್ಯೇಕ ಚರ್ಚೆ

ಖರ್ಗೆ, ರಾಜ್ಯ ಸಚಿವರು ಮತ್ತು ಹಿರಿಯ ನಾಯಕರೊಂದಿಗೆ ಪ್ರತ್ಯೇಕವಾಗಿ ಮಾತುಕತೆ ನಡೆಸುತ್ತಿದ್ದಾರೆ. ಈ ಕ್ಷಿಪ್ರ ಬೆಳವಣಿಗೆಗಳ ನಡುವೆ, ಶಿವಕುಮಾರ್ ಸಿದ್ದರಾಮಯ್ಯ ಅವರ ಆಪ್ತರಾದ ಸಚಿವ ಕೆ.ಜೆ. ಜಾರ್ಜ್ ಅವರನ್ನು ಭೇಟಿಯಾಗಿದ್ದಾರೆ. ಜಾರ್ಜ್ ಈ ಹಿಂದೆ ಸಿದ್ದರಾಮಯ್ಯ ಅವರೊಂದಿಗೆ ರಾಹುಲ್ ಗಾಂಧಿ ಮತ್ತು ಖರ್ಗೆ ಅವರನ್ನು ಭೇಟಿ ಮಾಡಿದ್ದರು. ಶಿವಕುಮಾರ್ ಮತ್ತು ಕೆಜೆ ಜಾರ್ಜ್ ಸದ್ಯ ರಾಜ್ಯದಲ್ಲಿ ನಡೆಯುತ್ತಿರುವ ಬೆಳವಣಿಗೆಗಳ ಕುರಿತು ಚರ್ಚಿಸಿದ್ದಾರೆ ಎಂದು ತಿಳಿದು ಬಂದಿದೆ

### ಶಾಸಕರು ದಿಲ್ಲಿಗೆ ಹೋಗಿದ್ದು ಗೊತ್ತಿಲ್ಲ: ಡಿಕೆಶಿ

ಎರಡೂವರೆ ವರ್ಷಗಳ ನಂತರ ಶಿವಕುಮಾರ್ ಅವರಿಗೆ ಸಿಎಂ ಹುದ್ದೆ ಹಸ್ತಾಂತರಿಸುವುದಾಗಿ ಹೈಕಮಾಂಡ್ ಭರವಸೆ ನೀಡಿತ್ತು ಎಂದು ಶಿವಕುಮಾರ್ ಅವರ ಆಪ್ತ ಕಾಂಗ್ರೆಸ್ ನಾಯಕರು ವಾದಿಸುತ್ತಾರೆ. ಅಧಿಕಾರ ಹಂಚಿಕೆ ಸೂತ್ರದ ಭರವಸೆಯನ್ನು ಗೌರವಿಸುವಂತೆ ಶಿವಕುಮಾರ್ ಪರ ಶಾಸಕರು ಈಗ ಹೈಕಮಾಂಡ್ ಅನ್ನು ಒತ್ತಾಯಿಸುತ್ತಿದ್ದಾರೆ. ಈ ಮಧ್ಯೆ ಶಾಸಕರು ದೆಹಲಿಗೆ ತೆರಳಿರುವ ವಿಚಾರ ನನಗೆ ಗೊತ್ತಿಲ್ಲ ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ.

**ಮಲ್ಲಮ್ಮ ನುಡಿ ವಾರ್ತೆ,** ಬೆಂಗಳೂರು:

ರಾಜ್ಯದಲ್ಲಿ ಸಿಎಂ ಗದ್ದುಗೆಗಾಗಿ ಗುದ್ದಾಟ ಮುಂದುವರಿದಿದೆ. ಇತ್ತ ಮುಖ್ಯಮಂತ್ರಿ ಸಿದ್ದರಾಮಯ್ಯ ಕೊಂಚ ಶಾಂತರಾಗಿದ್ದು, ಹೈಕಮಾಂಡ್ ಮಧ್ಯಪ್ರವೇಶಿಸುವ ಜರೂರು ಎದುರಾಗಿದೆ. ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಆಪ್ತರಾದ ಕೆಲ ಕಾಂಗ್ರೆಸ್ ಶಾಸಕರ ಮೂರನೇ ಬ್ಯಾಚ್ ಹೈಕಮಾಂಡ್ ಮೇಲೆ ಒತ್ತಡ ಹಾಕಲು ರಾತ್ರೋರಾತ್ರಿ ದೆಹಲಿ ತಲುಪಿದೆ.

**ಮೂರನೇ ಬ್ಯಾಚ್ ದೆಹಲಿಗೆ:**

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಎರಡೂವರೆ ವರ್ಷಗಳನ್ನು ಪೂರ್ಣಗೊಳಿಸುತ್ತಿದ್ದಂತೆಯೇ ಕೆಲವು ದಿನಗಳಿಂದ ಚರ್ಚೆಯಾಗುತ್ತಿದ್ದ ಅಧಿಕಾರ ಹಂಚಿಕೆ ವಿವಾದ ಬಗೆಹರಿಸಲು ವರಿಷ್ಠರ ಮೇಲೆ ಹೊಸ ಒತ್ತಡ ಹೇರಲು ಎರಡು ಬ್ಯಾಚ್ ಶಾಸಕರು ದೆಹಲಿಗೆ ಪ್ರಯಾಣ ಬೆಳೆಸಿದ್ದರು. ಈಗ ಎರಡನೇ ಮೂರನೇ ಬ್ಯಾಚ್ ಕಾಂಗ್ರೆಸ್ ಹೈಕಮಾಂಡ್ ಜೊತೆ ತುರ್ತು ಸಭೆ ನಡೆಸಲು ರಾಷ್ಟ್ರ ರಾಜಧಾನಿಗೆ ತೆರಳಿದೆ.

**ಬೆಂಗಳೂರಿನಲ್ಲಿಯೇ ಉಳಿದ ಖರ್ಗೆ:** ಆರರಿಂದ ಎಂಟು ಶಾಸಕರು ನಿನ್ನೆ ತಡರಾತ್ರಿ ರಾಜಧಾನಿಗೆ ಬಂದಿಳಿದಿದ್ದಾರೆ ಎಂದು ಮೂಲಗಳು ತಿಳಿಸಿವೆ. ಆದಾಗ್ಯೂ, ದೆಹಲಿಗೆ ಪ್ರಯಾಣಿಸುವ ನಿರೀಕ್ಷೆಯಿದ್ದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಬೆಂಗಳೂರಿನಲ್ಲಿಯೇ ಉಳಿದಿದ್ದಾರೆ.



ನಾಡಿಗೆ ಯಾರು ಹಿತರು ಈ ಮೂವರೊಳಗೆ..?

### ರಾಜಕೀಯ ನಾಟಕಕ್ಕೆ ತೆರೆ..?

ರಾಜ್ಯ ಕಾಂಗ್ರೆಸ್ ನಲ್ಲಿ ನಡೆಯುತ್ತಿರುವ ಸದ್ಯದ ಬೆಳವಣಿಗೆ ಬಗ್ಗೆ ನಾನು ಏನೂ ಹೇಳಲ್ಲ. ಏನೇ ಇದ್ದರೂ ಹೈಕಮಾಂಡ್ ತೀರ್ಮಾನಿಸುತ್ತದೆ. ಈಗ ನಡೆದ ವಿದ್ಯಾಮನಗಳ ಬಗ್ಗೆ ಹೇಳಲು ನನ್ನ ಬಳಿ ಏನೂ ಇಲ್ಲ. ಯಾವ ವಿಚಾರದಲ್ಲಿಯೂ ಹೇಳಲು ಏನೂ ಇಲ್ಲ ಎಂದು ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ. ಆಂತರಿಕ ಕಚ್ಚಾಟದ ಈ ರಾಜಕೀಯ ನಾಟಕಕ್ಕೆ ತೆರೆ ಎಳೆಯಲು ಎಐಸಿಸಿ ಅಧ್ಯಕ್ಷರು ಬಂದು ರಾಜ್ಯ ನಾಯಕರ ಕೋಪವನ್ನು ತಣ್ಣಗಾಗಿಸಲು ಹೆಜ್ಜೆ ಹಾಕಿದ್ದಾರೆ.

### ಬೇಡ ಬೆಂಕಿಯ ಜೊತೆ ಸರಸ:ವಾಟಾಳ್

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಬದಲಾಯಿಸುವ ಯಾವುದೇ ಪ್ರಯತ್ನ ಬೆಂಕಿಯೊಂದಿಗೆ ಆಡುವ ಸರಸವಾಗಬಹುದು ಎಂದು ಕನ್ನಡ ಹೋರಾಟಗಾರ ಮತ್ತು ಮಾಜಿ ಶಾಸಕ ವಾಟಾಳ್ ನಾಗರಾಜ್ ಎಚ್ಚರಿಸಿದ್ದಾರೆ. ಪ್ರಸ್ತುತ ರಾಜ್ಯದ ಯಾವುದೇ ಪಕ್ಷದಲ್ಲಿ ಸಿದ್ದರಾಮಯ್ಯರಂತಹ ಸಾಮರ್ಥ್ಯ ಹೊಂದಿರುವ ನಾಯಕರಿಲ್ಲ ಎಂದಿದ್ದಾರೆ. ಮಂಗಳೂರಿನಲ್ಲಿ ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ನಾಗರಾಜ್, ಸಿದ್ದರಾಮಯ್ಯ ಅವರನ್ನು ಬದಲಾಯಿಸುವ ಅಗತ್ಯವಿಲ್ಲ. ಕಾಂಗ್ರೆಸ್, ಬಿಜೆಪಿ ಅಥವಾ ಜೆಡಿಎಸ್ ಯಾವುದೇ ಪಕ್ಷದಲ್ಲೂ ಸಿದ್ದರಾಮಯ್ಯರಂತಹ ನಾಯಕರಿಲ್ಲ ಎಂದು ತಿಳಿಸಿದ್ದಾರೆ.

### ಹೌದು ಮಾತಿಗೆ ತಪ್ಪಲ್ಲ:ಸಿಎಂ

ಸಿಎಂ ಆಗಿ ನಾನೇ ಐದು ವರ್ಷಗಳ ಕಾಲ ಮುಂದುವರಿಯುತ್ತೇನೆ. ಆದರೆ ಹೈಕಮಾಂಡ್ ಹೇಳಿದರೆ ನಾನು ಕೇಳಬೇಕು, ಡಿಕೆ ಶಿವಕುಮಾರ್ ಅವರು ಕೇಳಬೇಕು. ಹೈಕಮಾಂಡ್ ಮಾತಿಗೆ ನಾನು ಬದ್ಧ ಎಂದಿದ್ದಾರೆ ಸಿಎಂ. ಇದೇ ವೇಳೆ ಡಿಕೆ ಶಿವಕುಮಾರ್ ಅವರ ಸಹೋದರ ಡಿ ಕೆ ಸುರೇಶ್ ಅವರು ಸಿದ್ದರಾಮಯ್ಯ ಎಂದಿಗೂ ಮಾತು ತಪ್ಪಲ್ಲ ಎಂದು ಹೇಳಿರುವ ಬಗ್ಗೆ ಪ್ರತಿಕ್ರಿಯಿಸಿದ ಸಿಎಂ, ಹೌದು ನಾನು ಮಾತಿಗೆ ತಪ್ಪಲ್ಲ. ಎಲ್ಲಾ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದೇನೆ. ನಾನೇ ಸಿಎಂ ಆಗಿ ಮುಂದುವರಿಯುತ್ತೇನೆ ಎಂದು ಪುನರುಚರಿಸಿದ್ದಾರೆ.

### ಶಾಸಕರನ್ನು ಸಂಪರ್ಕಿಸಿದ ಯತೀಂದ್ರ

ಸಿದ್ದರಾಮಯ್ಯ ಅವರ ಪುತ್ರ ಡಾ. ಯತೀಂದ್ರ ಅವರು ಶಾಸಕರನ್ನು ಸಂಪರ್ಕಿಸಿದ್ದಾರೆ. ಮತ್ತು ಅವರು ಸಚಿವ ಸ್ಥಾನದ ಆಕಾಂಕ್ಷಿಯೂ ಆಗಿರುವ ಹುಬ್ಬಳ್ಳಿ-ಧಾರವಾಡ ಪೂರ್ವ ಶಾಸಕ ಅಬ್ಬಯ್ಯ ಪ್ರಸಾದ್ ಅವರನ್ನು ಭೇಟಿ ಮಾಡಿದ್ದಾರೆ. ನಾಯಕತ್ವದಲ್ಲಿ ಬದಲಾವಣೆಯಾದರೆ, ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರನ್ನು ಸಿಎಂ ಹುದ್ದೆಗೆ ಪರಿಗಣಿಸಬೇಕು ಎಂದು ಅಬ್ಬಯ್ಯ ಹೇಳಿದರು. ಇಂಧನ ಸಚಿವ ಕೆ ಜೆ ಜಾರ್ಜ್ ಅವರು ಬೆಂಗಳೂರಿನಲ್ಲಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಅವರ ನಿವಾಸದಲ್ಲಿ ಭೇಟಿಯಾಗಿ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳ ಕುರಿತು ಚರ್ಚಿಸಿದ್ದರೆ.

## ನಟ ಧರ್ಮೇಂದ್ರ ನಿಧನ



**ಬಾಲಿವುಡ್ ಕಂಬನಿ**

ಹಿರಿಯ ನಟ ಧರ್ಮೇಂದ್ರ ಅವರ ನಿಧನಕ್ಕೆ ಬಾಲಿವುಡ್ ಸೇರಿದಂತೆ ಇಡೀ ಭಾರತೀಯ ಚಿತ್ರರಂಗ ತೀವ್ರ ಕಂಬನಿ ಮಿಡಿದಿದೆ

**ಮಲ್ಲಮ್ಮ ನುಡಿ ವಾರ್ತೆ**

ಮುಂಬೈ: ನ. ಬಾಲಿವುಡ್ ಚಿತ್ರರಂಗದ ಆಕ್ಷನ್ ಕಿಂಗ್ ಎಂದೇ ಖ್ಯಾತಿ ಪಡೆದಿದ್ದ ಹಿರಿಯ ನಟ ಧರ್ಮೇಂದ್ರ ಮುಂಬೈನಲ್ಲಿಂದು ನಿಧನರಾಗಿದ್ದಾರೆ.

ಅವರಿಗೆ 89 ವರ್ಷ ವಯಸ್ಸಾಗಿತ್ತು. ಇತ್ತೀಚೆಗೆ ಬ್ರೀಚ್ ಕ್ಯಾಂಡಿ ಆಸ್ಪತ್ರೆಯಿಂದ ಬಿಡುಗಡೆಯಾದ ಅವರು ತೀವ್ರ ಅಸ್ವಸ್ಥರಾಗಿದ್ದರು. ಆರು ದಶಕಗಳಿಗೂ ಹೆಚ್ಚು ಕಾಲ ಸಿನಿಮಾ ಕ್ಷೇತ್ರದಲ್ಲಿ 300 ಅಧಿಕ ಚಲನಚಿತ್ರಗಳಲ್ಲಿ ನಟಿಸಿ ಅಭಿಮಾನಿಗಳನ್ನು ರಂಜಿಸಿದ್ದರು. ನಟ ಧರ್ಮೇಂದ್ರ ಅವರು ಇಬ್ಬರು ಹೆಂಡತಿಯರು, 6 ಮಂದಿ ಮಕ್ಕಳು ಸೇರಿದಂತೆ ಅಪಾರ ಸಂಖ್ಯೆಯ ಅಭಿಮಾನಿಗಳನ್ನು ಅಗಲಿದ್ದಾರೆ . 2ನೇ ಪುಟನೋಡಿ

## ಮನೆ ಬೀಗ ಮುರಿದು 20.62 ಲಕ್ಷ ರೂ. ಮೌಲ್ಯದ ನಗನಾಣ್ಯ ಕಳವು

**ಮಲ್ಲಮ್ಮ ನುಡಿ ವಾರ್ತೆ**

ಕಲಬುರಗಿ: ನ,-ಮನೆ ಬೀಗ ಮುರಿದು 20.60 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ನಗರದ ಗಾಬರೆ ಲೇಔನಲ್ಲಿ ನಡೆದಿದೆ.

ನಿವೃತ್ತ ವಲಯ ಅರಣ್ಯಾಧಿಕಾರಿ ಈರಣ್ಣ ಪಟ್ಟೇದಾರ ಅವರ ಮನೆಯ ದ್ವಾರ ಬಾಗಿಲ ಬೀಗ ಕತ್ತರಿಸಿ ಕಳ್ಳರು 2.50 ಲಕ್ಷ ರೂ.ಮೌಲ್ಯದ 50 ಗ್ರಾಂ. ಬಂಗಾರದ ಎರಡು ಎಳೆಯುಳ್ಳ ತಾಳಿ, 50 ಸಾವಿರ ರೂ.ಮೌಲ್ಯದ 10 ಗ್ರಾಂ.ಬಂಗಾರದ ತಾಳಿ, 3.50 ಲಕ್ಷ ರೂ.ಮೌಲ್ಯದ ಬಂಗಾರದ ಎರಡು ನಾನ್, 2.50 ಲಕ್ಷ ರೂ.ಮೌಲ್ಯದ 50 ಗ್ರಾಂ.ಬಂಗಾರದ ಲಕ್ಷ್ಮಿಹಾರ, 4 ಲಕ್ಷ ರೂ.ಮೌಲ್ಯದ 80 ಗ್ರಾಂ.ಬಂಗಾರದ ಬಿಲ್ವಾರ್, 1.50 ಲಕ್ಷ ರೂ.ಮೌಲ್ಯದ ಬಂಗಾರದ ತೋಡೆ, 2 ಲಕ್ಷ ರೂ.ಮೌಲ್ಯದ 40 ಗ್ರಾಂ. ಬಂಗಾರದ ಎರಡು ಲಾಕೆಟ್, 1 ಲಕ್ಷ ರೂ.ಮೌಲ್ಯದ ಬಂಗಾರದ ಎರಡು ಸುತ್ತುಂಗುರ, 1 ಲಕ್ಷ ರೂ.ಮೌಲ್ಯದ 20 ಗ್ರಾಂ.ಬಂಗಾರದ ನೆಕ್ಲೆಸ್, 30 ಸಾವಿರ ರೂ.ಮೌಲ್ಯದ 60 ಗ್ರಾಂ.ಬಂಗಾರದ ನೆಕ್ಲೆಸ್, 20 ಸಾವಿರ ರೂ. ಮೌಲ್ಯದ 4 ಗ್ರಾಂ.ಬಂಗಾರದ ಝುಮಕಿ, 35 ಸಾವಿರ ರೂ.ಮೌಲ್ಯದ 7 ಗ್ರಾಂ.ಬಂಗಾರದ 2ನೇ ಪುಟನೋಡಿ

## ಹಾಲುಮತ ಸಮಾಜ ಹಾಲಿನಷ್ಟೆ ಶುದ್ಧ : ರಾಜಶೇಖರ ಪಾಟೀಲ್

**ಮಲ್ಲಮ್ಮ ನುಡಿ ವಾರ್ತೆ**

ಹುಮನಾಬಾದ್ : ವಿಶ್ವ ಸಂಸ್ಕೃತಿ ಪರಂಪರೆಯಲ್ಲಿ ವಿಶೇಷವಾದ ಸ್ಥಾನಮಾನ ಹೊಂದಿದ ಹಾಲುಮತ ಸಮಾಜ ಹಾಲಿನಷ್ಟೆ ಶುದ್ಧ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಅಭಿಪ್ರಾಯ ವ್ಯಕ್ತಪಡಿಸಿದರು.

ತಾಲೂಕಿನ ಚಂದನಹಳ್ಳಿ ಗ್ರಾಮದ ಮಹಾತ್ಮ ಬೊಮ್ಮಗೊಂಡೇಶ್ವರ ವೃತ್ತದಲ್ಲಿ ಹಾಲುಮತ, ಕುರುಬ, ಗೊಂಡ ಸಮಾಜದ ವತಿಯಿಂದ ಸೋಮವಾರ ನಡೆದ ಮಹಾತ್ಮ ಬೊಮ್ಮಗೊಂಡೇಶ್ವರರ ನೂತನ ಮೂರ್ತಿ ಅನಾವರಣ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದೆ. ಕನಕದಾಸರು, ಸಂಗೊಳ್ಳಿ ರಾಯಣ್ಣನವರಂತ ಮಹಾನ್ ಪುರುಷರು ಜನಿಸಿದ ಕುರುಬ ಸಮಾಜದ





ಒಂದು ಸಮಾನ್ಯ ಕುಟುಂಬದಲ್ಲಿ ಜನಿಸಿದ ಸಿದ್ದರಾಮಯ್ಯನವರು ಕರ್ನಾಟಕ ರಾಜ್ಯಕ್ಕೆ ಎರಡು ಬಾರಿ ಮುಖ್ಯಮಂತ್ರಿಯಾಗಿ ಎಲ್ಲ ವರ್ಗದ ಬಡಜನರ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿ ನಿಸ್ವಾರ್ಥ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಕೊಂಡಾಡಿದರು. ಸಮಾಜದ ಪರಿವರ್ತನೆಗೆ ಬುದ್ಧ, ಬಸವಣ್ಣ ಹಾಗೂ ಅಂಬೇಡ್ಕರ್ ಸೇರಿದಂತೆ ಕನಕದಾಸರು ಹಾಗೂ ಬೊಮ್ಮಗೊಂಡೇಶ್ವರರ ತತ್ವಗಳನ್ನು ಇಂದಿನ ಯುವ ಪೀಳಿಗೆಗಳು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ನಾಗರಿಕ ಸಮಾಜದಲ್ಲಿ ಉತ್ತಮರಾಗಿ 2ನೇ ಪುಟನೋಡಿ

## 2027 ಕ್ಕೆ ಜಿಲ್ಲೆಗೆ ಎತ್ತಿನ ಹೊಳೆ ನೀರು ಕೆರೆಗಳಿಗೆ ನೀರು ನಮ್ಮ ಆರನೇ ಗ್ಯಾರಂಟಿ

**ಮಲ್ಲಮ್ಮ ನುಡಿ ವಾರ್ತೆ**

ಬೆಂಗಳೂರು: ಜಿಲ್ಲೆಯ ಶಾಸಕರು ಪಂಚ ಪಾಂಡವರಂತೆ ಜಿಲ್ಲೆಯ ಅಭಿವೃದ್ಧಿಗೆ ಕೆಲಸ ಮಾಡುತ್ತಿದ್ದಾರೆ-ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರಾಜ್ಯದಲ್ಲಿ ಅಭಿವೃದ್ಧಿಯ ಸಂಗಮವಾಗಿದೆ. 2 ಸಾವಿರ ಕೋಟಿ ರೂ. ಮೊತ್ತದ ಅಭಿವೃದ್ಧಿ ಕೆಲಸವನ್ನು ವಿರೋಧ ಪಕ್ಷದ ಶಾಸಕರ ಕ್ಷೇತ್ರಕ್ಕೆ ಕಾಂಗ್ರೆಸ್ ಸರ್ಕಾರ ನೀಡುತ್ತಿದೆ ಎಂದರೆ ನಮ್ಮ ಜನಪರ ಧೋರಣೆಯನ್ನು ಎಲ್ಲರೂ ಅರ್ಥ ಮಾಡಿಕೊಳ್ಳಬೇಕು. ಈ ಕ್ಷೇತ್ರದ ಅಭಿವೃದ್ಧಿಗೆ ಇಡೀ ಸರ್ಕಾರವೇ ಬಂದಿದೆ ಎಂದರೆ ನಮಗೆ ಜನರ ಮೇಲಿನ ಪ್ರೀತಿಯೇ ಕಾರಣ ಎಂದು ಹೇಳಿದರು. ರಾಜ್ಯದ ಪ್ರತಿ ಮಹಿಳೆಯರು ಅವರ ಖಾತೆಗೆ ಹಣ ಬಂದಾಗಲೆಲ್ಲಾ ನಮ್ಮ ಸರ್ಕಾರವನ್ನು ನೆನಪಿಸಿಕೊಳ್ಳುತ್ತಾರೆ. ಯಾವುದೇ ಪುಣ್ಯ ಕ್ಷೇತ್ರಗಳಿಗೆ ಹೋದರೂ ನಮ್ಮ ಒಳಿತಿಗೆ ಪ್ರಾರ್ಥನೆ ಮಾಡುತ್ತಾರೆ. ಸಚಿವೆ ಲಕ್ಷ್ಮಿ ಹೆಬ್ಬಾಳಕರ್ ಅವರು ಬಂದಾಗ ಮಹಿಳೆಯರು ಗೌರವದಿಂದ ಅವರಿಗೆ ನಮಿಸಿದರು. ಮಹಿಳೆಯರ ಬದುಕಿನಲ್ಲಿ ನಾವು ತಂದಿರುವ ಬದಲಾವಣೆಯನ್ನು ಇಡೀ ದೇಶವೇ ನೋಡುತ್ತಿದೆ ಎಂದರು. ಸತ್ಯಕ್ಕೂ ಸುಳ್ಳಿಗೂ ಎಷ್ಟು ಅಂತರ ಎಂದು ಅಕ್ಬರ್ ಒಮ್ಮೆ ಬೀರಬಲ್ ಅವರನ್ನು ಕೇಳುತ್ತಾನೆ. ಆಗ ಬೀರಬಲ್ ನಾಲ್ಕು ಬೆರಳಿನ ಅಂತರ ಎಂದು ಹೇಳುತ್ತಾರೆ. ಕಣ್ಣಲ್ಲಿ ನೋಡುವುದು ಸತ್ಯ, 2ನೇ ಪುಟನೋಡಿ

## ಧರ್ಮಸ್ಥಳ ಬುರುಡೆ ಪ್ರಕರಣ ಚಿನ್ನಯ್ಯನಿಗೆ ಜಾಮೀನು

ಮಲ್ಲಮ್ಮ ನುಡಿ ವಾರ್ತೆ.

ಧರ್ಮಸ್ಥಳ : ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಧಾನ ಜಿಲ್ಲಾ ಸೆಷನ್ಸ್ ನ್ಯಾಯಾಲಯವು ಜಾಮೀನು ಮಂಜೂರು ಮಾಡಿದ್ದು, ಇಬ್ಬರು ಶ್ಯೂರಿಟಿಗಳೊಂದಿಗೆ 1 ಲಕ್ಷ ರೂ.ಗಳ ವೈಯಕ್ತಿಕ ಬಾಂಡ್ ಮೇಲೆ ಆರೋಪಿಯನ್ನು ಬಿಡುಗಡೆ ಮಾಡಲು ಆದೇಶಿಸಿದೆ. ಮಂಗಳೂರು: ಶಿವಮೊಗ್ಗ ಜೈಲಿನಲ್ಲಿರುವ ಧರ್ಮಸ್ಥಳ ಸಾಮೂಹಿಕ ಅಂತ್ಯಕ್ರಿಯೆ ಪ್ರಕರಣದ ಸಾಕ್ಷಿ, ದೂರುದಾರ 45 ವರ್ಷದ ಚಿನ್ನಯ್ಯನಿಗೆ ಸೋಮವಾರ ಮಂಗಳೂರು ನ್ಯಾಯಾಲಯ ಜಾಮೀನು ಮಂಜೂರು ಮಾಡಿದೆ. ಪ್ರಕರಣ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ, ತನಿಖಾ ವರದಿಯನ್ನು ಬೆಳ್ತಂಗಡಿ ನ್ಯಾಯಾಲಯಕ್ಕೆ ಸಲ್ಲಿಕೆ ಮಾಡಿದ ಬೆನ್ನಲ್ಲೇ ಚಿನ್ನಯ್ಯ ಜಾಮೀನಿ ಕೋರಿ ಅರ್ಜಿ ಸಲ್ಲಿಸಿದ್ದರು. 2ನೇ ಪುಟನೋಡಿ

## ಕ್ಯಾಂಟರ್ ಬೈಕ್ ಢಿಕ್ಕಿ ಓರ್ವ ಸಾವು

ಮಲ್ಲಮ್ಮ ನುಡಿ ವಾರ್ತೆ.

ಬಾಗಲಕೋಟೆ: ನ. ರಾಯಚೂರು - ಬೆಳಗಾವಿ ಹೆದ್ದಾರಿಯಲ್ಲಿ ಶಿರೂರ ಬಳಿ ರಸ್ತೆ ಅಪಘಾತದಲ್ಲಿ ಓರ್ವ ವ್ಯಕ್ತಿ ಸಾವನ್ನಪ್ಪಿದ ಘಟನೆ ಸೋಮವಾರ ಮಧ್ಯಾಹ್ನ ನಡೆದಿದೆ. ಕ್ಯಾಂಟರ್ ಮತ್ತು ಬೈಕ್ ಮಧ್ಯೆ ಢಿಕ್ಕಿ ಸಂಭವಿಸಿ ಈ ಘಟನೆ ನಡೆದಿದ್ದು, ಬೈಕ್ ಸವಾರ ಬಾಗಲಕೋಟೆ ನವನಗರದ ನಿವಾಸಿ ಮಹಮ್ಮದ ರಫಿಕ್ ಅಬ್ದುಲ್ ರೌಫ್ ಹವಾಲ್ದಾರ್ (34) ಸ್ಥಳದಲ್ಲಿ ಮೃತಪಟ್ಟಿದ್ದು, ಹಿಂಬದಿ ಸವಾರ ಗಾಯಗೊಂಡಿದ್ದಾನೆ. ಘಟನಾ ಸ್ಥಳಕ್ಕೆ ಬಾಗಲಕೋಟೆ ಗ್ರಾಮೀಣ ಪೊಲೀಸ್ ಠಾಣೆಯ ಸಿಪಿಐ ರಾಮಣ್ಣ ಬಿರಾದಾರ, ಪಿಎ ಗಿರೀಶ ಭೇಟಿ ನೀಡಿದ್ದರು. ಪ್ರಕರಣ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.

## ಕೇಂದ್ರ ಕಾರಾಗೃಹದಲ್ಲಿ ಮಾರಾಮಾರಿ

**ಮಲ್ಲಮ್ಮ ನುಡಿ ವಾರ್ತೆ**

ಕಲಬುರಗಿ: ನ, ನಗರದ ಕೇಂದ್ರ ಕಾರಾಗೃಹದಲ್ಲಿ ವಿಚಾರಣಾಧೀನ ಕೈದಿ ಮತ್ತು ವಾರ್ಡನ್ ನಡುವೆ ಮಾರಾಮಾರಿ ನಡೆದಿದೆ. ಬಿಡುಗಡೆಯಾಗುವ ದಿನವೇ ಪಿಎಐ ನೇಮಕ ಅಕ್ರಮದ ಕಿಂಪಿನ್ ಆರ್.ಡಿ. ಪಾಟೀಲ್ ವಾರ್ಡನ್ ಮೇಲೆ ಹಲ್ಲೆ ಮಾಡಿದ್ದಾರೆ. ಫರಹತಾಬಾದ್ ಪೊಲೀಸ್ ಠಾಣೆಯಲ್ಲಿ ದೂರು, ಪ್ರತಿದೂರು ದಾಖಲಾಗಿವೆ.

ಸುಪ್ರೀಂಕೋರ್ಟ್ ಮಧ್ಯಂತರ ಜಾಮೀನು ನೀಡಿದ ಹಿನ್ನೆಲೆಯಲ್ಲಿ ಆರ್ .ಡಿ. ಪಾಟೀಲ್ ಬಿಡುಗಡೆಗೆ ವಾರ್ಡನ್ ಶಿವಕುಮಾರ ನಿರಾಕರಿಸಿದ್ದರಿಂದ ಹಲ್ಲೆ ಮಾಡಿದ ಆರೋಪವಿದೆ. ಕರ್ತವ್ಯನಿರತ ವಾರ್ಡನ್ ಮೇಲೆ ಹಲ್ಲೆ ಮಾಡಿ ಸರ್ಕಾರಿ ಕೆಲಸಕ್ಕೆ ಅಡ್ಡಿಪಡಿಸಿ ಬೆದರಿಕೆ ಹಾಕಲಾಗಿದೆ ಎಂದು ಆಡಿ ಪಾಟೀಲ ವಿರುದ್ಧ ವಾರ್ಡನ್ ದೂರು ನೀಡಿದರೆ, ಇತ್ತ ಆರ್.ಡಿ.ಪಾಟೀಲ್ ಸಹ ವಾರ್ಡನ್ ಶಿವಕುಮಾರ ವಿನಾಕಾರಣ ಹಲ್ಲೆ ಮಾಡಿದ್ದಾರೆ ಎಂದು ಪ್ರತಿದೂರು ನೀಡಿದ್ದು, ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಆಡಿ ಪಾಟೀಲ ಮಗಳ ಮದುವೆ 2ನೇ ಪುಟನೋಡಿ

## ವಿಕಲಚೇತನರು ತಮ್ಮ ಪ್ರತಿಭೆ ಮುಖ್ಯ ವಾಹಿನಿಗೆ ತರಬೇಕು-ದಾಸ್ ಸೂರ್ಯವಂಶಿ





**ಮಲ್ಲಮ್ಮ ನುಡಿ ವಾರ್ತೆ**

ಬೀದರ: ನ,ಜಿಲ್ಲೆಯ ಎಲ್ಲಾ ವಿಕಲಚೇತನರು ವಿವಿಧ ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಮುಖ್ಯ ವಾಹಿನಿಗೆ ತರಬೇಕೆಂದು ಕರ್ನಾಟಕ ರಾಜ್ಯ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮದ ರಾಜ್ಯ ಆಯುಕ್ತರಾದ ದಾಸ್ ಸೂರ್ಯವಂಶಿ 2ನೇ ಪುಟನೋಡಿ

## ನಮ್ಮದು ಸರ್ವ ಧರ್ಮ, ಸರ್ವ ಜಾತಿಯವರನ್ನೂ ಒಳಗೊಳ್ಳುವ ಸರ್ಕಾರ. ಮುಖ್ಯಮಂತ್ರಿ ಸಿದ್ದರಾಮಯ್ಯ



**ಮಲ್ಲಮ್ಮ ನುಡಿ ವಾರ್ತೆ**

ಬೆಂಗಳೂರು: ನ, ಖಜಾನೆ ಖಾಲಿ ಎನ್ನುವ ವಿರೋಧ ಪಕ್ಷಗಳ ಸುಳ್ಳಿನ ಆರೋಪಕ್ಕೆ ಒಂದು ಲಕ್ಷ ಕೋಟಿ ಮೊತ್ತದ ಅಭಿವೃದ್ಧಿ ಕಾರ್ಯಗಳ ಮೂಲಕವೇ ಉತ್ತರಿಸಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಚಿಕ್ಕಬಳ್ಳಾಪುರ ಜಿಲ್ಲೆಯ ಹೈಟೆಕ್ ರೇಷ್ಮೆ ಗೂಡಿನ ಮಾರುಕಟ್ಟೆ, ಹೆಚ್.ಎನ್.ವ್ಯಾಲಿ 3ನೇ ಹಂತದ 164 ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಮತ್ತು ವಿವಿಧ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ಹಾಗೂ ವಿವಿಧ ಫಲಾನುಭವಿಗಳಿಗೆ ಸವಲತ್ತುಗಳ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಇಂದು ಉದ್ಘಾಟನೆಯಾದ ಹೈಟೆಕ್ ರೇಷ್ಮೆ ಗೂಡಿನ ಮಾರುಕಟ್ಟೆಯಿಂದಾಗಿ ಇಡೀ ರಾಜ್ಯದ ರೇಷ್ಮೆ ಬೆಳೆಗಾರರಿಗೆ ಅನುಕೂಲ ಆಗಲಿದೆ ಎಂದರು.

ಶಿಡ್ಲಘಟ್ಟ ಕ್ಷೇತ್ರದಲ್ಲಿ ಇಷ್ಟು ದೊಡ್ಡ ಮೊತ್ತದ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸುತ್ತಿರುವುದು ನಮ್ಮ ಸರ್ಕಾರದ ಅಭಿವೃದ್ಧಿ ಪರ್ವದ ವೇಗವನ್ನು ತೋರಿಸುತ್ತಿದೆ. ನಾವು ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತಿದ್ದೇವೆ. ಗ್ಯಾರಂಟಿ ಕಾರ್ಯಕ್ರಮಗಳಿಗೆ ಒಂದು ಲಕ್ಷ ಕೋಟಿಗೂ ಅಧಿಕ ಮೊತ್ತದ ಹಣ ಇದುವರೆಗೂ ತೆಗೆದಿಟ್ಟಿರುವುದು ಮಾತ್ರವಲ್ಲದೆ ಇಷ್ಟೆ ಮೊತ್ತದ ಅಭಿವೃದ್ಧಿ ಕಾರ್ಯಗಳನ್ನೂ ನಾವು ನಡೆಸುತ್ತಿದ್ದೇವೆ. ಇದಕ್ಕೆ ಇಂದು ಇಲ್ಲಿ ಉದ್ಘಾಟನೆಗೊಂಡ ಅಭಿವೃದ್ಧಿಯೂ ಸೇರಿದೆ ಎಂದರು.

**ದಕ್ಷಿಣ ಆಫ್ರಿಕಾ ವಿರುದ್ಧದ ದ್ವಿತೀಯ ಟೆಸ್ಟ್: ಮತ್ತೆ ಭಾರತೀಯ ಬ್ಯಾಟರ್ ಗಳ ವೈಫಲ್ಯ; 201 ರನ್ ಗಳಿಗೆ ಆಲೌಟ್**

## ಒಂದನೇ ಪುಟದಿಂದ

# ನಟ ಧರ್ಮೇಂದ್ರ ನಿಧನ

ಹಿಂದಿ ಚಿತ್ರರಂಗದ ಅತ್ಯಂತ ಯಶಸ್ವಿ ಮತ್ತು ಪ್ರೀತಿಯ ತಾರೆಗಳಲ್ಲಿ ಒಬ್ಬರಾಗಿದ್ದ ಧರ್ಮೇಂದ್ರ ಅವರ ಯುಗ ಅಂತ್ಯವಾಗಿದೆ. ಧರ್ಮೇಂದ್ರ ಅವರು 2024 ರಲ್ಲಿ ತೇರಿ ಬಾಟನ್ ಮೇ ಐಸಾ ಉಲ್ಝಾ ಜಿಯಾ ಚಿತ್ರದಲ್ಲಿ ಕೊನೆಯ ಬಾರಿಗೆ ಕಾಣಿಸಿಕೊಂಡರು ಚಿತ್ರದಲ್ಲಿ ನಟರಾದ ಶಾಹಿದ್ ಕಪೂರ್ ಮತ್ತು ಕೃತಿ ಸನೋನ್ ನಟಿಸಿದ್ದರು ಖ್ಯಾತ ನಿರ್ದೇಶಕ ಶ್ರೀರಾಮ್ ರಾಘವನ್ ನಿರ್ದೇಶನದ 'ಇಕ್ಕಿಸ್' ಚಿತ್ರದಲ್ಲಿ ನಟಿಸಬೇಕಾಗಿತ್ತು. ಈ ಚಿತ್ರದಲ್ಲಿ ಅಗಸ್ತ್ಯ ನಂದ ಮತ್ತು ಸಿಮರ್ ಭಾಟಿಯಾ ನಟಿಸಿದ್ದಾರೆ. ಈ ಚಿತ್ರ ಪರಮ ವೀರ ಚಕ್ರ ಪುರಸ್ಕೃತ ಕಿರಿಯ ಅರುಣ್ ಖೇತರ್ಪಾಲ್ ಅವರ ಜೀವನವನ್ನು ಆಧರಿಸಿದ ಯುದ್ಧ ಚಿತ್ರವಾಗಿದೆ. ಈ ಚಿತ್ರದಲ್ಲಿ ಜೈದೀಪ್ ಅಹ್ಲಾವತ್ ಮತ್ತು ಸಿಕಂದರ್ ಖೇರ್ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ ಮತ್ತು ಡಿಸೆಂಬರ್‌ನಲ್ಲಿ ಬಿಡುಗಡೆಯಾಗಲಿದೆ.

ಭಾರತೀಯ ಸಿನಿಮಾ ಇತಿಹಾಸದಲ್ಲಿ ಅತ್ಯಂತ ಶ್ರೇಷ್ಠ, ಅತ್ಯಂತ ಸುಂದರ ಮತ್ತು ವಾಣಿಜ್ಯಕವಾಗಿ ಅತ್ಯಂತ ಯಶಸ್ವಿ ಚಲನಚಿತ್ರ ತಾರೆಯರಲ್ಲಿ ಒಬ್ಬರೆಂದು ಪರಿಗಣಿಸಲ್ಪಟ್ಟ ಧರ್ಮೇಂದ್ರ, ಆರು ದಶಕಗಳಿಗೂ ಹೆಚ್ಚು ಕಾಲದ ಸಿನಿಮೀಯ ವೃತ್ತಿಜೀವನವನ್ನು ಹೊಂದಿದ್ದರು; ಅವರು 300 ಕ್ಕೂ ಹೆಚ್ಚು ಚಿತ್ರಗಳಲ್ಲಿ ಕೆಲಸ ಮಾಡಿದ್ದಾರೆ.

ಹಿಂದಿ ಚಿತ್ರರಂಗದಲ್ಲಿ ಅತಿ ಹೆಚ್ಚು ಹಿಟ್ ಚಿತ್ರಗಳಲ್ಲಿ ನಟಿಸಿದ ದಾಖಲೆ ಧರ್ಮೇಂದ್ರ ಅವರ ಹೆಸರಿನಲ್ಲಿದೆ. ಅವರಿಗೆ 2012 ರಲ್ಲಿ ಪದ್ಮಭೂಷಣ ಪ್ರಶಸ್ತಿ ನೀಡಿ ಗೌರವಿಸಲಾಗಿತ್ತು. ಧರ್ಮೇಂದ್ರ 1960 ರಲ್ಲಿ ದಿಲ್ ಭಿ ತೇರಾ ಹಮ್ ಭಿ ತೇರೆ ಚಿತ್ರದ ಮೂಲಕ ಪಾದಾರ್ಪಣೆ ಮಾಡಿದ್ದರು.ಮೊದಲ ಬಾರಿಗೆ 1960 ರ ದಶಕದ ಮಧ್ಯಭಾಗದಲ್ಲಿ ಆಯೀ ಮಿಲನ್ ಕಿ ಬೇಲಾ, ಫೂಲ್ ಔರ್ ಪತ್ತರ್ ಮತ್ತು ಆಯೆ ದಿನ್ ಬಹರ್ ಕೆ ಮುಂತಾದ ಚಲನಚಿತ್ರಗಳಿಗಾಗಿ ಜನಪ್ರಿಯತೆಯನ್ನು ಗಳಿಸಿದರು. 1960 ರ ದಶಕದ ಅಂತ್ಯದಿಂದ 1980 ರ ದಶಕದವರೆಗೆ ಹಲವಾರು ಯಶಸ್ವಿ ಹಿಂದಿ ಚಲನಚಿತ್ರಗಳಲ್ಲಿ ನಟಿಸಿದ್ದಾರೆ,ಆಂಖೇನ್, ಶಿಕಾರ್, ಆಯಾ ಸಾವನ್ ಝೂಮ್ ಕೆ, ಜೀವನ್ ಮೃತ್ಯು, ಮೇರಾ ಗಾಂವ್ ಮೇರಾ ದೇಶ್, ಸೀತಾ ಔರ್ ಗೀತಾ, ರಾಜಾ ಜಾನಿ, ಜುಗ್ನು, ಯಾದೋನ್ ಕಿ ಬಾರಾತ್, ದೋಸ್ತ್, ಶೋಲೆ, ಧರ್ಮ್ವೀರ್, ಚರಸ್, ಧಾರಾಸ್, ಚರಾಸ್, ಚರಾಸ್ ಹುಕುಮತ್, ಆಗ್ ಹಿ ಆಗ್, ಎಲಾನ್-ಇ-ಜಂಗ್, ತಹಲ್ಕಾ, ಅನ್ವಧ್, ಬಂದಿನಿ, ಹಕೀಕತ್, ಅನುಪಮಾ, ಮಮತಾ, ಮಜ್ಲಿ ದೀದಿ, ಸತ್ಯಕಾಮ್, ನಯಾ ಜಮಾನಾ, ಸಮಾಧಿ, ರೇಶಮ್ ಕಿ ಡೋರಿ, ಚುಪ್ಕೆ ಚುಪ್ಕೆ, ದಿಲ್ಲಗಿ, ದಿ ಬರ್ನಿಂಗ್ ಟ್ರೈನ್, ಘಜಾಬ್ ಮತ್ತು ದಿಯಾರ್ ಹಜಾಬ್. ಸೇರಿದಂತೆ ಹಲವು ಚಿತ್ರಗಳಲ್ಲಿ ನಟಿಸಿದ್ದಾರೆ

# ಮೌಲ್ಯದ ನಗನಾಣ್ಯ ಕಳವು

4 ಜೊತೆ ಬೆಂಡೋಲೆಗಳು, 12 ಸಾವಿರ ರೂ.ಮೌಲ್ಯದ 120 ಗ್ರಾಂ. ಬೆಳ್ಳಿಯ ಆರತಿ ಪಂಚಪಳಾ, 10 ಸಾವಿರ ರೂ.ಮೌಲ್ಯದ 100 ಗ್ರಾಂ.ಬೆಳ್ಳಿ ಸಮೆ, 60 ಸಾವಿರ ರೂ.ನಗದು ಸೇರಿ 20.60 ಲಕ್ಷ ರೂ.ಮೌಲ್ಯದ ನಗನಾಣ್ಯ ದೋಚಿಕೊಂಡು ಹೋಗಿದ್ದಾರೆ. ಈರಣ್ಣಾ ಪಟ್ಟೇದಾರ ಅವರು ಮನೆಗೆ ಬೀಗ ಹಾಕಿಕೊಂಡು ಬಾಗಲಕೋಟೆಯಲ್ಲಿರುವ ಮಗಳ ಮನೆಗೆ ಹೋದ ವೇಳೆ ಮನೆ ಕಳ್ಳತನವಾಗಿದೆ ಎಂದು ತಿಳಿದುಬಂದಿದೆ. ಈ ಸಂಬಂಧ ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## ಹಾಲಿನಷ್ಟೆ ಶುದ್ಧ : ರಾಜಶೇಖರ ಪಾಟೀಲ್

ಜೀವನ ನಡೆಸಬೇಕು ಎಂದರು.

ಚಂದನಹಳ್ಳಿ ಗ್ರಾಮದಲ್ಲಿ ಬೊಮ್ಮಗೊಂಡೇಶ್ವರರ ನೂತನ ಮೂರ್ತಿ ಪ್ರತಿಷ್ಠಾಪನೆಗೆ ಸಂಪೂರ್ಣ ಸಹಕಾರ ನೀಡಿದ ಶಿವಕುಮಾರ ಮೇತ್ರೆಗೆ ಮಾಜಿ ಸಚಿವ ರಾಜಶೇಖರ ಪಾಟೀಲ್ ಹಾಗೂ ವಿಧಾನ ಪರಿಷತ್ ಶಾಸಕ ಡಾ. ಚಂದ್ರಶೇಖರ ಪಾಟೀಲ್ ವಿಶೇಷವಾಗಿ ಸನ್ಮಾನಿಸಿ, ಅಭಿನಂಧಿಸಿದರು.

> ಕೋಟ್ : ಚಂದನಹಳ್ಳಿ ಗ್ರಾಮದ ಅಭಿವೃದ್ಧಿಗೆ ಈ ಹಿಂದೆ ನನ್ನ ಆಡಳಿತ ಅವಧಿಯಲ್ಲಿ ಸಾಕಷ್ಟು ಯೋಜನೆಗಳನ್ನು ನೀಡಿದ್ದೇನೆ. ಅದರಂತೆಯೇ ಚಂದನಹಳ್ಳಿಯಲ್ಲಿ ವಿಶ್ವಗುರು ಬಸವಣ್ಣನವರ ನೂತನ ಮೂರ್ತಿ ಪ್ರತಿಷ್ಠಾನೆ ಮಾಡುವುದ್ದಕ್ಕೆ ವಯಕ್ತಿಕವಾಗಿ 1 ಲಕ್ಷ ನೀಡಲಾಗುವುದು.
>
> **ರಾಜಶೇಖರ ಪಾಟೀಲ್**
>
> **ಮಾಜಿ ಸಚಿವ, ಹುಮನಾಬಾದ**

ಈ ಸಂದರ್ಭದಲ್ಲಿ ಕನಕಗುರು ಪೀಠದ ಚಿಕ್ಕಬೀರಲಿಂಗದೇವರು, ಉಚ್ಛಾ ಆಶ್ರಮದ ಗೋಪಾಲ ಮುತ್ಯಾ, ಶಾಸಕ ಡಾ. ಸಿದ್ದಲಿಂಗಪ್ಪ ಪಾಟೀಲ್, ವಿಧಾನ ಪರಿಷತ್ ಶಾಸಕ ಡಾ. ಚಂದ್ರಶೇಖರ ಪಾಟೀಲ್, ಗ್ರಾ.ಪಂ. ಅಧ್ಯಕ್ಷೆ ತೇಜಮ್ಮ ಹೈಬತ್ತಿ, ಶಿವಕುಮಾರ ಮೇತ್ರೆ, ಗ್ರಾ.ಪಂ. ಉಪಾಧ್ಯಕ್ಷ ವಿಠಲ ನಿಂಗಗೊಂಡ, ಮಲ್ಲಿಕಾರ್ಜುನ್ ಮಾಳಶಟ್ಟಿ, ಉಮೇಶ ಜಮಗಿ, ಪದ್ಮಾಕರ ಪಾಟೀಲ್, ಸಂಬಾಜಿ ಪಾಟೀಲ್, ಪ್ರಕಾಶ ಪಾಟೀಲ್, ಸತೀಷ ರಾಂಪೂರೆ, ಅಶೋಕ ಚಳಕಾಪೂರೆ, ಅನಿಲ್ ಕಬೀರಾಬಾದೆ, ಶ್ರೀನಿವಾಸ ಮೇತ್ರೆ, ಚಂದ್ರಕಾಂತ ಸ್ವಾಮಿ, ಪವನಗೊಂಡ, ಸೂರ್ಯಕಾಂತ ಪಾಟೀಲ್, ಕೆ.ಡಿ. ಗಣೇಶ, ಸಂಜೀವಕುಮಾರ ವಡ್ಡನಕೇರಾ, ಅಶೋಕಕುಮಾರ ಚಳಕಾಪೂರೆ, ಸಚೀನ ಕಲ್ಲೂರ, ಬಾಲಾಜಿ ಕರನಾಗೆ ಸೇರಿ ಅನೇಕರಿದ್ದರು.

# ಕೆರೆಗಳಿಗೆ ನೀರು ನಮ್ಮ ಆರನೇ ಗ್ಯಾರಂಟಿ

ಕಿವಿಯಲ್ಲಿ ಕೇಳುವುದು ಸುಳ್ಳು. ಸಿದ್ದರಾಮಯ್ಯ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ 2 ಸಾವಿರ ಕೋಟಿ ಮೊತ್ತವನ್ನು ನೀಡಿದೆ. ಇದಕ್ಕೆ ನಿಮ್ಮೆಲ್ಲರ ಕಣ್ಣುಗಳೇ ಸಾಕ್ಷಿ ಎಂದು ಹೇಳಿದರು.

2027 ಕ್ಕೆ ಜಿಲ್ಲೆಗೆ ಎತ್ತಿನಹೊಳೆ ನೀರು:

ಸಚಿವರಾದ ಕೆ.ಎಚ್.ಮುನಿಯಪ್ಪ ಅವರು, ಸುಧಾಕರ್ ಅವರು ಹಾಗೂ ಕೃಷ್ಣಬೈರೇಗೌಡರು ನನ್ನ ಬೆನ್ನತ್ತಿದ್ದು 2027 ರ ಹೊತ್ತಿಗೆ ಎರಡು ಜಿಲ್ಲೆಗಳಿಗೆ ಎತ್ತಿನಹೊಳೆ ನೀರು ಹರಿಸಲೇಬೇಕು ಎಂದು ಪಟ್ಟು ಹಿಡಿದಿದ್ದಾರೆ. ಇದಕ್ಕೆ ಪೂರಕವಾಗಿ ನಾವು ಕೆಲಸ ಮಾಡುತ್ತಿದ್ದೇವೆ. ನಾವು ಪರ್ಯಾಯವಾಗಿ ಕಂದಾಯ ಭೂಮಿ ನೀಡಿದ್ದರೂ ಕೇಂದ್ರ ಪರಿಸರ ಇಲಾಖೆ ಅರಣ್ಯ ಭೂಮಿ ಬಳಕೆಗೆ ಅನುಮತಿ ನೀಡುತ್ತಿಲ್ಲ ಎಂದರು. ಕೆ.ಸಿ.ವ್ಯಾಲಿ ಯೋಜನೆಯ ಮೊದಲ ಹಂತದಲ್ಲಿ 143 ಕೆರೆ ತುಂಬಿಸಲಾಗಿದೆ. 2ನೇ ಹಂತದಲ್ಲಿ 272 ಕೆರೆ ಭರ್ತಿ ಮಾಡುತ್ತಿದ್ದೇವೆ. ಈ ಯೋಜನೆಯನ್ನು ವಿಶ್ವಬ್ಯಾಂಕ್ ಕೂಡ ಹೊಗಳಿದೆ. ಎಚ್.ಎನ್.ವ್ಯಾಲಿ ಯೋಜನೆಯ ಮೊದಲ ಹಂತದಲ್ಲಿ 65 ಕೆರೆಗಳನ್ನು ತುಂಬಿಸುವ ಕೆಲಸ ಮಾಡಿದ್ದೇವೆ. ಬೆಂಗಳೂರಲ್ಲಿ ಕೆರೆಗಳ ಇಂಟರ್ ಲಿಂಕ್ ಮಾಡೋಕೆ ಅಂತ 1700 ಕೋಟಿ ರೂಪಾಯಿ ಮೊತ್ತದ ಯೋಜನೆ ಕೈಗೆತ್ತಿಕೊಳ್ಳಲಾಗಿದೆ. ನೆಲಮಂಗಲದಲ್ಲಿ ವೃಷಭಾವತಿಯಿಂದ 70 ಕೆರೆ ತುಂಬಿಸಲಾಗುತ್ತಿದೆ ಎಂದರು.

# ಚಿನ್ನಯ್ಯನಿಗೆ ಜಾಮೀನು

ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಧಾನ ಜಿಲ್ಲಾ ಸೆಷನ್ಸ್ ನ್ಯಾಯಾಲಯವು ಜಾಮೀನು ಮಂಜೂರು ಮಾಡಿದ್ದು, ಇಬ್ಬರು ಶ್ಯೂರಿಟಿಗಳೊಂದಿಗೆ 1 ಲಕ್ಷ ರೂ.ಗಳ ವೈಯಕ್ತಿಕ ಬಾಂಡ್ ಮೇಲೆ ಆರೋಪಿಯನ್ನು ಬಿಡುಗಡೆ ಮಾಡಲು ಆದೇಶಿಸಿದೆ.

ಆರೋಪಿ ಇದೇ ರೀತಿಯ ಅಪರಾಧವನ್ನು ಮತ್ತೆ ಮಾಡಬಾರದು ಮತ್ತು ಪರಾರಿಯಾಗಬಾರದು, ಬೆದರಿಕೆ, ಪ್ರಚೋದನೆಗಳ ಮೂಲಕ ಪ್ರಾಸಿಕ್ಯೂಷನ್ ಸಾಕ್ಷಿಗಳನ್ನು ಹಾಳು ಮಾಡಬಾರದು ಮತ್ತು ಪ್ರಾಸಿಕ್ಯೂಷನ್ ಸಾಕ್ಷ್ಯಗಳನ್ನು ನಾಶಪಡಿಸಬಾರದು ಎಂಬ ಷರತ್ತುಗಳನ್ನು ಕೋರ್ಟ್ ವಿಧಿಸಿದೆ. ಅಲ್ಲದೆ, ಆರೋಪಿ ತನಿಖಾ ಅಧಿಕಾರಿಗೆ ಲಭ್ಯವಾಗಬೇಕು ಮತ್ತು ತನಿಖೆಗೆ ಸಹಕರಿಸಬೇಕು ಎಂದು ಸೂಚಿಸಿದೆ.

# ಕೇಂದ್ರ ಕಾರಾಗೃಹದಲ್ಲಿ ಮಾರಾಮಾರಿ

ಹಿನ್ನೆಲೆಯಲ್ಲಿ ಸುಪ್ರೀಂಕೋರ್ಟ್ ಮೂರು ವಾರದ ಮಧ್ಯಂತರ ಜಾಮೀನು ಮಂಜೂರು ಮಾಡಿತ್ತು. ಆದೇಶದ ದಿನ ಬಿಡುಗಡೆ ಮಾಡುವ ವಿಚಾರದಲ್ಲಿ ಗಲಾಟೆ ನಡೆದಿದೆ.

## ವಾಹಿನಿಗೆ ತರಬೇಕು-ದಾಸ್ ಸೂರ್ಯವಂಶಿ

ಅವರು ತಿಳಿಸಿದರು ಅವರು ಸೋಮವಾರ ವಿಶ್ವ ವಿಕಲಚೇತನರ ದಿನಾಚರಣೆ ಪ್ರಯುಕ್ತ ಜಿಲ್ಲಾ ನೆಹರು ಕ್ರೀಡಾಂಗಣ ಬೀದರದಲ್ಲಿ ಹಮ್ಮಿಕೊಂಡಿದ್ದ ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಅಂಗವಿಕಲರಿಗೆ ಸರಿಯಾದ ಹಾಗೂ ಸಮರ್ಪಕ ಅವಕಾಶವನ್ನು ಒದಗಿಸಿಕೊಟ್ಟಾಗ ಮಾತ್ರ ಅವರು ಸಮಾಜದ ಮುಖ್ಯ ವಾಹಿನಿಗೆ ಬರಲು ಸಾಧ್ಯ ಎಂದರು. ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸುಭಾಷ ರತ್ನ ಅವರು ಮಾತನಾಡಿ, ವಿಕಲಚೇತನರು (ಅಂಗವಿಕಲರು) ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಿ ಯಶಸ್ವಿಗೊಳಿಸಲು ಹಾಗೂ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು. ಈ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮದಲ್ಲಿ ಬಹುಮಾನ ಹಾಗೂ ಪ್ರಶಸ್ತಿ ವಿತರಣೆ ಮಾಡಲಾಗುವುದು ಎಂದು ತಿಳಿಸಿದರು.

# ಜೀವನದಲ್ಲಿ ಮಾಡುವ ಕಾರ್ಯಕ್ಕೆ ದೈವ ಕೃಪೆ ಇರಲಿ: ನಾಗಯ್ಯಾ ಸ್ವಾಮಿಗಳು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ನಾವು ಜೀವನದಲ್ಲಿ ಮಾಡುವ ಯಾವುದೇ ಒಳ್ಳೆಯ ಕಾರ್ಯವನ್ನು ಆರಂಭಿಸುವಾಗ ದೇವರ ಸ್ಮರಣೆ ಅತ್ಯಗತ್ಯ ಎಂದು ಶಿವಾನಂದ ಕೈಲಾಸ ಆಶ್ರಮ ಹಾಗು ಕಡಗಂಚಿಯ ಶ್ರೀ ನಾಗಯ್ಯಾ ಸ್ವಾಮಿಗಳು ಪ್ರತಿಪಾದಿಸಿದರು.



ತಾಲೂಕಿನ ಬ್ಯಾಲಹಳ್ಳಿ(ಕೆ) ಗ್ರಾಮದ ಶ್ರೀ ಶಿವಾನಂದ ಕೈಲಾಸ ಆಶ್ರಮದಲ್ಲಿ ಸೋಮವಾರ ನಡೆದ ಸದ್ಗುರು ಶ್ರೀ ಸಿದ್ಧಾರೂಢ ಮಹಾಸ್ವಾಮಿಗಳ ಮೂರ್ತಿ ಪ್ರತಿಷ್ಠಾಪನೆಯ 14ನೇ ವಾರ್ಷಿಕೋತ್ಸವ, ಶ್ರೀ ಶಿವಾನಂದ ಮಹಾಸ್ವಾಮಿಗಳ 33ನೇ, ಶ್ರೀ ಸಚ್ಚಿದಾನಂದ ಮಹಾಸ್ವಾಮಿಗಳ 29ನೇ ಮತ್ತು ಶ್ರೀ ಗುರುಲಿಂಗ ಮಹಾಸ್ವಾಮಿಗಳ 6ನೇ ಪುಣ್ಯಾರಾಧನೆ ನಿಮಿತ್ಯ ಆಯೋಜಿಸಿದ್ದ ನಾನು ಆರಂಭವ ಮಾಡುವೆನಯ್ಯ ವಿಷಯದ ಮೇಲಿನ ಪ್ರವಚನ ಕಾರ್ಯಕ್ರಮದ ಸಾನಿಧ್ಯವಹಿಸಿ ಅವರು ಮಾತನಾಡಿದರು.

ಅಣ್ಣ ಬಸವಣ್ಣವನರ ಪ್ರಕಾರ ನಾವು ಮಾಡುವ ಎಲ್ಲಾ ಕೆಲಸವೂ ದೇವರ ಸಹಾಯದಿಂದಲೇ ಸಾಧ್ಯ, ನಾನು ಏನೇ ಮಾಡಿದರೂ ದೇವರ ದಯದಿಂದ ಮಾತ್ರ. ಅದಕ್ಕೆ ಒಳ್ಳೆಯ ಕಾರ್ಯ ಮಾಡುವಾಗ ದೇವರ ದಯ ಮತ್ತು ದೇವರ ನೆಹನಿನಲ್ಲಿ ಮಾಡಬೇಕು ಅಂದಾಗ ಮಾತ್ರ ನಮ್ಮ ಕಾರ್ಯಕ್ಕೆ ಯಶಸ್ಸು ಖಂಡಿತಾ ಸಾಧ್ಯ ಎಂದು ಹೇಳಿದರು.

ಹೊಚಕನಳ್ಳಿ, ಶಕ್ಕರಗಂಜವಾಡಿಯ ಗುರುಲಿಂಗ ಆನಂದ ಆಶ್ರಮದ ಶ್ರೀ ಗುಡಪ್ಪ ಶರಣರು ಮಾತನಾಡಿ, ಮಾನವನು ದೇವರನ್ನು ಬೇರೆಡೆ ಹುಡುಕದೇ ತನ್ನ ಮನಸ್ಸನ್ನು ಶುದ್ಧಪಡಿಸಿಕೊಂಡು, ಸತ್ಯಶುದ್ಧ ಮಾರ್ಗದಲ್ಲಿ ನಡೆಯಬೇಕು. ಸತ್ಯಶುದ್ಧ ಮಾರ್ಗದಲ್ಲಿ ನಡೆಯುತ್ತಾ ಜೀವನ ಸಾಗಿಸಬೇಕು ಎಂದು ಹೇಳಿದರು.

ಹಿರೇಮಠ ಸಿದ್ದಾಪೂರದ ಶ್ರೀ ಹಾವಯ್ಯಾ ಸ್ವಾಮಿಗಳು, ಸಂಗೋಳಗಿಯ ಶ್ರೀ ಶರಣಪ್ಪ ಸ್ವಾಮಿ, ರಮೇಶ ಶಕ್ಕರಗಂಜವಾಡಿ, ಶರಣಯ್ಯಾ ಸ್ವಾಮಿ ಮಳಚಾಪೂರ ಇವರಿಂದ ನಾನು ಆರಂಭ ಮಾಡುವೆನಯ್ಯ ವಿಷಯದ ಮೇಲೆ ಪ್ರವಚನ ನಡೆಯಿತು. ಇದೇ ವೇಳೆ ಸುಮಂಗಲೆಯರಿಂದ ಶ್ರೀ ಸಿದ್ಧಾರೂಢರ ತೊಟ್ಟಿಲು ಕಾರ್ಯಕ್ರಮ ಪಲ್ಲಕ್ಕಿ ಉತ್ಸವ ನಡೆಯಿತು.

ಕಾರ್ಯಕ್ರಮದಲ್ಲಿ ಪ್ರಮುಖರಾದ ಓಂಶೆಟ್ಟಿ ಮರಕಲೆ, ಶಿವಾನಂದ ಶಶಿಧರ ಪಾಟೀಲ, ಬಾಬುರವ ಹಣಮಂತರಾವ, ಶಾಂತಮ್ಮ ಕಾಶಿನಾಥರಾವ, ಕಾವೇರಿ ಹಣಮಂತರಾವ ಪಾಟೀಲ, ಶಾರದಾಬಾಯಿ ಶರಣಪ್ಪ ಜ್ಯಾತೆ ಉಪಸ್ಥಿತರಿದ್ದರು.

ತುಕಾರಾಮ ಮರಖಲ, ಹಣಮಂತರಾವ ಪಾಟೀಲ ನೀಲಮನಳ್ಳಿಯವರಿಂದ ಸಂಗೀತ ಸೇವೆ ನಡೆಯಿತು. ಸಂಗೀತಾ ಮಹೇಶ ಮರ್ಜಾಪೂರೆ ಸ್ವಾಗತಿಸಿದರು. ಶಿವಕುಮಾರ ಅಟಂಗೆ ನಿರೂಪಿಸಿದರು. ಓಂಶೆಟ್ಟೆಪ್ಪ ಮರಕಲೆ ವಂದಿಸಿದರು.

# ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಸಂಜು ಕುಮಾರ್ ಹಂಚಟೆ ರವರಿಗೆ ಸನ್ಮಾನ



ಬೀದರ್ :ಬೀದರ್ ಜಿಲ್ಲಾ ವಕೀಲರ ಸಂಘಕ್ಕೆ ಮೊಟ್ಟಮೊದಲ ಬಾರಿಗೆ ಜಿಲ್ಲಾ ಆಡಳಿತಾತ್ಮಕ ನ್ಯಾಯಮೂರ್ತಿಯಾಗಿ ಆಗಮಿಸಿದಂತ ಗೌರವಾನ್ವಿತ ಕರ್ನಾಟಕ ಉಚ್ಚನ್ಯಾಯಾಲಯದ ನ್ಯಾಯಮೂರ್ತಿ ಸಂಜು ಕುಮಾರ್ ಹಂಚಾಟೆ, ರವರಿಗೆ ಜಿಲ್ಲಾ ವಕೀಲರ ಸಂಘ ವತಿಯಿಂದ ಸ್ವಾಗತ ಮತ್ತು ಸನ್ಮಾನವನ್ನು ಹಮ್ಮಿಕೊಳ್ಳಲಾಯಿತು,

ಸಂಘದ ಅಧ್ಯಕ್ಷರಾದ ಸಮ್ಮುಕಯ್ಯ ಬಿ ಸ್ವಾಮಿ ಮರುಕುಂದ ಹಾಗೂ ಉಪಾಧ್ಯಕ್ಷರು ಶಿವಕುಮಾರ್ ಪಾಟೀಲ್, ಕಾರ್ಯದರ್ಶಿ ಧನರಾಜ್ ಬಿರಾದಾರ್ ಭಜರಂಗ್ ಕಾಶಂಪುರ್, ಜೈ ಶ್ರೀ ಪಾಟೀಲ್ ಸಂಘದ, ಹಾಗೂ ಬೀದರ್ ನ ಪ್ರಧಾನ ಜಿಲ್ಲಾ ನ್ಯಾಯಾಧೀಶರಾದಂತಹ ಸಯ್ಯದ್ ಬಿಳಿಗೂರ ರೈಮಾನ್, ಹಾಗೂ ಹಿರಿಯ ವಕೀಲರು ಸಹ ಸಭೆಯಲ್ಲಿ ಹಾಜರಿದ್ದರು.

## ಪ್ರಗತಿ ಆರೋಗ್ಯ ಮತ್ತು ಶಿಕ್ಷಣ ಸಂಸ್ಥೆ ಬೀದರ

# ಸಾಲು ಮರದ ತಿಮ್ಮಕ್ಕಳ ಸಾಧನೆಯು ಅದ್ಭುತವಾದದ್ದು : ಪರಿಮಳ ದೇಶಪಾಂಡೆ

ಮಲ್ಲಮ್ಮ ನುಡಿ ವಾರ್ತೆ

ಬೀದರ್:ಕರ್ನಾಟಕದಲ್ಲಿ ದಿವಂಗತ ಸಾಲುಮರದ ತಿಮ್ಮಕ್ಕನವರು ಸಲ್ಲಿಸಿರುವ ಸೇವೆಯು ಅಪ್ರತಿಮವಾಗಿದ್ದು ಪ್ರಶಂಸನೀಯವಾಗಿದೆ ಎಂದು ಹೈದ್ರಾಬಾದ ಆಕಾಶವಾಣಿಯ ಕಸ್ತೂರಿ ಬಾನುಲಿ ಕೇಂದ್ರದ ಅಧಿಕಾರಿ ಪರಿಮಳ ದೇಶಪಾಂಡೆಯವರು ಅಭಿಪ್ರಾಯ ಪಟ್ಟರು. ಅವರು ಇಂದು ಹೈದ್ರಾಬಾದ ಆಕಾಶವಾಣಿ ಕೇಂದ್ರದಲ್ಲಿ, ಪರಿಸರ ಜಾಗೃತಿ ಹಾಗೂ ಮಾಲಿನ್ಯ ನಿಯಂತ್ರಣ ಅಭಿಯಾನದಲ್ಲಿ, ದಿವಂಗತ""ತಿಮ್ಮಕ್ಕ ಜೀವನ"ಕುರಿತ ಚರ್ಚೆಯಲ್ಲಿ ಮಾತನಾಡುತ್ತಿದ್ದರು.



ತಿಮ್ಮಕ್ಕ ನವರು 385 ಸಾಲು ಸಾಲು ಆಲದ ಮರದ ಸಸಿಗಳನ್ನು ನೆಟ್ಟು, ಅವುಗಳ ಪಾಲನೆ ಪೋಷಣೆ ಮಾಡಿ ಅವುಗಳ ಮೇಲ್ವಿಚಾರಣೆಯನ್ನು ಸರಕಾರಕ್ಕೆ ಒಪ್ಪಿಸಿರುವುದು ಶ್ಲಾಘನೀಯ ವಾಗಿದೆ ಎಂದು ತಿಳಿಸಿದರು.

ಬೀದರ್ ಪಶು ವೈದ್ಯಕೀಯ ವಿಶ್ವ ವಿದ್ಯಾಲಯದಲ್ಲಿ ನಿವೃತ್ತ ಉಪ ಹಣಕಾಸು ಅಧಿಕಾರಿಯಾದ ವೀರಭದ್ರಪ್ಪ ಉಪ್ಪಿನ ರವರು ಮಾತನಾಡಿ, ತಿಮ್ಮಕ್ಕ ನವರು ಪರಿಸರಕ್ಕಾಗಿ ತಮ್ಮ ಜೀವನವನ್ನೇ ಮುಡಿಪಾಗಿ ಟ್ಟಿರುವ ಕ್ರಮವನ್ನು ಪರಿಗಣಿಸಿ, ಕೇಂದ್ರ ಹಾಗೂ ರಾಜ್ಯ ಸರಕಾರಗಳು ಅವರಿಗೆ ವಿವಿಧ ಪ್ರಶಸ್ತಿ ಪುರಸ್ಕಾರ ಗಳನ್ನು ನೀಡಿರುವುದು ಸ್ವಾಗತಾರ್ಹವಾಗಿದ್ದು, ತಿಮ್ಮಕ್ಕನವರ ಸಂದೇಶಗಳನ್ನು ಪಕ್ಕದ ತೆಲಂಗಾಣಾ ರಾಜ್ಯಕ್ಕೂ ಮುಟ್ಟಿಸಬೇಕೆನ್ನುವ ಉದ್ದೇಶದಿಂದ ಹೈದ್ರಾಬಾದಿನ ಆಕಾಶವಾಣಿಯ ಕಸ್ತೂರಿ ಬಾನುಲಿ ಕೇಂದ್ರದಲ್ಲಿ ರೇಡಿಯೋ ಭಾಷಣದ ಧ್ವನಿ ಮುದ್ರಿಸಲಾಯಿತು ಎಂದು ನುಡಿದರು. ಮಹಿಳೆಯರು ಮಾಡುವ ಕೆಲಸಗಳು ಅಚ್ಚುಕಟ್ಟಾಗಿರುತ್ತವೆ.

ಅದ್ದರಿಂದ ತಿಮ್ಮಕ್ಕನವರು ಗಿಡ-ಮರ ಬೆಳೆಸುವುದು, ಪರಿಸರದ ಕಾಳಜಿಯ ಬಗ್ಗೆ ಕೈಕೊಂಡ ಚಟುವಟಿಕೆಗಳನ್ನು ಮಹಿಳೆಯರು ಅನುಸರಿಸಿ, ಅವುಗಳನ್ನು ಮುಂದುವರಸಲು ಅಭಿಯಾನ ಹಮ್ಮಿಕೊಳ್ಳಬೇ ಕೆಂದು ಬ್ರಿಮ್ಸ್ ನಲ್ಲಿ ಪ್ರ. ಶಾ. ತಂತ್ರಜ್ಞ ಅಧಿಕಾರಿ ಅರವಿಂದ ಕುಲಕರ್ಣಿ ಯವರು ಕರೆ ನೀಡಿದರು.

ಧ್ವನಿ ಮುದ್ರಣದ ಆರಂಭದಲ್ಲಿ, ತಿಮ್ಮಕ್ಕನವರ ಸ್ಮರಣೆಯಲ್ಲಿ ದೇಶಪಾಂಡೆ ಯವರಿಗೆ ಸಸಿ ನೀಡಲಾಯಿತು. ಆಕಾಶವಾಣಿ ಕೇಂದ್ರದ ಸಿಬ್ಬಂದಿಗಳು ಹಾಜರಿದ್ದರು.

# ಗ್ಯಾರಂಟಿ ಅನುಷ್ಠಾನ ಸಮಿತಿ ವತಿಯಿಂದ ಜಾಗೃತಿ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ್: ರಾಜ್ಯ ಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ *ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ* ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಕಾಡವಾದ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಖಾಶಂಪೂರ್. ಪಿ ಗ್ರಾಮದಲ್ಲಿ* ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ, ಅನ್ನಭಾಗ್ಯ ಯೋಜನೆ, ಯುವನಿಧಿ, ಗೃಹ ಲಕ್ಷ್ಮಿ, ಶಕ್ತಿ ಯೋಜನೆ, ಗೃಹ ಜ್ಯೋತಿ, ಯೋಜನಗಳ ಸೌಲಭ್ಯಗಳಿಂದ ವಂಚಿತರಾದ ಅರ್ಹರನ್ನು ಗುರುತಿಸಿ, ಅವರಿಗೆ ಅರ್ಜಿ ಸಲ್ಲಿಸುವ ಅಥವಾ ತಾಂತ್ರಿಕ ಸಮಸ್ಯೆಗಳನ್ನು ಪರಿಹರಿಸಲು ನೆರವು ನೀಡಿವುದು, ಮತ್ತು ಜನ ಸಾಮಾನ್ಯರಿಂದ ಸಮಸ್ಯೆಗಳನ್ನು ಆಲಿಸಿ ಅವುಗಳನ್ನು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರುವುದು ಮತ್ತು ಪರಿಹಾರಕ್ಕೆ ಸಮಿತಿ ಪ್ರಯತ್ನಿಸುತ್ತಿದೆ.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು ಮತ್ತು ಸದಸ್ಯರು ತಾಲ್ಲೂಕ ಮಟ್ಟದಲ್ಲಿ ಸಕ್ರಿಯವಾಗಿ ಕೆಲಸ ಮಾಡುತ್ತಿದ್ದು, ಮನೆ ಮನೆಗೆ ಭೇಟಿ ನೀಡಿ ಯೋಜನೆಯ ಅರ್ಹತೆಯನ್ನು ಪರಿಶೀಲಿಸುವುದು ಮತ್ತು ಯೋಜನೆಯ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಉದಯಕುಮಾರ ಚಟನಳ್ಳಿ, ಶಿವಕುಮಾರ ಕುತ್ತಾಬಬಾದ್, ಸೇವಾದಳ ಅಧ್ಯಕ್ಷರಾದ ಮೋಹಿನ್ ಪಠಾಣ್, ಮುಖಂಡರಾದ ಗ್ರಾಮ ಪಂಚಾಯತ ಸದಸ್ಯರಾದ ಮೋಹನ್ ಸಾಗರ, ಮಂಜುನಾಥ, ಪವನ ಬಾಪೂರೆ, ಸಿದ್ದರೆಡ್ಡಿ, ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

# ನವೆಂಬರ್ 26ರಂದು ವಿದ್ಯುತ್ ವ್ಯತ್ಯಯ

ರಾಯಚೂರು: ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆಯ ಗ್ರಾಮೀಣ ಉಪ-ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ಮಟಮಾರಿ ವಿದ್ಯುತ್ ಉಪ-ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ನವೆಂಬರ್ 26ರ ಬೆಳಗ್ಗೆ 10 ರಿಂದ ಸಂಜೆ 4 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸುವಂತೆ

ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ-ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ಲೇಫಿನಿಟಿ' ವಾರ್ಷಿಕ ಕ್ರೀಡಾಕೂಟ ಉದ್ಘಾಟನೆ ಪ್ರದೀಪ್ ಗುಂಟಿ ಹೇಳಿಕೆ ಕಠಿಣ ಪರಿಶ್ರಮ ಬೆಳೆಸುವ ಕ್ರೀಡೆ

ಮಲ್ಲಮ್ಮ ನುಡಿ ವಾರ್ತೆ

ಬೀದರ್: ಕ್ರೀಡೆಗಳು ವಿದ್ಯಾರ್ಥಿಗಳಲ್ಲಿ ಶಿಸ್ತು, ಆತ್ಮವಿಶ್ವಾಸ, ತಂಡದ ಮನೋಭಾವ ಹಾಗೂ ಪರಿಶ್ರಮ ಬೆಳೆಸುತ್ತವೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಹೇಳಿದರು.




ನಗರದ ಚೊಂಡಿ ರಸ್ತೆಯಲ್ಲಿರುವ ದಿ. ಇನ್ಫಿನಿಟಿ ಶಾಲೆಯಲ್ಲಿ ಭಾನುವಾರ ಏರ್ಪಡಿಸಿದ್ದ ವಾರ್ಷಿಕ ಕ್ರೀಡಾಕೂಟ ಪ್ಲೇಫಿನಿಟಿ 2025 ಉದ್ಘಾಟಿಸಿ ಅವರು ಮಾತನಾಡಿದರು.

ವ್ಯಕ್ತಿತ್ವ ನಿರ್ಮಾಣದಲ್ಲಿ ಕ್ರೀಡೆಗಳು ಮಹತ್ವದ ಪಾತ್ರ ವಹಿಸುತ್ತವೆ ಕ್ರೀಡೆ ದೈಹಿಕ ಸಾಮರ್ಥ್ಯ ಹೆಚ್ಚಿಸುತ್ತದೆ ಎಂದು ತಿಳಿಸಿದರು.

ಶಾಲೆಗಳಲ್ಲಿ ಸಕಾರಾತ್ಮಕ ವಾತಾವರಣ ಇರುವುದು ಬಹಳ ಅವಶ್ಯಕ. ಅಂಥ ಪರಿಸರದಲ್ಲಿ ಬೆಳೆಯುವ ಮಕ್ಕಳು ಉತ್ತಮ ನಾಗರಿಕರಾಗಿ ರೂಪುಗೊಳ್ಳುತ್ತಾರೆ ಎಂದು ಹೇಳಿದರು.

ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಸಮಾಜ ಸೇವಕಿ ಶೈನಿ ಹಾಗೂ ಅಕ್ಕ ಪಡೆಯ ಎಎಸ್ಐ ಸಂಗೀತಾ ಅವರು, ವಿದ್ಯಾರ್ಥಿಗಳು ಪಠ್ಯದ ಜತೆಗೆ ಪಠ್ಯೇತರ, ಸಾಮಾಜಿಕ ಚಟುವಟಿಕೆಗಳಲ್ಲಿ ಸಹ ತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಶಾಲೆಯ ಸಂಸ್ಥಾಪಕ ನಿರಂಜನ್ ಶೀಲವಂತ ಮಾತನಾಡಿ, ಶಾಲೆ ಮಕ್ಕಳಲ್ಲಿ ಕ್ರೀಡಾ ಸ್ಫೂರ್ತಿ ಬೆಳೆಸಲು ನಿರಂತರ ಪ್ರಯತ್ನಿಸುತ್ತಿದೆ ಎಂದು ಹೇಳಿದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಅಹಮ್ಮದ್ದೀನ್, ಬೀದರ್ ಐ ಡೋನೇಷನ್ ಫೋರಂ ಉಪಾಧ್ಯಕ್ಷ ಡಾ. ಸುಭಾಷ್ ಕರ್ಪೂರ, ಶಾಲೆಯ ನಿರ್ದೇಶಕ ಡಾ. ಮಲ್ಲಿಕಾರ್ಜುನ ಚಟ್ನಳ್ಳಿ ಮಾತನಾಡಿದರು.

ಶಾಲೆಯ ಆಡಳಿತಾಧಿಕಾರಿ ಡಾ. ಲಕ್ಷ್ಮಿ ಮುಗಳಿ, ಪ್ರಾಚಾರ್ಯೆ ಡಾ. ಮೆಲ್ವಿನ್ ಬಾಬಿ ಮರ್ಜಿ ಮತ್ತಿತರರು ಉಪಸ್ಥಿತರಿದ್ದರು.

50 ಮೀ, 100 ಮೀ, 200 ಮೀ. ಓಟ, ರಿಲೆ ರೇಸ್, ಬ್ಯಾಸ್ಕೆಬಾಲ್, ಕೋನ್ ರನ್, ಕ್ರೀಮ್ ರೇಸ್, ಹರ್ಡಲ್ ಜಂಪ್, ಶಾಪಟ್ ಥ್ರೋ, ಕ್ರಿಕೆಟ್ ಮತ್ತಿತರರ ಸ್ಪರ್ಧೆಗಳು ನಡೆದವು. ವೈಯಕ್ತಿಕ ಹಾಗೂ ಗುಂಪು ವಿಭಾಗದ ಸ್ಪರ್ಧೆಗಳಲ್ಲಿ

# ವಸತಿ ಶಾಲೆಗೆ ಶಾಸಕ ಪ್ರಭು ಚವ್ಹಾಣ ದಿಢೀರ್ ಭೇಟಿ ವಸತಿ ನಿಲಯದ ಅವ್ಯವಸ್ಥೆಗೆ ಕಿಡಿ

ಮಲ್ಲಮ್ಮ ನುಡಿ ವಾರ್ತೆ

ಔರಾದ(ಬಿ) :ತಾಲ್ಲೂಕಿನ ವನಮಾರಪಳ್ಳಿಯಲ್ಲಿರುವ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಗೆ ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ನ.24ರಂದು ದಿಢೀರ್ ಭೇಟಿ ನೀಡಿ ವ್ಯವಸ್ಥೆಯನ್ನು ಪರಿಶೀಲಿಸಿದರು. ಈ ವೇಳೆ ವಸತಿ ನಿಲಯದ ಅವ್ಯವಸ್ಥೆ ಕಂಡು ಪ್ರಾಂಶುಪಾಲರು ಮತ್ತು ಸಿಬ್ಬಂದಿಯ ವಿರುದ್ಧ ಕಿಡಿ ಕಾರಿದರು.



ವಸತಿ ನಿಲಯದ ಶೌಚಾಲಯಕ್ಕೆ ತೆರಳಿ ಸ್ವಚ್ಛತೆಯನ್ನು ಗಮನಿಸಿದರು. ಈ ವೇಳೆ ಕೆಲ ದಿನಗಳಿಂದ ಶುಚಿ ಮಾಡದಿರುವುದನ್ನು ಕಂಡು ಪ್ರಾಂಶುಪಾಲರು ಮತ್ತು ಮೇಲ್ವಿಚಾರಕರನ್ನು ತೀವ್ರ ತರಾಟೆಗೆ ತೆಗೆದುಕೊಂಡರು. ಮಕ್ಕಳು ಬಳಸುವ ಶೌಚಾಲಯವನ್ನು ಏಕೆ ಸ್ವಚ್ಛವಾಗಿಟ್ಟಿಲ್ಲ ? ನಿಮ್ಮ ಮನೆಯಲ್ಲಿ ಹೀಗೆ ಇಡುತ್ತೀರಾ? ಮಕ್ಕಳಿಗೆ ಡೆಂಗ್ಯೂ, ಮಲೇರಿಯಾದಂತ ರೋಗಗಳು ಬಂದರೆ ಯಾರು ಜವಾಬ್ದಾರರು ? ಎಂದು ತರಾಟೆಗೆ ತೆ-ಗೆದುಕೊಂಡರು.

ನಾಳೆಯೊಳಗಾಗಿ ಎಲ್ಲ ಶೌಚಾಲಯಗಳನ್ನು ಸ್ವಚ್ಛಗೊಳಿಸಬೇಕು. ಮಕ್ಕಳಿಗೆ ಶುದ್ಧ ಕುಡಿಯುವ ನೀರು ಲಭಿಸಬೇಕು. ಸೋಲಾರ್ ವಾಟರ್ ಹೀಟರ್ ಸರಿಪಡಿಸಿ ಬಿಸಿನೀರಿನ ವ್ಯವಸ್ಥೆ ಕಲ್ಪಿಸಬೇಕು. ಇಲ್ಲವಾದಲ್ಲಿ ಸ್ವಚ್ಛತಾಕರ್ಮಿಗಳು, ಮೇಲ್ವಿಚಾರಕರು ಹಾಗೂ ಪ್ರಾಂಶುಪಾಲರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಪಾಲಕರು ತಮ್ಮ ಮೇಲೆ ವಿಶ್ವಾಸವಿಟ್ಟು ದೂರದ ಊರುಗಳಿಂದ ಮಕ್ಕಳನ್ನು ಕಳುಹಿಸುತ್ತಾರೆ. ಅವರ ವಿಶ್ವಾಸವನ್ನು ಉಳಿಸಿಕೊಳ್ಳಬೇಕು. ವಸತಿ ನಿಲಯದಲ್ಲಿರುವ ಮಕ್ಕಳನ್ನು ತಮ್ಮ ಮಕ್ಕಳಂತೆ ಭಾವಿಸಬೇಕು. ಅವರಿಗೆ ಯಾವುದೇ ರೀತಿಯ ಸಮಸ್ಯೆಗಳು ಬಾರದಂತೆ ನೋಡಿಕೊಳ್ಳಬೇಕು. ಏನಾದರೂ ಸಮಸ್ಯೆಗಳಿದ್ದರೆ ನನ್ನ ಗಮನಕ್ಕೆ ತನ್ನಿ. ಸರಿಪಡಿಸುತ್ತೇನೆ. ಆದರೆ ಮಕ್ಕಳಿಗೆ ಸಮಸ್ಯೆಯಾದರೆ ನಾನು ಸುಮ್ಮನಿರುವುದಿಲ್ಲ ಎಂದು ಎಚ್ಚರಿಸಿದರು.

ನಂತರ ತರಗತಿ ಕೋಣೆಗಳಿಗೆ ಭೇಟಿ ನೀಡಿ ಬೋಧನಾ ಚಟುವಟಿಕೆಗಳ ಬಗ್ಗೆ ಮಾಹಿತಿ ಪಡೆದರು. ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ಓದಲು ಹೇಳಿದಾಗ ವಿದ್ಯಾರ್ಥಿಗಳು ನಿರರ್ಗಳವಾಗಿ ಓದುವುದನ್ನು ಕಂಡು ಸಂತೋಷಗೊಂಡರು. ಎಲ್ಲರೂ ಸರಿಯಾಗಿ ಅಭ್ಯಾಸ ಮಾಡಬೇಕು. ಓದಿನ ಜೊತೆಗೆ ಉತ್ತಮ ಸಂಸ್ಕಾರಗಳನ್ನು ಬೆಳೆಸಿಕೊಳ್ಳಬೇಕು ಎಂದು ಮಕ್ಕಳಿಗೆ ಕಿವಿಮಾತು ಹೇಳಿದರು.

ವಿದ್ಯಾರ್ಥಿಗಳನ್ನು ಪ್ರತ್ಯೇಕವಾಗಿ ಮಾತನಾಡಿಸಿ, ವಸತಿ ಶಾಲೆಯ ಸಮಸ್ಯೆಗಳ ಬಗ್ಗೆ ಪ್ರಶ್ನಿಸಿದಾಗ ಹಲವು ಸಮಸ್ಯೆಗಳ ಬಗ್ಗೆ ಮುಕ್ತವಾಗಿ ಹಂಚಿಕೊಂಡರು. ಶುದ್ಧ ನೀರಿನ ಘಟಕ ಕೆಟ್ಟು ಹೋಗಿದೆ. ಕೆಲ ದಿನಗಳಿಂದ ಸೋಲಾರ್ ವ್ಯವಸ್ಥೆ ಕೆಟ್ಟಿದೆ. ಇದರಿಂದ ಪ್ರತಿದಿನ ತಣ್ಣೀರಿನ ಸ್ನಾನವೇ ಗತಿಯಾಗಿದೆ. ಊಟದ ಮೆನು ಕಾರ್ಡ್ ಪ್ರಕಾರ ಊಟ ನೀಡುತ್ತಿಲ್ಲ. ಸಾಕಷ್ಟು ಸಲ ಒಂದೇ ರೀತಿಯ ಅಡುಗೆ ತಯಾರಿಸುತ್ತಿದ್ದಾರೆ. ಆಟವಾಡಲು ಕ್ರೀಡಾ ಸಲಕರಣೆ ನೀಡುತ್ತಿಲ್ಲವೆಂದು ಹೇಳಿದರು. ಈ ಸಂದರ್ಭದಲ್ಲಿ ವಸತಿ ನಿಲಯದ ಪ್ರಾಂಶುಪಾಲರಾದ ಶಿವಾಜಿ ಪವಾರ್, ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಸರ್ದಾರ್ ವಲ್ಲಭಭಾಯಿ ಪಟೇಲ್ ರಾಷ್ಟ್ರೀಯ ಏಕತಾ ದಿನಾಚರಣೆ: ಕಲಬುರಗಿಯಲ್ಲಿ ಜಿಲ್ಲಾ ಮಟ್ಟದ ಪಾದಯಾತ್ರೆ




ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ನ,ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 150ನೇ ಜನ್ಮ ವಾರ್ಷಿಕೋತ್ಸವದ ಅಂಗವಾಗಿ ಕಲಬುರಗಿಯಲ್ಲಿ ಜಿಲ್ಲಾ ಮಟ್ಟದ ಪಾದಯಾತ್ರೆ ಕಾರ್ಯಕ್ರಮವನ್ನು ಇಂದು ಏರ್ಪಡಿಸಲಾಯಿತು.ಕಾರ್ಯಕ್ರಮವನ್ನು ವಿಧಾನ ಪರಿಷತ್ ಸದಸ್ಯರಾದ ಶಶೀಲ್ ಜಿ. ನಮೋಶಿ ಅವರು ಸರ್ದಾರ್ ಪಟೇಲ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಜ್ಯೋತಿ ಬೆಳಗಿಸುವುದರ ಮೂಲಕ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ನಮೋಶಿ ಅವರು,"ದೇಶದ ವಿವಿಧ ಸಂಸ್ಥಾನಗಳನ್ನು ಭಾರತೀಯ ಒಕ್ಕೂಟಕ್ಕೆ ವಿಲೀನಗೊಳಿಸುವಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ಮಹತ್ವದ ಪಾತ್ರ ವಹಿಸಿದ್ದಾರೆ. ಜುನಾಗಢ ಹಾಗೂ ಹೈದರಾಬಾದ್ ಸಂಸ್ಥಾನಗಳು ಒಕ್ಕೂಟಕ್ಕೆ ಸೇರ್ಪಡೆಗೆ ಹಿಂಜರಿದಾಗ, ಅವರು ದೃಢವಾದ ಕ್ರಮಗಳಿಂದ ಅವನ್ನು ಭಾರತೀಯ ಒಕ್ಕೂಟಕ್ಕೆ ಸೇರಿಸಿದರು," ಎಂದು ಹೇಳಿದರು.

ಕಲಬುರಗಿ ಲೋಕಸಭಾ ಮಾಜಿ ಸದಸ್ಯ ಡಾ. ಉಮೇಶ ಜಾಧವ್ ಮಾತನಾಡಿ,"ಸರ್ದಾರ್ ಪಟೇಲ್ ಅವರ ಜನ್ಮದಿನವನ್ನು ಕೇಂದ್ರ ಸರ್ಕಾರ ರಾಷ್ಟ್ರೀಯ ಏಕತಾ ದಿನವಾಗಿ ಘೋಷಿಸಿದೆ. ಸರ್ಕಾರದ ಕಾರ್ಯಕ್ರಮವಾಗಿರುವುದರಿಂದ ಎಲ್ಲರೂ ಒಂದಾಗಿ ಭಾಗವಹಿಸಿ ರಾಷ್ಟದ ಏಕತೆಯನ್ನು ಬಲಪಡಿಸಬೇಕು,ಎಂದು ಹೇಳಿದರು.

"2047ರ ವಿಕಸಿತ ಭಾರತದ ಕನಸನ್ನು ಎಲ್ಲರೂ ಸಾಮೂಹಿಕವಾಗಿ ಸಫಲಗೊಳಿಸಬೇಕು. ಸರ್ದಾರ್ ಪಟೇಲ್ ದೇಶದ 565 ಸಂಸ್ಥಾನಗಳನ್ನು ಒಕ್ಕೂಟದಲ್ಲಿ ಸೇರಿಸುವ ಮೂಲಕ ರಾಷ್ಟದ ಐಕ್ಯತೆ ಮತ್ತು ಅಖಂಡತೆಯನ್ನು ಬಲಪಡಿಸಿದ್ದಾರೆ," ಎಂದು ಹೇಳಿದರು.

ಇತಿಹಾಸ ತಜ್ಞ ಡಾ. ಎನ್. ಎಸ್. ಜಾಧವ್ ಅವರು ಸರ್ದಾರ್ ಪಟೇಲ್ ಅವರ ಅಖಂಡ ಭಾರತ ನಿರ್ಮಾಣದಲ್ಲಿ ವಹಿಸಿದ ಪಾತ್ರದ ಕುರಿತು ವಿಶೇಷ ಉಪನ್ಯಾಸ ನೀಡಿದರು.

"ಗೃಹಮಂತ್ರಿಗಳಾಗಿದ್ದ ಪಟೇಲ್ ಅವರು ಪ್ರಮುಖ ಸಂಸ್ಥಾನಗಳ ವಿಲೀನವನ್ನು ಚಾತುರ್ಯದಿಂದ ನೆರವೇರಿಸಿದ್ದಾರೆ. ಇಂದಿನ ಪೀಳಿಗೆಯವರು ಅವರ ಆದರ್ಶಗಳನ್ನು ಅಳವಡಿಸಿಕೊಳ್ಳುವುದು ಅಗತ್ಯ," ಎಂದು ಹೇಳಿದರು.

ಈ ಮೊದಲು, ಜಗತ್ ವೃತ್ತದಲ್ಲಿ ಪಾದಯಾತ್ರೆಗೆ ಚಾಲನೆ ನೀಡಲಾಯಿತು. ಡೊಳ್ಳುಕುಣಿತದೊಂದಿಗೆ ಪಾದಯಾತ್ರೆ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತಕ್ಕೆ ತೆರಳಿ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿತು. ನಂತರ ಡಾ. ಎಸ್. ಎಂ. ಪಂಡಿತ ರಂಗಮಂದಿರದಲ್ಲಿ ಸಮಾರೋಪ ಕಾರ್ಯಕ್ರಮ ನಡೆಯಿತು.

ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿಪತ್ರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಚಂದು ಪಾಟೀಲ್ ಬಿಜೆಪಿ ನಗರ ಅದ್ಯಕ್ಷ, ಗುಲಬರ್ಗಾ ವಿಶ್ವವಿದ್ಯಾಲಯದ ಎನ್.ಎಸ್.ಎಸ್. ಅಧಿಕಾರಿ ಹಣಮಂತ ಜಂಗೆ, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯ ತರಬೇತಿದಾರ ಸಂ–ಜಯ ಬಾಣದ, ಮೇರಾ ಯುವ ಭಾರತ ಜಿಲ್ಲಾ ಯುವ ಅಧಿಕಾರಿ ಮಯೂರಕುಮಾರ ಗೋರ್ಮೆ ಸೇರಿದಂತೆ ಹಲವು ಅಧಿಕಾರಿಗಳು ಭಾಗವಹಿಸಿದರು.

ಜಿಲ್ಲಾ ಅಧ್ಯಕ್ಷರಾದ ಅಶೋಕ ಬಗಲಿ ಬಿಜೆಪಿ ಗ್ರಾಮಾಂತರ ಅಧ್ಯಕ್ಷ, ನಿತೀನ್ ಗತ್ತೇದಾರ, ಸಂಗಮೇಶ ವಾಲಿ, ಉಮೇಶ ಪಾಟೀಲ, ಮಹಾದೇವ ಬೆಳಮಗಿ, ಚನ್ನಬಸಪ್ಪಾ ಭಂಗೆ, ಮಹೇಶ ಚವ್ಹಾಣ, ನಾಗಪ್ಪಾ ಕೊಳ್ಳಿ, ಮಹೇಂದ್ರ ಪೂಜಾರಿ ಮೊದಲಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಎಸ್.ಬಿ. ಕಾಮರ್ಸ್ ಕಾಲೇಜಿನ ಜಿಲ್ಲಾ ಎನ್.ಎಸ್.ಎಸ್. ಅಧಿಕಾರಿ ದಯಾನಂದ ಹೊಡಲ್ ನಿರೂಪಿಸಿದರು.

# ಮಹಿಳಾ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಡಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ,** ನ–ಪ್ರಸಕ್ತ 2025–26ನೇ ಸಾಲಿನ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಉದ್ಯೋಗಿನಿ, ಚೇತನಾ, ಧನಶ್ರೀ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ, ದೇವದಾಸಿ ಮಹಿಳೆಯರ ಆದಾಯೋತ್ಪನ್ನ ಚಟುವಟಿಕೆ ಯೋಜನೆಗಳಡಿ ಸೌಲಭ್ಯ ಪಡೆಯಲು ಅರ್ಹ ಫಲಾನುಭವಿಗಳಿಂದ ಸೇವಾ ಸಿಂಧು ಪೋರ್ಟಲ್‌ದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

**ಉದ್ಯೋಗಿನಿ ಯೋಜನೆ (ಶಾಸಕರ ಆಯ್ಕೆ ಸಮಿತಿ):** ಈ ಯೋಜನೆಯಡಿ ಮಹಿಳೆಯರು ವಿವಿಧ ಆದಾಯೋತ್ಪನ್ನ ಚಟುವಟಿಕೆ ಹಾಗೂ ಸೇವಾ ಚಟುವಟಿಕೆಗಳನ್ನು ಕೈಗೊಳ್ಳಲು 3 ಲಕ್ಷ ರೂ.ಗಳವರೆಗಿನ ಸಾಲ ಹಾಗೂ ಸಹಾಯಧನ ಸೌಲಭ್ಯ ವಿರುತ್ತದೆ. ವಯೋಮಿತಿ 18 ರಿಂದ 55 ವರ್ಷದೊಳಗಿರಬೇಕು.

**ಚೇತನ, ಧನಶ್ರೀ ಹಾಗೂ ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಹಾಗೂ ದೇವದಾಸಿ ಪುನರ್ವಸತಿ ಯೋಜನೆ (ಜಿಲ್ಲಾ ಆಯ್ಕೆ ಸಮಿತಿ ಯೋಜನೆ):** ಈ ಯೋಜನೆಗಳಡಿ 18 ವರ್ಷ ಮೇಲ್ಪಟ್ಟ ದಮನಿತ ಮಹಿಳೆಯರು, 60 ವರ್ಷದೊಳಗಿನ ಹೆಚ್.ಐ.ವಿ. ಸೋಂಕಿತ ಮಹಿಳೆಯರು ಹಾಗೂ ಲಿಂಗತ್ವ ಅಲ್ಪಸಂಖ್ಯಾತರಿಗೆ ವಿವಿಧ ಆದಾಯೋತ್ಪನ್ನ ಚಟುವಟಿಕೆಗಳನ್ನು ಕೈಗೊಳ್ಳಲು 30,000 ರೂ.ಗಳ ಆರ್ಥಿಕ ಪ್ರೋತ್ಸಾಹಧನ ನೀಡಲಾಗುತ್ತದೆ. ಧನಶ್ರೀ ಯೋಜನೆ ಹಾಗೂ ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಯಡಿ ಆನ್‌ಲೈನ್ ಹಾಗೂ ಆಫ್‌ಲೈನ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತಿಯುಳ್ಳ ಫಲಾನುಭವಿಗಳು ನಿಗಮದ ಎಲ್ಲಾ ಯೋಜನೆಗಳಡಿ ಸೌಲಭ್ಯ ಪಡೆಯಲು ಗ್ರಾಮ ಒನ್, ಕರ್ನಾಟಕ ಒನ್ ಹಾಗೂ ಬಾಪೂಜಿ ಸೇವಾ ಕೇಂದ್ರಗಳಲ್ಲಿ ಸೇವಾಸಿಂಧು https://sevasindhu.karnataka.gov.in ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2025ರ ಡಿಸೆಂಬರ್ 15 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಆಯಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಅಥವಾ ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಲು ಕೋರಲಾಗಿದೆ.

# ನವೆಂಬರ್ 25 ರಿಂದ 27 ರವರೆಗೆ ನೀರು ಸರಬರಾಜಿನಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ,ನ. ಕಲಬುರಗಿ ನಗರಕ್ಕೆ ನೀರು ಸರಬರಾಜು ಮಾಡುವ ಜಲಮೂಲ ನದಿಗಳಲ್ಲಿ ಒಂದಾದ ಭೀಮಾ ನದಿಯಿಂದ ಸರಬರಾಜಾಗುವ ಮುಖ್ಯ ಕೊಳವೆ ಮಾರ್ಗದ ಕೋಟನೂರ(ಡಿ)ಯ ಮಧ್ಯಂತರ ಯಂತ್ರಾಗಾರದಲ್ಲಿರುವ 1000 ಹೆಚ್.ಪಿ. ಶಾಫ್ಟ್ ಮತ್ತು ವಾಲ್ ದುರಸ್ತಿ ಕಾರ್ಯ ಕೈಗೆತ್ತಿಕೊಳ್ಳಬೇಕಾಗಿರುವ ಹಿನ್ನೆಲೆಯಲ್ಲಿ ಇದೇ ನವೆಂಬರ್ 25 ರಿಂದ 27 ರವರೆಗೆ ಮೂರು ದಿನಗಳ ಕಾಲ ಭೀಮಾ ನದಿಯಿಂದ ಸರಬರಾಜು ಆಗುವ ಎಲ್ಲಾ ಬಡಾವಣೆಗಳಲ್ಲಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಕಲಬುರಗಿ ನಗರದ ಸಾರ್ವಜನಿಕರು ಮಹಾನಗರ ಪಾಲಿಕೆ, ಕೆಯುಐಡಿಎಫ್‌ಸಿ ಹಾಗೂ ಮೆ॥ ಎಲ್ ಆಂಡ್ ಟಿ ಕಂಪನಿಯೊಂದಿಗೆ ಸಹಕರಿಸಬೇಕೆಂದು ಕಲಬುರಗಿ ಕೆಯುಡಬ್ಲ್ಯುಎಸ್‌ಎಂಪಿ–ಕೆಯುಐಡಿಎಫ್‌ಸಿ ಯೋಜನಾ ಅನುಷ್ಠಾನ ಘಟಕದ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದಾರೆ.

ಕಲಬುರಗಿ ನಗರದ ಬಿದ್ದಾಪೂರ, ರಾಯರಗುಡಿ, ವಿಶಾಲ ನಗರ, ಅಂಬಿಕಾ ನಗರ, ಪಿಂಪ್ಲಿ ಟೆಂಪಲ್, ಪಿ ಆಂಡ್ ಟಿ ಕಾಲೋನಿ, ವಿದ್ಯಾನಗರ, ಯಶವಂತನಗರ, ಕರುಣೇಶ್ವರ ನಗರ, ಗಣೇಶ ನಗರ, ಭಾಗ್ಯವಂತಿನಗರ, ದೇವಾನಗರ, ತಿಲಕನಗರ, ಬನಶಂಕರಿನಗರ, ಹರಿನಗರ, ಗಾಬರೆ ಲೇಔಟ್, ಜೆಮಶೆಟ್ಟಿ ನಗರ, ಕೃಷ್ಣ ನಗರ, ತಾರಫೈಲ್, ಉದಯನಗರ, ಎನ್‌ಜಿಓ ಕಾಲೋನಿ, ಜೇವರ್ಗಿ ಕಾಲೋನಿ, ಮಾಕಾ ಲೇಔಟ್, ಸಂತೋಷ ಕಾಲೋನಿ, ಪಿಡಬ್ಲ್ಯೂಡಿ ಕಾಲೋನಿ, ಬ್ಯಾಂಕ್ ಕಾಲೋನಿ, ಬಾಲಾಜಿ ನಗರ, ರೆಹಮತ ನಗರ, ಸಂಪಿಗೆ ನಗರ, ಬುದ್ಧನಗರ, ರೇವಣಸಿದ್ದೇಶ್ವರ ಕಾಲೋನಿ, ಸಾಯಿನಗರ, ಓಜಾ ಲೇಔಟ್, ಸ್ವಾಮಿ ವಿವೇಕಾನಂದ ನಗರ, ಪ್ರಗತಿ ಕಾಲೋನಿ, ಸಿಐಬಿ ಕಾಲೋನಿ, ಶಕ್ತಿ ನಗರ, ಸ್ಟೇಷನ್ ಬಜಾರ, ಐವಾನ್ ಶಾಹಿ, ಯತೀಮಖಾನಾ, ಶಾಂತಿ ನಗರ, ವಿಠ್ಠಲ ನಗರ, ಖುಬಾ ಪ್ಲಾಟ್, ಮಿಸ್ಬಾ ನಗರ, ಅಜ್ಮೀರ್ ಕಾಲೋನಿ, ಕರಿಮ ನಗರ, ಗಾಲಿಬ ಕಾಲೋನಿ, ಮಹಮ್ಮದ ಚೌಕ್, ಖಾದ್ರಿ ಚೌಕ್, ಶಿವನಗರ, ಸಿದ್ರಾಮೇಶ್ವರ ಕಾಲೋನಿ, ನಬಿ ಕಾಲೋನಿ, ಶೇಖ ರೋಜಾ, ಕೈಲಾಸ ನಗರ, ಜಿ.ಆರ್. ನಗರ, ಕಸ್ತೂರಿ ನಗರ, ಆಶ್ರಯ ಕಾಲೋನಿ, ಪೂಜಾ ಕಾಲೋನಿ, ಜಾಗೃತಿ ಕಾಲೋನಿ, ಓಂ ನಗರ, ಜಂ.ಜಂ. ಕಾಲೋನಿ, ಜುಬೇರ್ ಕಾಲೋನಿ, ಆಜಾದಪೂರ ಕಾಲೋನಿ, ನಾಯ್ಡು ಕಾಲೋನಿ ಹಾಗೂ ಮಿನಿ ಅಮ್ಮಲವಾಡಿ ಪ್ರದೇಶಗಳಲ್ಲಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ.

# ಪೊಲೀಸ್ ಇಲಾಖೆಯ ಸಂಚಾರಿ ಇ–ಚಲನ್‌ನಲ್ಲಿ ದಾಖಲಾದ ಪ್ರಕರಣಗಳಿಗೆ ಶೇ. 50 ರಷ್ಟು ರಿಯಾಯಿತಿ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ನ, 2025ರ ಡಿಸೆಂಬರ್ 13 ರಂದು ರಾಷ್ಟ್ರೀಯ ಲೋಕ ಅದಾಲತ್ ನಡೆಯಲಿದೆ. ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಮನವಿ ಮೇರೆಗೆ ಪೊಲೀಸ್ ಇಲಾಖೆಯ ಸಂಚಾರಿ ಇ–ಚಲನ್‌ನಲ್ಲಿ ದಾಖಲಾದ ಪ್ರಕರಣಗಳಲ್ಲಿ ಶೇ. 50 ರಷ್ಟು ರಿಯಾಯಿತಿಯನ್ನು ಘೋಷಿಸಿದ್ದು, ವಾಹನ ಸವಾರರು ಹಾಗೂ ವಾಹನ ಮಾಲೀಕರು ಈ ರಿಯಾಯಿತಿಯ ಸದುಪಯೋಗಪಡೆದುಕೊಳ್ಳಬೇಕೆಂದು ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ. ಶೇ. 50 ರಷ್ಟು ರಿಯಾಯಿತಿಯು ಪೊಲೀಸ್ ಇಲಾಖೆಯಲ್ಲಿ ಸಂಚಾರಿ ಇ–ಚಲನ್‌ನಲ್ಲಿ ದಾಖಲಾದ ಪ್ರಕರಣಗಳಿಗೆ ಮಾತ್ರ ಅನ್ವಯಿಸಲಿದೆ. ಅದೇ ರೀತಿ ಸಾರಿಗೆ ಇಲಾಖೆಯಲ್ಲಿ 1991–92 ರಿಂದ 2019–20 ರ ಸಾಲಿನ ಪ್ರಕರಣಗಳಿಗೆ ದಂಡದ ಮೊತ್ತದಲ್ಲಿ ಶೇ. 50 ರಷ್ಟು ರಿಯಾಯಿತಿ ನೀಡಿದ್ದು, ಇದರ ಸದುಪಯೋಗ ಪಡೆಯಬೇಕೆಂದು ಅವರು ತಿಳಿಸಿದ್ದಾರೆ.

# "ಡಿಪ್ಲೋಮಾ ಇನ್ ಕೋ–ತರಬೇತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ನ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ವತಿಯಿಂದ ಕಲಬುರಗಿಯ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿ ಸಂಸ್ಥೆಯಲ್ಲಿ ಸಹಕಾರ ಸಂಘ ಸಂಸ್ಥೆ/ಸಹಕಾರ ಇಲಾಖೆ/ ಸಹಕಾರ ಲೆಕ್ಕಪರಿಶೋಧನಾ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಹಾಗೂ ಖಾಸಗಿ ಅಭ್ಯರ್ಥಿಗಳಿಗೆ "6 ತಿಂಗಳು/180" ದಿನಗಳ ಅವಧಿಯ "ಡಿಪ್ಲೋಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್" ತರಬೇತಿಯನ್ನು ಜನವರಿ–2026 ರಿಂದ ಪ್ರಾರಂಭವಾಗುತ್ತಿದ್ದು. ಈ ತರಬೇತಿ ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ಪ್ರಾಂಶುಪಾಲರು ತಿಳಿಸಿದ್ದಾರೆ.

ಈ ತರಬೇತಿ ಪಡೆಯಲಿಚ್ಛಿಸುವ ಅಭ್ಯರ್ಥಿಗಳು ಸಹಕಾರ ಸಂಘ/ಸಹಕಾರ ಇಲಾಖೆ/ಸಹಕಾರ ಲೆಕ್ಕಪರಿಶೋಧನಾ ಇಲಾಖೆಯಲ್ಲಿ ವೇತನ ಪಡೆಯುವ ನೌಕರರಾಗಿರಬೇಕು. ಖಾಸಗಿ ಅಭ್ಯರ್ಥಿಗಳಿಗೆ ನಿಯಮಿತವಾಗಿ ಅವಕಾಶವನ್ನು ಕಲ್ಪಿಸಲಾಗಿದೆ. ವಯೋಮಿತಿ 16 ವರ್ಷ ದಾಟಿದವರಾಗಿರಬೇಕು. ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅನುತ್ತೀರ್ಣರಾಗಿ, ಸಹಕಾರಿ ಸಂಘಗಳಲ್ಲಿ ಒಂದು ವರ್ಷಕ್ಕಿಂತ ಮೇಲ್ಪಟ್ಟು ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯೂ ಸಹ ತರಬೇತಿ ಪಡೆಯಲು ಅರ್ಹರಾಗಿರುತ್ತಾರೆ.

ನಿರುದ್ಯೋಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ "6 ತಿಂಗಳು/180 ದಿನಗಳ" ವಿಶೇಷ "ಡಿಪ್ಲೋಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್" ತರಬೇತಿಯನ್ನು ಸಹ ನೀಡಲಾಗುತ್ತದೆ. ಈ ವರ್ಗಕ್ಕೆ ಸೇರಿದ ಅಭ್ಯರ್ಥಿಗಳ ಪಟ್ಟಿಯನ್ನು ಆಯಾ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರವರ ಮೂಲಕ ಅಥವಾ ವ್ಯವಸ್ಥಾಪಕ ನಿರ್ದೇಶಕರು, ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ಗಳ ಮೂಲಕ ಅರ್ಜಿಗಳನ್ನು ಸಲ್ಲಿಸಬೇಕು. ಅಭ್ಯರ್ಥಿಗಳು ಕನಿಷ್ಠ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರಿಕ್ಷೇಯಲ್ಲಿ ಉತ್ತೀರ್ಣರಾಗಿರಬೇಕು. ವಯೋಮಿತಿ 16 ವರ್ಷಗಳಾಗಿರಬೇಕು. ಗರಿಷ್ಠ 30 ವರ್ಷಗಳು ಮೀರಿರಬಾರದು.

ಈ ತರಬೇತಿಯ ನಿಗದಿತ ಅರ್ಜಿ ನಮೂನೆ ಮತ್ತು ವಿವರಣಾ ಪುಸ್ತಕವನ್ನು ಕಲಬುರಗಿ ತರಬೇತಿ ಸಂಸ್ಥೆಯಿಂದ ಹಾಗೂ ತರಬೇತಿ ಸಂಸ್ಥೆಯ ಕಾರ್ಯವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಸಹಕಾರ ಯೂನಿಯನ್‌ಗಳಲ್ಲಿ (ಬೀದರ, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ ಮತ್ತು ಹೊಸಪೇಟ್) ಪಡೆಯಬಹುದಾಗಿದೆ. ತರಬೇತಿಯ ಭರ್ತಿ ಮಾಡಿದ ಅರ್ಜಿಯನ್ನು 2025ರ ಡಿಸೆಂಬರ್ 31 ರೊಳಗಾಗಿ ಕಲಬುರಗಿ ತರಬೇತಿ ಸಂಸ್ಥೆಯ ಪ್ರಾಂಶುಪಾಲರಿಗೆ ಸಲ್ಲಿಸಬೇಕು.

ನಿಗದಿತ ಅರ್ಜಿ ನಮೂನೆ ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್, ಆದರ್ಶ ನಗರ, ಪ್ರಗತಿ ಕಾಲೋನಿ, ಸೇಡಂ. ರಸ್ತೆ, ಕಲಬುರಗಿ–585105 ಹಾಗೂ ದೂರವಾಣಿ ಸಂಖ್ಯೆ: 08472–245340, ಮೊಬೈಲ್ ಸಂಖ್ಯೆ 9916726886, 9742307153, 9113916753 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಮಂಡಳಿ ಅಧ್ಯಕ್ಷರು ಹೆಸರು ಕಾಳು ಖರೀದಿಗಳಿಗೆ ಭೇಟಿ ನೀಡಿ ಕೇಂದ್ರಗಳ ಮುಖ್ಯಸ್ಥರೊಂದಿಗೆ ಚರ್ಚೆ



ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ನವೆಂಬರ್.–2025–26ನೇ ಸಾಲಿನ ಮುಂಗಾರು ಹಂಗಾಮಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ಹೆಸರು ಕಾಳು ಖರೀದಿಸಲು ಸರ್ಕಾರವು ಪ್ರತಿ ಕ್ವಿಂಟಾಲ್‌ಗೆ 8,768 ರೂ. ನಿಗದಿ ಮಾಡಿ ಆದೇಶಿಸಿದೆ. ಇದರ ಪ್ರಯುಕ್ತ ಕಲಬುರಗಿ ಜಿಲ್ಲೆಯಲ್ಲಿ 72 ಹೆಸರುಕಾಳು ಖರೀದಿ ಕೇಂದ್ರಗಳನ್ನು ತೆರೆದು ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದೆ.

ಇದರ ಪ್ರಯುಕ್ತ ಕಲಬುರಗಿ ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ ನಿಯಮಿತದ ಅಧ್ಯಕ್ಷರಾದ ಸೈಯದ್ ಮಹೆಮೂದ ಚಿಸ್ತಿ ಅವರು ಹೆಸರು ಕಾಳು ಖರೀದಿ ಕೇಂದ್ರಗಳಾದ ಅಲ್ಲೂರ (ಬಿ), ಡೋಣಗಾಂವ ಹಾಗೂ ಸಿಂಧನಮಡು ಭೇಟಿ ನೀಡಿ ರೈತರು ಹಾಗೂ ಖರೀದಿ ಕೇಂದ್ರಗಳ ಮುಖ್ಯಸ್ಥರೊಂದಿಗೆ ಚರ್ಚಿಸಿದರು.

ನಂತರ ಮಂಡಳಿ ಅಧ್ಯಕ್ಷರು ಸೇಡಂ ಹಾಗೂ ಚಿತ್ತಾಪೂರ ತಾಲ್ಲೂಕಿನ ಕೇಂದ್ರ/ ರಾಜ್ಯ ಉಗ್ರಾಣಗಳಿಗೆ ಭೇಟಿ ನೀಡಿ ಹೆಸರು ಕಾಳು ಖರೀದಿ ಪ್ರಕ್ರಿಯೆ ಮತ್ತು ಗುಣಮಟ್ಟವನ್ನು ಸಹ ವೀಕ್ಷಣೆ ಮಾಡಿದರು.

ಪ್ರಸ್ತುತ ಜಿಲ್ಲೆಯಲ್ಲಿ ಒಟ್ಟು 3593 ರೈತರ ನೋಂದಣಿಯಾಗಿದ್ದು, 6296.50 ಕ್ವಿಂಟಾಲ್ ರೈತರಿಂದ ಹೆಸರು ಕಾಳು ಖರೀದಿಸಲಾಗಿದೆ ಎಂದು ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ ನಿ. ಕಲಬುರಗಿ ವ್ಯವಸ್ಥಾಪಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ,26 ರಂದು ಒಂದು ದಿನದ ರಾಷ್ಟ್ರೀಯ ವಿಚಾರ ಸಂಕಿರಣ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ,** ಗುಲಬರ್ಗಾ ವಿಶ್ವವಿದ್ಯಾಲಯ ಕಲಬುರಗಿ, ಡಾ.ಬಿ.ಆರ್.ಅಂಬೇಡ್ಕರ್ ಅಧ್ಯಯನ ಮತ್ತು ಸಂಶೋಧನಾ ಸಂಸ್ಥೆ ಮತ್ತು ಡಾ.ಬಿ.ಆರ್. ಅಂಬೇಡ್ಕರ್ ತರಬೇತಿ, ಸಂಶೋಧನೆ ಹಾಗೂ ವಿಸ್ತರಣಾ ಕೇಂದ್ರ ಬೆಂಗಳೂರು ಇವರ ಸಹಯೋಗದೊಂದಿಗೆ 76ನೇ ಸಂವಿಧಾನ ದಿನಾಚರಣೆ ನಿಮಿತ್ತ ಒಂದು ದಿನದ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಇದೇ ನವೆಂಬರ್ 26 ರಂದು ಬೆಳಿಗ್ಗೆ 10.30 ಗಂಟೆಗೆ ಗುಲಬರ್ಗಾ ವಿಶ್ವವಿದ್ಯಾಲಯದ ಕಾರ್ಯಸೌಧದಲ್ಲಿನ ಮಹಾತ್ಮಗಾಂಧಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಹೈದ್ರಾಬಾದ ಕೇಂದ್ರೀಯ ವಿಶ್ವವಿದ್ಯಾಲಯದ ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರದ ನಿರ್ದೇಶಕರು ಹಾಗೂ ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕರಾದ ಡಾ.ಕೆ.ವಾಯ್.

ರತ್ನಮ್ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಗುಲಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಶಿಕಾಂತ ಎಸ್. ಉಡಿಕೇರಿ ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು.

ಬೆಂಗಳೂರಿನ ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ತರಬೇತಿ, ಸಂಶೋಧನೆ ಹಾಗೂ ವಿಸ್ತರಣಾ ಕೇಂದ್ರದ ನಿರ್ದೇಶಕ ಡಾ. ಸಬೀರ್ ಅಹ್ಮದ್ ಮುಲ್ಲಾ ಹಾಗೂ ಗುಲಬರ್ಗಾ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ರಾಘವೇಂದ್ರ ಎಮ್. ಭೈರಪ್ಪ ಹಾಗೂ

ವಿದ್ಯಾವಿಷಯಕ ಪರಿಷತ್ ಸದಸ್ಯ ಪ್ರೊ. ಎಸ್.ಎನ್. ಗಾಯಕ್‌ವಾಡ್ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು. ಗುಲಬರ್ಗಾ ವಿಶ್ವವಿದ್ಯಾಲಯದ (ಮೌಲ್ಯಮಾಪನ)

ಕುಲಸಚಿವರಾದ ಡಾ. ನಿಂಗಣ್ಣ ಕಣ್ಣೂರ ಹಾಗೂ ಹಣಕಾಸು ಅಧಿಕಾರಿ ಜಯಾಂಬಿಕಾ ಅವರು ಗೌರವ ಉಪಸ್ಥಿತಿವಹಿಸುವರು.

ಅಂದು ಮಧ್ಯಾಹ್ನ 12.30 ಗಂಟೆಗೆ ಗುಲಬರ್ಗಾ ವಿಶ್ವವಿದ್ಯಾಲಯದ ವಾಣಿಜ್ಯ ಮತ್ತು ನಿರ್ವಹಣಾ ನಿಕಾಯ, ವಾಣಿಜ್ಯ ಅಧ್ಯಯನ ವಿಭಾಗದ ಹಿರಿಯ ಪ್ರಾಧ್ಯಾಪಕರು, ಡೀನ್‌ರಾದ ಪ್ರೊ. ರಾಜನಾಳ್ಕರ್ ಲಕ್ಷ್ಮಣ್ ಇವರ ಅಧ್ಯಕ್ಷತೆಯಲ್ಲಿ ಮುಖ್ಯ ಗೋಷ್ಠಿ ನಡೆಯಲಿದೆ. ಕಲಬುರಗಿಯ

ಡಾ.ಬಿ.ಆರ್. ಅಂಬೇಡ್ಕರ್ ಪದವಿ ಮಹಾವಿದ್ಯಾಲಯದ ವಿಶ್ರಾಂತ ಪ್ರಾಂಶುಪಾಲರಾದ ಡಾ.ಐ.ಎಸ್. ವಿದ್ಯಾಸಾಗರ ಅವರು "ಸಂವಿಧಾನದ ರಚನೆಯಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಪಾತ್ರ"

ವಿಷಯ ಕುರಿತು ಹಾಗೂ ರಾಯಚೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಶಿವರಾಜ ಅವರು "ಡಾ. ಬಿ.ಆರ್. ಅಂಬೇಡ್ಕರ್ ಅವರ ಪರಿಕಲ್ಪನೆಯಲ್ಲಿ ಸಾಮಾಜಿಕ ಮತ್ತು ರಾಜಕೀಯ ಪ್ರೇರಣೆ–ಯಾಗಿ ಭಾರತದ ಸಂವಿಧಾನ" ವಿಷಯ ಕುರಿತು ಪ್ರಬಂಧಕಾರರಾಗಿ ಮಾತನಾಡುವರು.

**ಮುಕ್ತಾಯ ಸಮಾರಂಭ:**

ಅಂದು ಮಧ್ಯಾಹ್ನ 3 ಗಂಟೆಗೆ ಈ ರಾಷ್ಟ್ರೀಯ ವಿಚಾರ ಸಂಕಿರಣದ ಮುಕ್ತಾಯ ಸಮಾರಂಭ ಜರುಗಲಿದೆ.

ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ, ಭೂಗೋಳಶಾಸ್ತ್ರ ಅಧ್ಯಯನ ವಿಭಾಗದ ಮುಖ್ಯಸ್ಥರು, ಡೀನರಾದ ಪ್ರೊ. ಅರವಿಂದ ಮೂಲಿಮನಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಗುಲಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಶಿಕಾಂತ

ಎಸ್. ಉಡಿಕೇರಿ, ಧಾರವಾಡ ಸಮಾಜ

ಚಿಂತಕ ಡಾ. ಬಸವರಾಜ ಗೋರವಾರ, ಗುಲಬರ್ಗಾ ವಿಶ್ವವಿದ್ಯಾಲಯದ (ಮೌಲ್ಯಮಾಪನ) ಕುಲಸಚಿ ಡಾ. ನಿಂಗಣ್ಣ ಕಣ್ಣೂರ ಹಾಗೂ ಹಣಕಾಸು ಅಧಿಕಾರಿ ಜಯಾಂಬಿಕಾ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು.

# ಶವ ಪೆಟ್ಟಿಗೆ (ಫ್ರಿಜರ್) ವಿತರಿಣೆಗಾಗಿ ತಾತ್ಕಾಲಿಕ ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ನ,ಕಲಬುರಗಿ ಮಹಾನಗರ ಪಾಲಿಕೆಯ 2009–10 ಮತ್ತು 2015–16ನೇ ಸಾಲಿನ ಪಾಲಿಕೆ ನಿಧಿ ಪರಿಷ್ಕೃತ ಎಸ್.ಎಫ್.ಸಿ. ಕ್ರಿಯಾ ಯೋಜನೆಯಡಿ 2025–26ನೇ ಸಾಲಿಗಾಗಿ ಶೇ. 24.10ರ ಯೋಜನೆಯಡಿ ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಸಮುದಾಯ ಭವನಗಳಿಗೆ ಶವಪೆಟ್ಟಿಗೆ (ಫ್ರಿಜರ್) ವಿತರಿಸಲು ಅರ್ಜಿ ಆಹ್ವಾನಿಸಿ, ಅರ್ಹ ಅರ್ಜಿದಾರರ ತಾತ್ಕಾಲಿಕ ಪಟ್ಟಿಯನ್ನು ಕಲಬುರಗಿ ಮಹಾನಗರಪಾಲಿಕೆಯ ನೋಟೀಸ್ ಬೋರ್ಡ್‌ನಲ್ಲಿ ಈಗಾಗಲೇ ಪ್ರಕಟಿಸಲಾಗಿದೆ. ಈ ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆಗಳು ಇದ್ದಲ್ಲಿ 2025ರ ನವೆಂಬರ್ 26 ರೊಳಗಾಗಿ ಕಲಬುರಗಿ ಮಹಾನಗರ ಪಾಲಿಕೆ ಕಚೇರಿಯಲ್ಲಿ ಪೂರಕ ದಾಖಲೆಗಳೊಂದಿಗೆ ಆಕ್ಷೇಪಣೆ ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

# ಜಿಲ್ಲೆಯ 66ಜನ ನೇಕಾರರಿಗೆ ಅಧ್ಯಯನ ಪ್ರವಾಸ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : 2024-25ನೇ ಸಾಲಿನ ಕೈಮಗ್ಗ ಮತ್ತು ಜವಳಿ ಇಲಾಖೆಯಿಂದ ಜಿಲ್ಲಾ ವಲಯ ಆರ್.ಎ.ಪಿ/ಆರ್.ಐ.ಪಿ ಯೋಜನೆಯಡಿ ಕರ್ನಾಟಕ, ಅಂಧ್ರಪ್ರದೇಶ ಮತ್ತು ತಮಿಳುನಾಡು ರಾಜ್ಯಗಳಿಗೆ ಅಧ್ಯಯನ ಪ್ರವಾಸಕ್ಕಾಗಿ ದಿನಾಂಕ:24.11.2025 ರಂದು 66 ಜನ ನೇಕಾರರು 10 ದಿನಗಳ ಅಧ್ಯಯನ ಪ್ರವಾಸಕ್ಕೆ ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಬಸ್ ಮೂಲಕ ಪ್ರಯಾಣ ಬೆಳೆಸಿದರು.

ಶ್ರೀ ಲವೀಶ್ ಓರಡಿಯಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಲವೀಶ್ ಓರಡಿಯಾ ಅವರು ಇಂದು ಹಸಿರು ನಿಶಾನೆ ತೋರಿಸುವ ಮೂಲಕ ನೇಕಾರರನ್ನು ಅಧ್ಯಯನ ಪ್ರವಾಸಕ್ಕೆ ಬೀಳಕೊಟ್ಟರು.

ವಿದ್ಯಾವಿಕಾಸ ಯೋಜನೆಯಡಿ ಶಾಲಾ ಸಮವಸ್ತ್ರ ಬಟ್ಟೆ ನೇಯುವ ಮತ್ತು ಕಾಟನ ಸೀರೆ ನೇಯುವ ಈ ನೇಕಾರರು ಕರ್ನಾಟಕ, ಅಂಧ್ರಪ್ರದೇಶ ಮತ್ತು ತಮಿಳುನಾಡು ರಾಜ್ಯಗಳಿಗೆ ಪ್ರವಾಸಕ್ಕೆ ತೆರಳಿದ್ದಾರೆ.

ನಾರಾಯಣಪೇಟ್ ಸಹಕಾರ ಸಂಘ ಕಾಟನ ಸೀರೆ, ಹೈದ್ರಾಬಾದ್‌ನ ನೇಕಾರ ಸೇವಾ ಕೇಂದ್ರ, ಪೋಚಂಪಲ್ಲಿ ಸಿಲ್ಕ್ (ಇಕ್ಲಟ್) ಸೀರೆ, ಕೋಯಲಗೂಡಂ ಕಾಟನ್ ಡ್ರೆಸ್ ಮಟೇರಿಯಲ್,

ವೆಂಕಟಗಿರಿ ಕೈಮಗ್ಗ ತಂತ್ರಜ್ಞಾನ ಸಂಸ್ಥೆ ಮತ್ತು ಪಟ್ಟು ಸೀರೆ, ಕಾಂಚಿಪುರಂ ಅಣ್ಣಾ ಸೀರೆ, ಚನ್ನೈ ಟೆಕ್ಸ್ ಶೋರೂಮ್, ಕುಂಬಕೋಣ ತಿರುಭೂವನಂ ಸಿಲ್ಕ್ ಸೀರೆ, ಪಾಂಡಿಚೇರಿ ಸಿಲ್ಕ್ ಸೀರೆ, ತಂಜಾವೂರು ಸಿಲ್ಕ್ ಸೀರೆ, ಮಧುರೈ ಮೀನಾಕ್ಷಿ ಕಾಟನ್ ಸೀರೆ, ಕರೂರು ಬೆಡ್ ಶೀಟ್ & ಟಾವೇಲ್ಸ್, ಚೆನ್ನಮೈಲ್ಯೆ ಸಹಕಾರ ಸಂಘಗಳಿಗೆ ಭೇಟಿ, ಇರೂಡೆ ಬೆಡ್ ಶೀಟ್ & ಜಮಖಾನಿ, ಭವಾನಿ ಸಹಕಾರ ಸಂಘಗಳಿಗೆ ಭೇಟಿ, ಸೇಲಂ ನೇಕಾರರ ಸೇವಾ ಕಂದ್ರ, ಬೆಂಗಳೂರು ಸಿಲ್ಕ್ ಬೋರ್ಡ್ ಬೋರ್ಡ್ ಮತ್ತು ಇತರ ಸ್ಥಳೀಯ ಸಹಕಾರ ತರಬೇತಿ ಸಂಸ್ಥೆಗಳಿಗೆ ಭೇಟಿ ನೀಡುವರು ಎಂದು ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ ಜಿ.ಪಂ. ಯಾದಗಿರಿ ಅವರು ತಿಳಿಸಿದ್ದಾರೆ.

ಈ ತರಹದ ಅಧ್ಯಯನ ಪ್ರವಾಸಗಳಿಂದ ರಾಜ್ಯದಲ್ಲಿ ತಯಾರಿಸಲಾಗುತ್ತಿರುವ ವಿವಿಧ ವಿನ್ಯಾಸಗಳ ಮತ್ತು ಮಾದರಿಯ ನೇಯುವ ಬಟ್ಟೆಗಳ ಕುರಿತು ನೇಕಾರರಿಗೆ ತಿಳುವಳಿಕೆ ಮೂಡಿಸುವ ಮೂಲಕ ಅವರಲ್ಲಿ ಕೌಶಲ್ಯಾಭಿವೃದ್ಧಿ ಹೆಚ್ಚಿಸಿ ಅವರ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ದಿಗೆ ಸಹಕಾರಿ ಆಗುವುದಲ್ಲದೇ,

ವಿನ್ಯಾಸಗಳ ಬದಲಾವಣೆಗೆ ಹಾಗೂ ಮಾರುಕಟ್ಟೆ ಬೇಡಿಕೆಗೆ ಅನುಗುಣವಾಗಿ ನೇಕಾರರು ನೇಯ್ಗೆಯಲ್ಲಿ ಬದಲಾವಣೇ ಮಾಡಿಕೊಳ್ಳಲು ಅನುಕೂಲವಾಗುವುದು ಎಂದು ಅವರು ತಿಳಿಸಿದ್ದಾರೆ.ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ ಶ್ರೀ ಹೈದರ್ ಖಾನ, ಜವಳಿ ಇಲಾಖೆ ಸಿಬ್ಬಂದಿಯವರಾದ ಜವಳಿ ತನಿಖಾಧಿಕಾರಿ ಶ್ರೀ ರಮೇಶ್ ಓಂಕಾರ (ಪ್ರಭಾರ) ಉಪಸ್ಥಿತರಿದ್ದರು.

## ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಸೌಲಭ್ಯಕ್ಕೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

**ಯಾದಗಿರಿ:** ನ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಖಾಸಗಿ ನರ್ಸರಿಗಳ ಎಂಪ್ಯಾನಲ್‌ಮೆಂಟ್ ಸಸಿಗಳ ಪೂರೈಕೆಗಾಗಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ (ಜಿಪಂ) ತೆ-ೂಟಗಾರಿಕೆ ಉಪ ನಿರ್ದೇಶಕರು ರಾಘವೇಂದ್ರ ಅವರು ತಿಳಿಸಿದ್ದಾರೆ.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ರಾಜ್ಯ ಮಟ್ಟದಲ್ಲಿ ಅವಶ್ಯವಿರುವ ಕಸಿ, ಸಸಿಗಳ ಪೂರೈಕೆಗಾಗಿ ಖಾಸಗಿ ನರ್ಸರಿಗಳ ಎಂಪ್ಯಾನಲ್‌ಮೆಂಟ್ಗಾಗಿ Expression of Interest ಸಲ್ಲಿಸಲು HASIRU Portal ಮುಖಾಂತರ ಆಹ್ವಾನಿಸಿದೆ. ವೆಬ್‌ಸೈಟ್ hasiru.karnataka.gov.in ನಲ್ಲಿ ಇಓಎಲ್ ದಾಖಲಾತಿಗಳನ್ನು ಪಡೆದುಕೊಂಡು ಸಂಸ್ಥೆಯ ವಿವರಗಳಾದ Registration Certificate, GST certificateಗೆ ಸಲ್ಲಿಸುವುದು. HASIRU ತಂತ್ರಾಂಶದಲ್ಲಿ 2025ರ ನವೆಂಬರ್ 20 ರಿಂದ ಡಿಸೆಂಬರ್ 19 ರಂದು ಸಂಜೆ 5 ಗಂಟೆಯ ಒಳಗೆ ಅಪ್.ಲೋಡ್ ಮಾಡಬೇಕು. ಈ ಸಂಬಂಧ ಪ್ರಸ್ತಾವನೆಯನ್ನು ಸಲ್ಲಿಸುವ ಪೂರ್ವಾಭಾವಿ ಸಭೆಯನ್ನು 2025ರ ನವೆಂಬರ್ 29 ರಂದು ಬೆಳಿಗ್ಗೆ 11 ಗಂಟೆಗೆ ತೋಟಗಾರಿಕೆ ನಿರ್ದೇಶನಾಲಯ, ಕಿರುಸಭಾಂಗಣ, ಲಾಲ್‌ಬಾಗ್, ಬೆಂಗಳೂರು ಇಲ್ಲಿ ಏರ್ಪಡಿಸಿದೆ.

ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ ಜಂಟಿ ನಿರ್ದೇಶಕರು (ಬಯೋಟೆಕ್ನಾಲಜಿ), ಜೈವಿಕಕೇಂದ್ರ, ಹುಳಿಮಾವು, ಬನ್ನೇರುಘಟ್ಟ ರಸ್ತೆ, ಬೆಂಗಳೂರು-76, ಮೊ.ನಂ.9448999205, 9900447581 ಸಹಾಯಕ ತೋಟಗಾರಿಕೆ ನಿರ್ದೇಶಕರು MGNREGA ವೆಬ್‌ಸೈಟ್ jaivikakendra.hulimavu@gmail.com ನಲ್ಲಿ ಮೊ.ನಂ.9916366686ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿ.ವಿ.ಬಿ. ಮಹಾವಿದ್ಯಾಲಯದಲ್ಲಿ 77ನೇ ಎನ್‌ಸಿಸಿ ದಿನಾಚರಣೆ ಭವ್ಯವಾಗಿ ಜರುಗಿತು



ಮಲ್ಲಮ್ಮ ನುಡಿ ವಾರ್ತೆ

**ಬೀದರ್:** ನ, 32 ಕರ್ನಾಟಕ ಬಟಾಲಿಯನ್ ಎನ್.ಸಿ.ಸಿ ಕಲಬುರಗಿ ಘಟಕದ ನಿರ್ದೇಶನದಂತೆ ಬೀದರನ ಬಿ.ವಿ. ಭೂಮರಡ್ಡಿ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯ, ಹಾಗೂ ಗ್ಲೋಬಲ್ ಸೈನಿಕ್ ಅಕಾಡೆಮಿ ಇವುಗಳ ಸಂಯುಕ್ತಾಶ್ರಯದಲ್ಲಿ 77ನೇ ಎನ್.ಸಿ.ಸಿ ದಿನಾಚರಣೆಯನ್ನು ಭವ್ಯವಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಚ್.ಕೆ.ಇ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರಾದ ಡಾ. ರಜನೀಶ್ ವಾಲಿ ಅವರು ವಹಿಸಿ ಸಸಿಗೆ ನೀರೆದು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಎನ್.ಸಿ.ಸಿ ಕೆಡೆಟ್‌ಗಳಲ್ಲಿ ನಾಯಕತ್ವ ಗುಣಗಳು ಮತ್ತು ಸ್ವ-ಯಂ ತ್ಯಾಗದ ಪರಿಕಲ್ಪನೆಗಳನ್ನು ಬೆಳೆಸುವ ಮೂಲಕ ಅವರನ್ನು ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸುತ್ತದೆ ಎಂದು ಹೇಳುತ್ತಾ ಕೆಡೆಟ್ಗಳ ಸೇವಾ ಮನೋಭಾವ ಮತ್ತು ಕಾಲೇಜಿನ ಎನ್.ಸಿ.ಸಿ ಘಟಕದ ಸಾಧನೆಗಳನ್ನು ಶ್ಲಾಘಿಸಿದರು.

ಮುಖ್ಯ ಅತಿಥಿಗಳಾಗಿ ಡಾ. (ಮೇಜರ್) ಪಿ. ವಿಠ್ಠಲ ರೆಡ್ಡಿ, ಮಾಜಿ ಎ.ಎನ್.ಓ ಹಾಗೂ ನಿವೃತ್ತ ಪ್ರಾಂಶುಪಾಲರು, ಅವರು ಮಾತನಾಡಿ ಎನ್‌ಸಿಸಿಯ "ಏಕತೆ ಮತ್ತು ಶಿಸ್ತು" ಮೌಲ್ಯಗಳು ಯುವಕರನ್ನು ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸುವಲ್ಲಿ ಮಹತ್ವದ್ದಾಗಿವೆ ಹಾಗೂ ದೇಶದ ವಿವಿಧ ಭಾಗಗಳಿಂದ ಬರುವ ಯುವಕರನ್ನು ಒಗ್ಗೂಡಿಸಿ, ರಾಷ್ಟ್ರೀಯ ಏಕತೆ ಮತ್ತು ಸಾಮಾಜಿಕ ಸಾಮರಸ್ಯವನ್ನು ಬಲಪಡಿಸಲು ಇದು ಒತ್ತು ನೀಡುತ್ತದೆ ಎಂದು ಹೇಳಿದರು.

ಬಿ.ವಿ.ಬಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ದೀಪಾ ರಾಗಾ ಅವರು ಮಾತನಾಡಿ ಎನ್. ಸಿ . ಸಿ ಯುವಕರಿಗೆ ವೈಯಕ್ತಿಕ ಬೆಳವಣಿಗೆಗೆ ಮತ್ತು ಕೌಶಲ್ಯ ಅಭಿವೃದ್ಧಿಗೆ ಅವಕಾಶಗಳನ್ನು ಒದಗಿಸುವುದರ ಜೊತೆಗೆ ವಿಪತ್ತು ಪರಿಹಾರ ಮತ್ತು ಅಭಿವೃದ್ಧಿ ಕಾರ್ಯಗಳಂತಹ ಸಮುದಾಯ ಸೇವಾ ಕಾರ್ಯಕ್ರಮಗಳಲ್ಲಿ ಕೆಡೆಟ್‌ಗಳು ಸಕ್ರಿಯವಾಗಿ ಪಾಲ್ಗೊಳ್ಳಲು ಪ್ರೋತ್ಸಾಹಿಸುತ್ತದೆ ಹೇಳಿದರು.

ಕಾರ್ಯಕ್ರಮದ ಆರಂಭದಲ್ಲಿ ಎನ್.ಸಿ. ಸಿ ಅಧಿಕಾರಿಯಾದ ಶ್ರೀ ಮಾರುತಿ. ಬಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಗ್ಲೋಬಲ್ ಸೈನಿಕ್ ಅಕಾಡೆಮಿಯ ಪ್ರಾಚಾರ್ಯರಾದ ಸಮೋದ ಮೋಹನನ್, ಸಚಿನ ಸಬಾನೆ ಅವರು ಅತಿಥಿಗಳಾಗಿ ಹಾಜರಿದ್ದರು.

ಕಾರ್ಯಕ್ರಮದ ಆರಂಭದಲ್ಲಿ ಜೆ.ಯು.ಒ ಭೂಮಿಕಾ ಸ್ವಾಗತಿಸಿದರೆ, ಕಾರ್ಯಕ್ರಮದ ನಿರೂಪಣೆಯನ್ನು ಕೆಡೆಟ್

ಫಿಲೋಮೀನಾ ನಿರ್ವಹಿಸಿದರು ಕೊನೆಯಲ್ಲಿ ಕೆಡೆಟ್ ನೇಹಾ ವಂದನಾರ್ಪಣೆಯನ್ನು ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕ, ಬೋಧಕೇತರ ಸಿಬ್ಬಂದಿ, ಎನ್.ಸಿ.ಸಿ ಕೆಡೆಟ್ಸ ಮತ್ತು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ತಾತ್ಕಾಲಿಕ ಗರ್ಭನಿರೋಧಕ ವಿಧಾನ 'ಅಂತರ' ಚುಚ್ಚುಮದ್ದು ಉಪಯುಕ್ತ: ವೈದ್ಯರ ಸಲಹೆ

ಮಲ್ಲಮ್ಮ ನುಡಿ ವಾರ್ತೆ

**ರಾಯಚೂರು:** ನ,'ಅಂತರ' ಎಂಬ ಹೆಸರಿನಿಂದ ಕರೆಯಲ್ಪಡುವ ತಾತ್ಕಾಲಿಕ ಗರ್ಭನಿರೋಧಕ ವಿಧಾನವಾದ ಅಂತರ ಚುಚ್ಚುಮದ್ದು ಅತ್ಯಂತ ಸರಳವಾಗಿದೆ. ಯಾವುದೇ ಅನಾನೂಕೂಲತೆಯಾಗದಂತೆ ದಂಪತಿಯ ನಿರ್ಧಾರದ ಮೇರೆಗೆ ಮೊದಲ ಹೆರಿಗೆ ನಂತರ ಮಗುವಿನ ತಾಯಿಯು ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಪಡೆಯಬಹುದಾದ ಚುಚ್ಚುಮದ್ದನ್ನು ಸದುಪಯೋಗ ಪಡೆದುಕೊಳ್ಳಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಹಾಗೂ ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅಧಿಕಾರಿಗಳು ತಿಳಿಸಿದ್ದಾರೆ.

ಅಂತರ ಗರ್ಭನಿರೋಧಕ ಚುಚ್ಚುಮದ್ದನ್ನು ರಾಯಚೂರು ಜಿಲ್ಲೆಯ ಎಲ್ಲ ತಾಲೂಕಿನ ತಾಲೂಕು ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳು, ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಸೇರಿದಂತೆ ವಿವಿಧ ಸರ್ಕಾರಿ ಆರೋಗ್ಯ ಕೇಂದ್ರಗಳು ಹಾಗೂ ರೀಮ್ಸ್‌ನಲ್ಲಿ ಅಂತರ ಚುಚ್ಚುಮದ್ದನ್ನು ಉಚಿತವಾಗಿ ಒದಗಿಸಲಾಗುತ್ತದೆ. ಒಂದು ಡೋಸ್ ಮೂಲಕ ಮೂರು ತಿಂಗಳವರೆಗೆ ಗರ್ಭಧಾರಣೆ ತಡೆಯಬಹುದಾಗಿದೆ. ಇದು ಭಾರತ ಸರ್ಕಾರದ ಕುಟುಂಬ ಯೋಜನಾ ಕಾರ್ಯಕ್ರಮದ ಭಾಗವಾಗಿ ರಾಜ್ಯ ಸರಕಾರದ ಮಾರ್ಗದರ್ಶನದಲ್ಲಿ ರಾಯಚೂರು ಜಿಲ್ಲೆಯ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಸಾರ್ವಜನಿಕರಿಗೆ ಲಭ್ಯವಿದೆ.

ಅಂತರ ಎಂಬುದು ಸರಕಾರ ಸೂಚಿತ ಅಧಿಕೃತ ಹೆಸರಾಗಿದೆ. ಇದು ಹೆಚ್ಚು ಪರಿಣಾಮಕಾರಿ, ದೀರ್ಘಕಾಲ ಕಾರ್ಯನಿರ್ವಹಿಸುವ ರಿವರ್ಸಿಬಲ್ ಗರ್ಭನಿರೋಧಕ ವಿಧಾನವಾಗಿದ್ದು, ಅಂತರ ಇಂಜೆಕ್ಷನ್‌ನನ್ನು ಪ್ರತಿ ಮೂರು ತಿಂಗಳುಗಳಿಗೊಮ್ಮೆ ವರ್ಷದಲ್ಲಿ 4 ಸಾರಿ ಪಡೆದಲ್ಲಿ ಕನಿಷ್ಠ ಒಂದು ವರ್ಷ ಗರ್ಭಧಾರಣೆ ಮುಂದೂಡಲು




ಸಹಾಯಕವಾಗುವುದು. ಪ್ರಸ್ತುತ ಏಪ್ರಿಲ್‌ನಿಂದ ಇಲ್ಲಿವರೆಗೆ 1037 ಮಹಿಳೆಯರು ಫಲಾನುಭವಿಗಳಾಗಿ ಚುಚ್ಚುಮದ್ದು ಪಡೆಯುತ್ತಿದ್ದಾರೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಸುರೇಂದ್ರ ಬಾಬು ತಿಳಿಸಿದ್ದಾರೆ.ತಪಾಸಣೆಯ ನಂತರ ಇಂಜೆಕ್ಷನ್: ಇದು ಮಾಂಸಖಂಡದ ಒಳಗೆ ನೀಡುವ ಇಂಜೆಕ್ಷನ್ ಆಗಿದ್ದು, ಸಾಮಾನ್ಯವಾಗಿ ಮಹಿಳೆಯ ಆರೋಗ್ಯ ತಪಾಸಣೆಯ ನಂತರ ತರಬೇತಿ ಪಡೆದ ಆರೋಗ್ಯ ಸಿಬ್ಬಂದಿಯವರು ವೈದ್ಯರ ನೇತೃತ್ವದಲ್ಲಿ ತೋಳು ಅಥವಾ ತೊಡೆಯಲ್ಲಿ ಈ ಇಂಜೆಕ್ಷನ್ ನೀಡುತ್ತಾರೆ.

ಗರ್ಭಧಾರಣೆಯ ಅಂತರವನ್ನು ಕಾಯ್ದುಕೊಳ್ಳಲು ಅಥವಾ ಹೆರಿಗೆಯನ್ನು ವಿಳಂಬಗೊಳಿಸಲು ಬಯಸುವ ಮಹಿಳೆಯರಿಗೆ ಇದು ಸೂಕ್ತವಾದ ಆಯ್ಕೆಯಾಗಿದೆ. ಸಾಮಾನ್ಯವಾಗಿ 6 ವಾರಗಳ ಪ್ರಸವಾನಂತರದಿಂದ ಪ್ರಾರಂಭವಾಗುವ ಹಾಲುಣಿಸುವ ತಾಯಂದಿರಿಗೂ ಇದು ಸೂಕ್ತವಾಗಿದೆ ಎಂದು ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅಧಿಕಾರಿ ಡಾ ಶಿವಕುಮಾರ ಅವರು ತಿಳಿಸಿದ್ದಾರೆ.

ಪ್ರಯೋಜನಗಳು: ಗರ್ಭಧಾರಣೆಯನ್ನು ತಡೆಗಟ್ಟುವುದರ ಜೊತೆಗೆ, ಇದು ಗರ್ಭನಿರೋಧಕವಲ್ಲದ ಪ್ರಯೋಜನಗಳನ್ನು ನೀಡುತ್ತದೆ. ಸ್ತನ ಕ್ಯಾನ್ಸ ನಿಯಂತ್ರಣ, ಗರ್ಭಕೋಶ ಸಮಸ್ಯೆಗಳ ಕಡಿಮೆ ಮಾಡುವಿಕೆ, ರಕ್ತಹೀನತೆ ಅಪಾಯ ಕಡಿಮೆ ಮಾಡುವುದು, ವಿಶೇಷವಾಗಿ ಮಹಿಳೆಯರು ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವಾಗ ಉಂಟಾಗುವ ಮುಜುಗರದಿಂದ ದೂರವಾಗಲು ಇದು ಸಹಕಾರಿ ಎಂದು ತಿಳಿಸಿದರು. ಪುನಃ ಗರ್ಭ ಧರಿಸುವಿಕೆಗೆ ಮರಳುವಿಕೆ: ಇಂಜೆಕ್ಷನ್‌ನ್ನು ನಿಲ್ಲಿಸಿದ ನಂತರ, ಪುನಃ ಗರ್ಭಧಾರಣೆಗೆ ಮರಳುವ ಸರಾಸರಿ ಸಮಯ ಸುಮಾರು 7 ರಿಂದ 10 ತಿಂಗಳುಗಳು ಇರುತ್ತದೆ. ಆದರೆ, ಇದು ಪ್ರತಿಯೊಬ್ಬ ವ್ಯಕ್ತಿಗೆ ಬದಲಾಗಬಹುದಾಗಿದೆ.

ಪುನರಾವರ್ತಿತ ಡೋಸ್‌ಗಳು: ಪರಿಣಾಮಕಾರಿತ್ವವನ್ನು ಕಾಪಾಡಿಕೊಳ್ಳಲು, ಮುಂದಿನ ಡೋಸ್‌ನ್ನು ಪ್ರತಿ ಮೂರು ತಿಂಗಳಿಗೊಮ್ಮೆ, ಹೊಂದಿಕೊಳ್ಳುವ ಅವಧಿಯಲ್ಲಿ (ಕೊನೆಯ ಇಂಜೆಕ್ಷನ್‌ನಿಂದ 75 ರಿಂದ 120 ದಿನಗಳು) ತೆಗೆದುಕೊಳ್ಳಬೇಕು. ಇಂಜೆಕ್ಷನ್ ಸೈಟ್ ನಿರ್ವಹಣೆಯ ನಂತರ ಮಸಾಜ್ ಮಾಡಬಾರದು ಅಥವಾ ಉಜ್ಜಬಾರದು.

ವೈಯಕ್ತಿಕ ಆರೋಗ್ಯ ಪರಿಸ್ಥಿತಿಗಳ ಆಧಾರದ ಮೇಲೆ ಅಂತರ ಸರಿಯಾದ ಗರ್ಭನಿರೋಧಕ ಆಯ್ಕೆಯಾಗಿದೆಯೇ ಎಂದು ಖಚಿತಪಡಿಸಿಕೊಳ್ಳಲು ಅಂತರ ಚುಚ್ಚುಮದ್ದು ಪ್ರಾರಂಭಿಸುವ ಮೊದಲು ಸ್ತ್ರೀರೋಗತಜ್ಞರು ಅಥವಾ ಆರೋಗ್ಯ ವೃತ್ತಿಪರರೊಂದಿಗೆ ಸಮಾಲೋಚಿಸಬೇಕು. ಸಾಮಾನ್ಯ ಅಡ್ಡಪರಿಣಾಮಗಳು ಮುಟ್ಟಿನ ಚಕ್ರದಲ್ಲಿನ ಬದಲಾವಣೆಗಳನ್ನು ಒಳಗೊಂಡಿರಬಹುದಾಗಿದೆ. ಉದಾಹರಣೆಗೆ ಅನಿಯಮಿತ ಮುಟ್ಟುಗಳು, ಅಮೆನೋರಿಯಾ (ಋತುಚಕ್ರದ ಅನುಪಸ್ಥಿತಿ) ಈ ಬದಲಾವಣೆಗಳು ಸಾಮಾನ್ಯ ಮತ್ತು ಕಾಲಾನಂತರದಲ್ಲಿ ಕಡಿಮೆಯಾಗುತ್ತವೆ ಎಂದು ಡಾ ಶಿವಕುಮಾರ ಅವರು ತಿಳಿಸಿದ್ದಾರೆ.



ಕಲಬುರಗಿ: ಹೀರಾಪೂರದಲ್ಲಿ ಸಚಿವ ಪ್ರಿಯಾಂಕ ಎಂ ಖರ್ಗೆ ಅವರ 47.ನೇಯ ಜನ್ಮದಿನದ ನಿಮಿತ್ತ ಮುದ್ದು ಮಕ್ಕಳಿಗೆ ನೊಟ ಬುಕ್ ವಿತರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಜಿಲ್ಲಾ ಕಾಂಗ್ರೆಸ ಪರಿಶಿಷ್ಟ ಜಾತಿ ವಿಭಾಗದ ಸಮಾಜಿಕಜಾಲತಾಣದ ಉಸ್ತುವಾರಿಯಾಗಿ ಮಹೇಶಕುಮಾರ ತೇಲ್ಲೂರಕರ, ವಿಶಾಲಕಮಾರ ಡೆಪ್ಪಿ, ಆನಂದ ಹತ್ತರಗಿ, ಯುವ ಹೊರಾಟಗಾರ ಮಲ್ಲಿಕಾರ್ಜುನ ಕಟ್ಟಿಮನಿ, ಶಶಿಧರ ಡಿಪ್ಪಿ, ಉಮೇಶ ತೇಲ್ಲೂರಕರ, ಮಂಜುನಾಥ ಹತಗುಂದಿ, ಅಶೋಕ ಶರ್ಮಾ, ವಿದ್ಯಾದರ ಡಿಪ್ಪಿ ಸೇರಿದಂತೆ ಹೀರಾಪೂರ ನಿವಾಸಿಗಳು, ಯುವಕರು, ಮುಖಂಡರು ಇದ್ದರು.

# ಶಾಲೆಗೆ ಬೀಗ ಜಡಿದು ಮಕ್ಕಳೊಂದಿಗೆ ಪಾಲಕರ ಧರಣಿ



ಸುರಪುರ ಸುದ್ದಿ : ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಚಿಕ್ಕನಹಳ್ಳಿ ಗ್ರಾಮದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಬೀಗ ಜಡಿದು ಮಕ್ಕಳ ಸಮೇತ ಪಾಲಕರ ಧರಣಿ ಸತ್ಯಾಗ್ರಹ ನಡೆಸಿದ ಘಟನೆ ಜರುಗಿದೆ. ಚಿಕ್ಕನಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಒಂದರಿಂದ - ಏಳನೇ ತರಗತಿಯವರೆಗೆ ಒಟ್ಟು 255 ಜನ ಮಕ್ಕಳ ದಾಖಲಾತಿ ಇದ್ದು. 03 ಜನ ಸರ್ಕಾರಿ ಶಿಕ್ಷಕರು ಹಾಗೂ ಅದರಲ್ಲಿ 06 ಜನ ಅತಿಥಿ ಶಿಕ್ಷಕರಿದ್ದಾರೆ, ಒಂದರಿಂದ ಏಳನೇ ತರಗತಿಯವರೆಗೆ 255 ಮಕ್ಕಳಿಗೆ ಒಬ್ಬರೇ ಗಣಿತ ಶಿಕ್ಷಕರಿದ್ದು, ಅದೇ ಗಣಿತ ಶಿಕ್ಷಕರನ್ನೇ ಬೋನ್ಹಾಳ ಶಾಲೆಯಲ್ಲಿ ಮೂರು ಹಾಗೂ ಚಿಕ್ಕನಹಳ್ಳಿ ಶಾಲೆಯಲ್ಲಿ ಕರ್ತವ್ಯ ನಿರ್ವಹಿಸುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳು ಹೇಳುತ್ತಿದ್ದಾರೆ.ಇದರಿಂದ ನಮ್ಮ ಮಕ್ಕಳ ಶಿಕ್ಷಣದ ಗುಣಮಟ್ಟ ಕುಂಠಿತಗೊಳ್ಳುತ್ತಿದೆ, ಈ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಗಮನಕ್ಕೂ ತಂದರೂ ಇಲ್ಲಿಯವರೆಗೆ ಯಾವುದೇ ಪ್ರಯೋಜನವಾಗಿಲ್ಲ, ಹಾಗಾಗಿ ಅಧಿಕಾರಿಗಳು ಕೂಡಲೇ ಎಚ್ಚೆತ್ತುಕೊಂಡು ಶಿಕ್ಷಕರನ್ನು ನಮ್ಮೂರ ಶಾಲೆಯಲ್ಲಿ ಖಾಯಂ ಗೊಳಿಸಬೇಕೆಂದು ಪಾಲಕರು ಆಗ್ರಹಿಸಿದ್ದಾರೆ.

ವರದಿ : ಶಿವು ರಾಠೋಡ

# ವಿದ್ಯುತ್ ಕಳ್ಳತನ ನಿಯಂತ್ರಿಸಲು ಟ್ರಾನ್ಸ್ ಫಾರ್ಮರ್‌ಗಳ ಸಮರ್ಪಕ ನಿರ್ವಹಣೆಗೆ ನಿಗಾವಹಿಸಿ: ಕೆ.ಜೆ.ಜಾರ್ಜ್

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅನಧಿಕೃತವಾಗಿ ಹುಕ್ ಗಳ ಮೂಲಕ ವಿದ್ಯುತ್ ಕಳ್ಳತನವನ್ನು ತಡೆಯುವ ಮತ್ತು ಹೆಚ್ಚಿನ ಲೋಡ್ ದಿಂದಾಗಿ ವಿದ್ಯುತ್ ಟ್ರಾನ್ಸ್ ಫಾರ್ಮರ್ ಗಳು ಸುಟ್ಟು ಹೋಗುವುದನ್ನು ತಡೆಯಲು ಅವಶ್ಯಕ ಕ್ರಮ ಕೈಗೊಳ್ಳುವಂತೆ ರಾಜ್ಯ ಇಂಧನ ಖಾತೆ ಸಚಿವರಾದ ಶ್ರೀ ಕೆ.ಜೆ. ಜಾರ್ಜ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ.ನಿ ಹಾಗೂ ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು.

ವಿದ್ಯುತ್‌ನ ಕೊರತೆ ಇಲ್ಲದಿದ್ದರೂ ಸಮರ್ಪಕ ನಿರ್ವಹಣೆ ಅತ್ಯವಶ್ಯಕವಾಗಿದೆ. ಪಂಪ್ ಸೆಟ್‌ಗಳಿಗಾಗಿ ಹಾಗೂ ಇತರೆ ಅವಶ್ಯಕತೆ ಮತ್ತು ಕೈಗಾರಿಕೆಗಳ ವ್ಯಾಪ್ತಿಯಲ್ಲಿ ವಿದ್ಯುತ್ ಕಳ್ಳತನ ಆಗದಂತೆ ನಿಗಾವಹಿಸುವಂತೆ ಅವರು ಸೂಚಿಸಿ, ಅಧಿಕ ಲೋಡ್ ದಿಂದಾಗಿ ಟ್ರಾನ್ಸ್ ಫಾರ್ಮರ್ ಗಳು ಸುಟ್ಟು ಹೋಗದಂತೆ ನೋಡಿಕೊಳ್ಳಲು ವಿದ್ಯುತ್ ಇಲಾಖೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈಗಾಗಲೇ ಸ್ಥಾಪಿಸಿರುವ ವಿದ್ಯುತ್ ಉಪ ಕೇಂದ್ರ ಗಳ ವ್ಯಾಪ್ತಿಯಲ್ಲಿ ವಿದ್ಯುತ್ ಲಿಂಕ್ ಲೈನ್ಸ ಮಾಡುವ ಕಾರ್ಯ ಆದ್ಯತೆ ಮೇಲೆ ಕೈಗೊಳ್ಳಬೇಕು. ವಿದ್ಯುತ್ ಕೇಂದ್ರವಾರು ಸಂಪೂರ್ಣ ಲಿಂಕ್ ಲೈನ್ ಆಗಿರುವ ಬಗ್ಗೆ ಕ.ವಿ.ಪ್ರಸರಣ ನಿಗಮ ಹಾಗೂ ಗು ವಿದ್ಯುತ್ ಸರಬರಾಜು ಕಂ ಅಧಿಕಾರಿಗಳು ಅವಶ್ಯಕ ನಿಗಾವಹಿಸುವಂತೆ ಅವರು ಸೂಚಿಸಿದರು.

ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆಬಾವಿ ಕೊರೆಯಿಸಿರುವ ಕಡೆಗಳಲ್ಲಿ ತಕ್ಷಣ ವಿದ್ಯುತ್ ಸಂಪರ್ಕ ಕಲ್ಪಿಸಬೇಕು.ವಿಶೇಷವಾಗಿ ತಾಂಡಾ,ದೊಡ್ಡಿ ಮತ್ತು ಅರ್ಹರಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಜಿಲ್ಲೆಯ ಒಂಬತ್ತು ವಿದ್ಯುತ್ ಉಪಕೇಂದ್ರಗಳಾದ ಕೆಂಭಾವಿ ,ಹುಣಸಿಹೊಳೆ,ಕವಳೂರ,ಕಂದಕೂರ, ಅಡಕಲಬಂಡಿ,ವನದುರ್ಗ, ಹಯ್ಯಳ.ಬಿ, ಕೊಡೆಕಲ್,ಗಡ್ಡೆಸುಗೂರ್‌ಗಳ ಜಮೀನಿನ ಹಾಗೂ ಟೆಂಡರ್ ಪ್ರಕ್ರಿಯೆ ಬೇಗ ಪೂರ್ಣಗೊಳಿಸಿ ಮಾರ್ಗಸೂಚಿಯನ್ವಯ ಕ್ರಮ ಕೈಗೊಳ್ಳಲು ಸೂಚಿಸಿದರು.

ಯಾದಗಿರಿ ಹಾಗೂ ವಡಗೇರಾಗಳಲ್ಲಿ ವಿದ್ಯುತ್ ಸರ್ಕಲ್ ಕಚೇರಿ ಸ್ಥಾಪನೆ, ರಾಜ್ಯದಲ್ಲಿ ಹೊಸದಾಗಿ ನೇಮಕವಾಗುವ ಲೈನ್‌ಮನಗಳ ಪೈಕಿ ಯಾದಗಿರಿಗೆ ಅವಶ್ಯಕತೆಕಡೆ ಒದಗಿಸುವ ಬಗ್ಗೆ, ಕುಸುಮ-ಬಿ ಯೋಜನೆಯಡಿ ಸೋಲಾರ್ ಪಂಪ್ಸೆಟ್‌ಗೆ ಉತ್ತೇಜಿಸುವ ಹಾಗೂ ಪ್ರವಾಹ ಸಂದರ್ಭದಲ್ಲಿ ಹಾನಿಗೊಳಗಾದ ವಿದ್ಯುತ್ ಸೌಕರ್ಯಗಳ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವಂತೆ ಅವರು ಸೂಚಿಸಿದರು.



ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಅವರು ಮಾತನಾಡಿ, ಜನವಸತಿ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಿರಲು ವಿದ್ಯುತ್ ಪರಿವರ್ತಕಗಳ ದುರಸ್ತಿ ಕೇಂದ್ರಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು.ಜಿಲ್ಲೆಗೆ ಅವಶ್ಯಕತೆ ಇರುವ ಸಿಬ್ಬಂದಿಗಳ ಕೊರತೆ ನೀಗಿಸಲು ಗುಲ್ಬರ್ಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹೆಚ್ಚುವರಿ ಸಿಬ್ಬಂದಿಗಳ ಸೇವೆ ಯಾದಗಿರಿಗೆ ಬಳಿಸಿಕೊಳ್ಳಬೇಕು. ಸ್ಥಾಪನೆಯಾದ ವಿದ್ಯುತ್ ಉಪ ಕೇಂದ್ರಗಳ ವ್ಯಾಪ್ತಿಯಲ್ಲಿ ಲಿಂಕ್ ಲೈನ್ ಸಮರ್ಪಕವಾಗಿ ಇರುವಂತೆ ನೋಡಿಕೊಳ್ಳಲು ಅವರು ವಿದ್ಯುತ್ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಸಂಸದ ಕುಮಾರ್ ನಾಯಕ, ನಗರ ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ, ವೇಣುಗೋಪಾಲ್ ನಾಯಕ, ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿ ನಿ.ಅಧ್ಯಕ್ಷ ಪ್ರವೀಣ್ ಪಾಟೀಲ್ ಹರವಾಳ ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಪಂಕಜ ಕುಮಾರ್ ಪಾಂಡೆ, ಜೆಸ್ಕಾಂ ಎಮ್ ಡಿ ಕೃಷ್ಣಾ ಬಾಜಪ್ಯೆ, ಜಿಲ್ಲಾಧಿಕಾರಿ ಹರ್ಷಲ್ ಭೋಯರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಹೆಚ್ಚುವರಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಶ್ರೀ ಧರಣೇಶ್ ಸೇರಿದಂತೆ ವಿದ್ಯುತ್ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಗ್ಯಾರಂಟಿ ಯೋಜನೆಗಳ ಕುರಿತು ಕಿರು ಪುಸ್ತಕ ಬಿಡುಗಡೆ

ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಶರಣಬಸಪ್ಪ ದರ್ಶನಾಪುರ ಅವರು ಇಂದು ಪಂಚಗ್ಯಾರಂಟಿ ಯೋಜನೆಗಳ ಕುರಿತು ಕಿರು ಪುಸ್ತಕವನ್ನು ಬಿಡುಗಡೆಗೊಳಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಹೊರತಂದಿರುವ ಈ ಕಿರು ಪುಸ್ತಕವು 2024-25ನೇ ಸಾಲಿನ ರಾಜ್ಯ ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಯಾದ ಶಕ್ತಿ ಯೋಜನೆ, ಅನ್ನಭಾಗ್ಯ ಯೋಜನೆ,ಗೃಹ ಜ್ಯೋತಿ ಯೋಜನೆ, ಗೃಹಲಕ್ಷ್ಮಿ ಯೋಜನೆ ಹಾಗೂ ಯುವ ನಿಧಿ ಯೋಜನೆಗಳ ಅಂಕಿ ಅಂಶ, ಫಲಾನುಭವಿಗಳ ಅಭಿಪ್ರಾಯಗಳನ್ನು ಒಳಗೊಂಡಿದೆ.

ಈ ಸಂದರ್ಭದಲ್ಲಿ ಇಂಧನ ಸಚಿವ ಶ್ರೀ ಕೆ.ಜೆ.ಜಾರ್ಜ್, ಸಂಸದ ಜಿ.ಕುಮಾರ ನಾಯಕ, ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಾದರ್ ಚೆನ್ನಯ್ಯ ಜಯಂತಿ ಡಿಸೆಂಬರ್ 4ರಂದು ವಿಜೃಂಭಣೆಯ ಆಚರಣೆ



**ಮಲ್ಲಮ್ಮ ನುಡಿ ವಾರ್ತೆ**

**ರಾಯಚೂರು:** ನಗರದ ಪತ್ರಿಕಾ ಭವನದಲ್ಲಿ ಇಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾದರ್ ಚೆನ್ನಯ್ಯ ಜಯಂತಿ ಆಚರಣಾ ಸಮಿತಿಯ ಅಧ್ಯಕ್ಷ ಯಮನಪ್ಪ ಗಿರಿಜಾಲ ಮಾತನಾಡಿ, ಡಿಸೆಂಬರ್ 4ರಂದು ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಮಾದರ್ ಚೆನ್ನಯ್ಯ ಜಯಂತಿಯನ್ನು ಭವ್ಯವಾಗಿ ಆಚರಿಸಲಾಗುವುದಾಗಿ ತಿಳಿಸಿದ್ದಾರೆ.

ಆ ದಿನ ಕಾರ್ಯಕ್ರಮದ ಪ್ರಾರಂಭದಲ್ಲಿ ಮಾದರ್ ಚೆನ್ನಯ್ಯವರ ಭಾವಚಿತ್ರಕ್ಕೆ ಮಾಜಿ ಸಚಿವ ಆಂಜನೇಯ ಅವರು ಮಾಲಾರ್ಪಣೆ ಮಾಡಿ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ ಎಂದು ಅವರು ಹೇಳಿದರು. ಮಹಿಳಾ ಸಮಾಜದ ವತಿಯಿಂದ ಮೆರವಣಿಗೆ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಬಳಿಕ ರಂಗಮಂದಿರಕ್ಕೆ ಆಗಮಿಸುವುದೂ ಕಾರ್ಯಕ್ರಮದ ಭಾಗವಾಗಲಿದೆ.

ಸಭೆಯಲ್ಲಿ ಮಾತನಾಡಿದ ಅಂಬಣ್ಣ ಅರೋಳಿ ಅವರು, 12ನೇ ಶತಮಾನದಲ್ಲಿ ವಚನ ಸಾಹಿತ್ಯಕ್ಕೆ ಮಾದರ ಚೆನ್ನಯ್ಯವರು ನೀಡಿದ ಅನನ್ಯ ಕೊಡುಗೆಗಳನ್ನು ಸ್ಮರಿಸಿದರು. ವಚನಗಳಿಗೆ ನೀಡಿದ ಅವರ ವಿಶಿಷ್ಟ ಮೌಲ್ಯದಿಂದ ಅವರನ್ನು "ವಚನಗಳ ಕಿರೀಟ" ಎಂದು ಕರೆಯಲಾಗುತ್ತದೆ ಎಂದು ಹೇಳಿದರು. ಬೆಳಗಾವಿಯಲ್ಲಿ ನಡೆಯಲಿರುವ ಚಳಿಗಾಲ ಅಧಿವೇಶನದಲ್ಲಿ ಮಾದರ್ ಚೆನ್ನಯ್ಯ ಜಯಂತಿಯನ್ನು ರಾಜ್ಯೋತ್ಸವ ದಿನಾಚರಣೆಯಾಗಿ ಘೋಷಿಸುವ ಕುರಿತು ಸರ್ಕಾರ ಗಂಭೀರವಾಗಿ ಚಿಂತಿಸಬೇಕೆಂದು ಅವರು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಪಿ. ಯಲ್ಲಪ್ಪ, ನರಸಿಂಹಲು ಮಾಡಗೇರಿ, ರಾಮಣ್ಣ, ರಾಜು, ಬಸವರಾಜು ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ನ 30ರಂದು ಭಗವದ್ಗೀತಾ ಅಭಿಯಾನ ಮಹಾಸಮರ್ಪಣ: ಆನಂದ ಫಡ್ನಿಸ್



**ಮಲ್ಲಮ್ಮ ನುಡಿ ವಾರ್ತೆ**

**ರಾಯಚೂರು:** ರಾಯಚೂರು ಶ್ರೀ ಭಗವದ್ಗೀತಾ ಅಭಿಯಾನ ವತಿಯಿಂದ ನವೆಂಬರ್ 30 ರಂದು ಭಗವದ್ಗೀತಾ ಮಹಾಸಮರ್ಪಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ಭಗವದ್ಗೀತಾ ಅಭಿಯಾನ ಸಂಚಾಲಕ ಡಾ. ಆನಂದ ಫಡ್ನಿಸ್ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ

ಉದ್ದೇಶಿಸಿ ಮಾತನಾಡಿದ ಅವರು, ಕಾರ್ಯಕ್ರಮವು ನಗರದ ಶ್ರೀ ಯಾದವ ಸಂಘ ಮೈದಾನದಲ್ಲಿ ಸಂಜೆ 5 ಗಂಟೆಗೆ ಜರುಗಲಿದ್ದು, ವ್ಯಕ್ತಿತ್ವ ವಿಕಸನ, ನೈತಕತೆಯ ಪುನರುತ್ಥಾನ, ಸಾಮಾಜಿಕ ಸಾಮರಸ್ಯ ಹಾಗೂ ರಾಷ್ಟ್ರೀಯ ಭಾವೈಕ್ಯತೆ ಮುಂತಾದ ಸದುದ್ದೇಶಗಳನ್ನು ಸಾಕಾರಗೊಳಿಸಲೋಸ್ಕರ ಭಗವದ್ಗೀತಾ ಸಾರವನ್ನು ಮನೆ ಮನೆಗಳಿಗೆ ಮತ್ತು ಮನ ಮನಗಳಿಗೆ ತಲುಪಿಸುವ ವಿವಿಧ ಕಾರ್ಯಕ್ರಮಗಳು ಪ್ರಾರಂಭ ಮಾಡಲಾಗಿದೆ. ಈ ಕಾರ್ಯಕ್ರಮಕ್ಕೆ 3 ಸಾವಿರ ಜನರು ಭಾಗವಹಿಸುವ ನಿರೀಕ್ಷೆ ಇದೆ ಎಂದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಹೊಸಪೇಟೆಯ ಚಿಂತಾಮಣಿ ಮಠದ ಶ್ರೀ ಶಿವಾನಂದ ಭಾರತಿ

ಶ್ರೀಪಾದಂಗಳವರು ವಹಿಸಲಿದ್ದಾರೆ ಎಂದ ಅವರು, ಮುಖ್ಯ ಅತಿಥಿಗಳಾಗಿ ಸಚಿವ ಎನ್. ಎಸ್. ಬೋಸರಾಜ, ಶಾಸಕ ಡಾ. ಶಿವರಾಜ ಪಾಟೀಲ್, ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ, ಮಹಾನಗರ ಪಾಲಿಕೆ ಆಯುಕ್ತ

ಜಿ ಜುಬೀನ್ ಮೊಹೋಪಾತ್ರ ಭಾಗವಹಿಸಿದ್ದಾರೆ ಎಂದರು. ಕಾರ್ಯಕ್ರಮದಲ್ಲಿ ಆರ್.ಡಿ.ಎ ಮಾಜಿ ಅಧ್ಯಕ್ಷರಾದ ಬಿ.ಗೋವಿಂದ, ಕಡಗೋಳ ಆಂಜನೇಯ್ಯ, ಪಾಲಿಕೆ ಮಾಜಿ ಸದಸ್ಯ ಈ. ಶಶಿರಾಜ, ಹರೀಶ್ ನಾಡಗೌಡ ಅವರು ಉಪಸ್ಥಿತಿ ಇರುವರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಭಗವದ್ಗೀತಾ ಅಭಿಯಾನದ ಸಂಚಾಲಕ ಆನಂದ ಫಡ್ನಿಸ್ ಅವರು ವಹಿಸಲಿದ್ದಾರೆ ಎಂದರು.

ಈ ಸಂಧರ್ಭದಲ್ಲಿ ಈಶ್ವರ ಹೆಗೆಡೆ, ವಿನೋದ, ಸುನೀತಾ, ಸಂಧ್ಯಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ದುಬೈ ವಿಶ್ವ ಕನ್ನಡ ಸಂಸ್ಕೃತಿ ಸಮ್ಮೇಳನ ಅಧ್ಯಕ್ಷರಾಗಿ ಶ್ರೀದೇವಿ ನಾಯಕ ಆಯ್ಕೆ.



**ಮಲ್ಲಮ್ಮ ನುಡಿ ವಾರ್ತೆ**

**ರಾಯಚೂರ:** ಹೊರನಾಡ ಕನ್ನಡಿಗರೊಂದಿಗೆ ದುಬೈನಲ್ಲಿ ಮಾರ್ಚ್ ತಿಂಗಳಲ್ಲಿ ನಡೆಯಲಿರುವ ಅಂತರಾಷ್ಟ್ರೀಯ ವಿಶ್ವಕನ್ನಡ ಸಮ್ಮೇಳನದ ಅಧ್ಯಕ್ಷರಾಗಿ ರಾಯಚೂರು ಜಿಲ್ಲೆಯ ಕೆಪಿಸಿಸಿ ರಾಜ್ಯ ಮಹಿಳಾ ಘಟಕದ ಉಪಾಧ್ಯಕ್ಷರಾದ ಶ್ರೀಮತಿ ಶ್ರೀದೇವಿ ಆರ್ ವಿ ನಾಯಕ್ ಆಯ್ಕೆಯಾಗಿದ್ದಾರೆ.

ಕಲಾ ಸಂಕುಲ ಸಂಸ್ಥೆ ಮತ್ತು ದುಬೈ ಕನ್ನಡ ಸಾಂಸ್ಕೃತಿಕ ಸಂಘಟನಾ ಸಂಸ್ಥೆ ಜಂಟಿಯಾಗಿ ಮಾರ್ಚ್ ತಿಂಗಳಲ್ಲಿ ದುಬೈನ ಪ್ರತಿಷ್ಠಿತ ಸಭಾಂಗಣದಲ್ಲಿ ನಡೆಯಲಿರುವ ವಿಶ್ವಕನ್ನಡ ಸಾಂಸ್ಕೃತಿಕ ಸಮ್ಮೇಳನದ ಅಧ್ಯಕ್ಷರನ್ನಾಗಿ ಕಲ್ಯಾಣ ಕರ್ನಾಟಕದ ಸಮಾಜ ಸೇವಕಿ. ಚಿಂತಕಿ. ರಾಜಕಾರಣಿ ಆಗಿರುವ ಶ್ರೀಮತಿ ಶ್ರೀದೇವಿ ಆರ್ ವಿ ನಾಯಕ್ ಅವರನ್ನು ಇಂದು ನಡೆದ ಸಭೆಯಲ್ಲಿ ಆಯ್ಕೆ ಮಾಡಲಾಯಿತು.

ಕವಿಗೋಷ್ಠಿ. ಮಹಿಳಾ ಗೋಷ್ಠಿ ಚಿಂತನಾಗೋಷ್ಠಿ ಸಾಂಸ್ಕೃತಿಕ ಕಾರ್ಯಕ್ರಮಗಳು ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧಕರಿಗೆ ಪ್ರಶಸ್ತಿ ಪ್ರಧಾನ ಇನ್ನಿತರ ವಿಶೇಷ ಕಾರ್ಯಕ್ರಮಗಳನ್ನು ದುಬೈನಲ್ಲಿ ಇನ್ನಿತರ ವಿಶೇಷ ಕಾರ್ಯಕ್ರಮಗಳನ್ನು ಹೊರನಾಡಿನ ಕನ್ನಡಿಗರು ಮತ್ತು ಕರ್ನಾಟಕ ರಾಜ್ಯದ ಕಲಾವಿದರಿಂದ ಈ ಸಮ್ಮೇಳನದಲ್ಲಿ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ. ಕಲಾ ಸಂಕುಲ ಸಂಸ್ಥೆ ಕಾರ್ಯದರ್ಶಿ ಮಾರುತಿ ಬಡಿಗೇರ್ ತಿಳಿಸಿದ್ದಾರೆ

# ಒಂದು ದಿನದ ಉಚಿತ ಕಾರ್ಯಾಗಾರವನ್ನು (ಟಿಇಟಿ) ಕಾರ್ಯಕ್ರಮ ನಡೆಯಿತು

**ಮಲ್ಲಮ್ಮ ನುಡಿ ವಾರ್ತೆ**

**ಲಿಂಗಸುಗೂರು:** ಪಟ್ಟಣದ ವಿದ್ಯಾ ಚೇತನ ಪಿಯು ಕಾಲೇಜಿನಲ್ಲಿ ಏಕಲವ್ಯ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ ಹಿರೇ ಉಪ್ಪೇರಿ ಹಾಗೂ ವಿಶ್ವಜ್ಞಾನಿ ಸ್ಪರ್ಧಾತ್ಮಕ ತರಬೇತಿ ಕೇಂದ್ರ ಇವರ ಸಂಯುಕ್ತಾಶ್ರಯದಲ್ಲಿ ಕರ್ನಾಟಕ ರಾಜ್ಯ ಶಿಕ್ಷಕ ಅರ್ಹತಾ ಪರೀಕ್ಷೆ ಕುರಿತು ಒಂದು ದಿನದ




ಉಚಿತ ಕಾರ್ಯಾಗಾರವನ್ನು ನಡೆಸಲಾಯಿತು ಈ ಕಾರ್ಯಾಗಾರದಲ್ಲಿ ಜಿಲ್ಲೆಯ ಬೇರೆ ಬೇರೆ ಭಾಗದಿಂದ ಸುಮಾರು 250ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು ಈ ಸಂದರ್ಭದಲ್ಲಿ ನಾಗರಾಜ ಕುರಿಕಾರ ಅಧ್ಯಕ್ಷರು ಏಕಲವ್ಯ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ ಮುಖ್ಯ ಅತಿಥಿಗಳು ಶ್ರೀ ಶರಣಬಸವ ಕೆ ಗುಡದಿನ್ನಿ ,ದುರಗಪ್ಪ ಬಂಡೇಭಾವಿ ವ್ಯವಸ್ಥಾಪಕ ವಿಶ್ವ ಜ್ಞಾನಿ ಸ್ಪರ್ಧಾತ್ಮಕ ತರಬೇತಿ ಕೇಂದ್ರ

ರಾಘವೇಂದ್ರ ಹಿರೇ ಉಪ್ಪೇರಿ ಪ್ರಧಾನ ಕಾರ್ಯದರ್ಶಿ ,ವೆಂಕಟೇಶ್ ನಾಯಕ ಪ್ರಾಚಾರ್ಯರು ಶ್ರೀ ಯಲಪ್ಪ ಕಮದಾಳ ಮನೋವಿಜ್ಞಾನ ಸಂಪನ್ಮೂಲ ಉಪನ್ಯಾಸಕರು ಧಾರವಾಡ ,

ಶ್ರೀ ಮುದಕಪ್ಪ ಇಂಗ್ಲಿಷ್ ಸಂಪನ್ಮೂಲ ಉಪನ್ಯಾಸಕರು,ಬಸವರಾಜ ಕನ್ನಡ ಸಂಪನ್ಮೂಲ ಉಪನ್ಯಾಸಕರು,ಸಂಸ್ಥೆಯ ಸದಸ್ಯರು ಶಾಂತಕುಮಾರ ಶಿವುಕುಮಾರ್ ಕೋಠ ಬಸವರಾಜ ನಾಯಕ ಹನುಮೇಶ ,ಗ್ಯಾನರಾಜ ,ವೀರೇಶ.

ಶಿವು ಯರಗುಂಟಿ ರಮೇಶ ತೋರದಿನ್ನಿ ರಮೇಶ ನಾಯಕ.ಶ'ರಣಬಸವ,ಶರಣಗೌಡ,ದೇವಣ್ಣ.ನಿರೂಪಣೆ ಸಂಗಣ್ಣ ಹೂಗಾರ ಮಾನಪ್ಪಗೌಡ ಸೇರಿದಂತೆ ಉಪಸ್ಥಿತರಿದ್ದರು

# ಫೆಡರಲ್ ಶಿಕ್ಷಣ ಸಂಸ್ಥೆಯಿಂದ ಜಫರ್ ಮೊಹಿಯುದ್ದೀನ್ ಗೆ ಸನ್ಮಾನ



**ಮಲ್ಲಮ್ಮ ನುಡಿ ವಾರ್ತೆ**

**ರಾಯಚೂರು:** ನ.24-ಯರಮರಸನಲ್ಲಿರುವ ಫೆಡರಲ್ ಶಿಕ್ಷಣ ಸಮೂಹಗಳ ವತಿಯಿಂದ ಸೋಮವಾರ ಶಾಲಾ ಆವರಣದಲ್ಲಿ ಕನ್ನಡ ರಾಜ್ಯೋತ್ಸವದ 2025ರ ಪ್ರಶಸ್ತಿಯನ್ನು ಪಡೆದ ಜಫರ್ ಮೊಹಿಯುದ್ದೀನ್ ಅವರಿಗೆ ಸಂಸ್ಥೆಯ ಅಧ್ಯಕ್ಷರಾದ ಮೋಹ್ಮದ್ ಅಬ್ದುಲ್ ಹೈ ಫೀರೋಜ್ ಅವರು ಸನ್ಮಾನಿಸಿ ಗೌರವಿಸಿದರು. ಜಫರ್ ಮೊಹಿಯುದ್ದೀನ್ ಅವರು

ನಿರ್ದೇಶಕ, ಧ್ವನಿ ಕಲಾವಿದರು ಸಮಾಜಿಕ ಕಾರ್ಯಕರ್ತರು, ಇನ್ನೂ ಹಲವಾರು ಸಂಸ್ಥೆಗಳೊಂದಿಗೆ ನಂಟು ಹೊಂದಿದ್ದಾರೆ.ನಂತರ ಜಫರ್ ಮೊಹಿಯುದ್ದೀನ್ ಅವರು ಶಾಲೆಯ ಮಕ್ಕಳಿಗೆ ಪ್ರಶಂಸಿಸಿ, ಶಿಕ್ಷಕರನ್ನು ಕಂಡಗ ಅವರಿಗೆ ಗೌರವನ್ನು ಸಲ್ಲಿಸಲ್ಲು ತಿಳಿಸಿದರು.

ನಂತರ ಗುರುರಾಯ ಸಹೋದಯ ಕ್ರೀಡಾ ಕೂಟವನ್ನು ನಗರದ ನವೋದಯ ಸೇಂಟ್ರಲ್ ಪಬ್ಲಿಕ್ ಶಾಲೆಯಲ್ಲಿ ದಿ 21 ಮತ್ತು 22ರಂದು ಹಮ್ಮಿಕೊಂಡಿದ್ದ ಕ್ರೀಡಕೂಟದಲ್ಲಿ ನಮ್ಮ ಶಾಲೆಯ ಮಕ್ಕಳು ಭಾಗವಯಿಸಿದ್ದು, ಅದರಲ್ಲಿ 100ಮೀ ಓಟದಲ್ಲಿ ಪ್ರಥಮ ಸ್ಥಾನವನ್ನು ಪಡೆದ ಕು. ಅಮೂಲ್ಯ, 200ಮೀ ಓಟದಲ್ಲಿ ದ್ವಿತೀಯ ಸ್ಥಾನ, 400ಮೀ ಓಟದಲ್ಲಿ ಕು. ನಿಕೀತಾ ದ್ವಿತೀಯ ಸ್ಥಾನ, 400+100ಮೀ ಓಟದಲ್ಲಿ ಕು. ನಿಕೀತಾ, ಅಮೂಲ್ಯ, ಹರಿಪ್ರಿಯ, ಭವಾನಿ, ತೃತೀಯಾ ಸ್ಥಾನ, 400*200ಮೀ ಓಟದಲ್ಲಿ ಕು. ನಿಕೀತಾ, ಅಮೂಲ್ಯ, ಹರಿಪ್ರೀಯ, ಭವಾನಿ, ಪ್ರಥಮ ಸ್ಥಾನ, ಟೇಬಲ್ ಟೇನೀಸ್ ಆಟದಲ್ಲಿ ಅಕ್ಷಿತಾ, ಸೌಜನ್ಯ ತೃತೀಯ ಸ್ಥಾನ, ಮಹಿಳ ಕ್ರೀಕೆಟನಲ್ಲಿ ಕು.ಅಕ್ಷಿತಾ ಮತ್ತು ಅವರ ತಂಡ ದ್ವಿತೀಯ ಸ್ಥಾನ ಪಡೆದವರಿಗೆ ಬಹುಮಾನಗಳನ್ನು ವಿತರಿಸಿ ಪ್ರೋತ್ಸಾಯಿಸಿದರು. ಈ ಸಂದರ್ಭದಲ್ಲಿ. ಅಕ್ತರ್ ಮೊಹಿಯುದ್ದೀನ್, ಮೋಹ್ಮದ್ ಇಕ್ಬಲ್, ಎಜಾಸ ಹೈಮಾದ್, ಮಕ್ಬುಲ್ ಮೊಹಿಯುದ್ದೀನ್, ಕಾರ್ಯನಿರ್ವಾಹಕ ನಿರ್ದೇಶಕಿ ಶ್ರೀಲೇಖಾ ಹಾಗೂ ಶಾಲಾ ಮುಖ್ಯಗುರುಗಳು ಹಾಗೂ ಶಾಲೆಯ ಸಹ ಶಿಕ್ಷಕಿಯರು-ಭೋದಕೇತ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ಸ್ನೇಹಾ ಪ್ರೀಯಾ ಸತಿ ಇವರು ನಿರೂಪಣೆ ಮತ್ತು ವಂದನಾರ್ಪಣೆಯನ್ನು ಸಲ್ಲಿಸಿದರು.

# ಧಾರ್ಮಿಕ ಕೇಂದ್ರಗಳಲ್ಲಿ ಹೈಮಾಸ್ಟ್ ಲೈಟ್ ಅಳವಡಿಕೆ : ಎಸ್ ಬೋಸರಾಜು



**ಮಲ್ಲಮ್ಮ ನುಡಿ ವಾರ್ತೆ**

**ರಾಯಚೂರು:** ಡ್ಯಾಡಿ ಕಾಲೋನಿಯಲ್ಲಿರುವ ಶ್ರೀ ಈಶ್ವರ ದೇವಸ್ಥಾನಕ್ಕೆ ಬರುವ ಭಕ್ತಾದಿಗಳಿಗೆ ಹಾಗೂ ಸಾರ್ವಜನಿಕರಿಗೆ ಅನುಕೂಲವಾಗಲಿ ಎಂದು ದೇವಸ್ಥಾನದ ಆವರಣದಲ್ಲಿ ಹೈ-ಮಾಸ್ ಲೈಟ್ ಹಾಕಲಾಗಿದೆ. ಜಾಗ್ರತೆಯಿಂದ ಉಪಯೋಗಿಸುವ ಮೂಲಕ ಹೈಮಾಸ್ ಲೈಟನ್ನು ಉಪಯೋಗಿಸಬೇಕು. ಈ ದೇವಸ್ಥಾನ ಆವರಣದಲ್ಲಿ ಸಿಸಿ ನೆಲಹಾಸಿಗಾಗಿ ಸಿಸಿ ಕಾಂಕ್ರೆಟ್ ನೆಲಹಾಸಿಗಾಗಿ 5 ಲಕ್ಷ ಅನುದಾನ ನೀಡಿದ್ದೇನೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಇಲಾಖೆಯ ಸಚಿವರಾದ ಎಸ್ ಬೋಸರಾಜು ಅವರು ತಿಳಿಸಿದರು.

ರಾಯಚೂರು ನಗರದ ಡ್ಯಾಡಿ ಕಾಲೋನಿ ಬಡಾವಣೆಯಲ್ಲಿರುವ ಶ್ರೀ ಈಶ್ವರ ದೇವಸ್ಥಾನದಲ್ಲಿ ಹೈಮಾಸ್ ಲೈಟನ್ನು ಉದ್ಘಾಟಿಸಿ ಮಾತನಾಡಿದರು.

ಹೆಚ್ಚಿನ ಜನ ಸಂಪರ್ಕ ಮತ್ತು ಸಂಚಾರ ಜಾಸ್ತಿಯಿರುವಲ್ಲಿ ಕತ್ತಲೆ ಪ್ರದೇಶವಿದ್ದರೆ ಅಂತಹ ಸ್ಥಳಗಳಲ್ಲಿ ಲೈಟ್ ಅಳವಡಿಸಲು ಪ್ರಯತ್ನಿಸುತ್ತಿದ್ದೇವೆ.

ಹಂತ ಹಂತವಾಗಿ ಜನರ ಬೇಡಿಕೆಯಿರುವಲ್ಲಿ ಲೈಟ್ ಅಳವಡಿಸಲು ಕ್ರಮ ಕೈಗೊಳ್ಳಲಾಗುವುದು.

ನಮ್ಮ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಅಭಿವೃದ್ಧಿ ದೃಷ್ಟಿಯಿಂದ ರಾಯಚೂರು ನಗರವನ್ನು ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿಸಲಾಗಿದೆ. ಏರ್ಪೋರ್ಟ್ ಕಾಮಗಾರಿ ಪ್ರಗತಿಯಲ್ಲಿದೆ, ಚಂದ್ರ ಮೌಳೇಶ್ವರ ವೃತ್ತದಿಂದ ಗಂಜ್ ಸಂಪರ್ಕಿಸುವ ರಸ್ತೆ ಹಾಗೂ ನಗರ ಸಂಪರ್ಕಿಸುವ ರಾಜ್ಯ ಹೆದ್ದಾರಿ ಅಭಿವೃದ್ಧಿ ಸೇರಿದಂತೆ ಇತರ ಅಭಿವೃದ್ಧಿ ಕಾಮಗಾರಿಗಳಿಗೆ ಕ್ರಮ ಕೈಗೊಳ್ಳಲಾಗಿದೆ.

ಆಸ್ತಿಯ ಇ-ಖಾತಾ ತೊಂದರೆ ಕುರಿತು ನನ್ನ ಗಮನಕ್ಕೆ ಬಂದಿದೆ ಈ ಕುರಿತು ಆಯುಕ್ತರೊಂದಿಗೆ ಮಾತನಾಡಲಾಗಿದೆ. ಖುದ್ದು ಅಧಿಕಾರಿಗಳು ಬಡಾವಣೆಗೆ ತೆರಳಿ ಇ-ಖಾತಾ ನೀಡಲು ಕ್ರಮ ಕೈಗೊಳ್ಳಬೇಕೆಂದು ತಿಳಿಸ ಲಾಗಿದೆ. ಹಂತ ಹಂತವಾಗಿ ಎಲ್ಲಾ ಸಮಸ್ಯೆಗಳ ಇತ್ಯರ್ಥಕ್ಕೆ ಪ್ರಯತ್ನಿಸಲಾಗುವುದು ಎಂದರು.

ಡ್ಯಾಡಿ ಕಾಲೋನಿಯ ಪ್ರಮೂಖ ರಸ್ತೆಯಾದ 80 ಅಡಿ ರಸ್ತೆ ಅಭಿವೃದ್ಧಿಗೆ ನಿರಂತರ ಪ್ರಯತ್ನಿಸುತ್ತಿದ್ದೇವೆ. ಮಳೆ ಹಾಗೂ ಕೆಲ ತಾಂತ್ರಿಕ ತೊಂದರೆಗಳಿಂದ ರಸ್ತೆ ಕಾಮಗಾರಿ ವಿಳಂಬವಾಗಿರಬಹುದು ಆದರೇ ಶೀಘ್ರದಲ್ಲಿ ಕಾಮಗಾರಿ ಮುಗಿಸಲು ಸೂಚನೆ ನೀಡಿದ್ದೇನೆ.

ಈ ಸಂದರ್ಭದಲ್ಲಿ ವೀರಶೈವ ಸಮಾಜದ ಜಿಲ್ಲಾ ಅಧ್ಯಕ್ಷರಾದ ಚಂದ್ರಶೇಖರ್ ಮಿರ್ಜಾಪೂರ್, ಉದಯ ಕುಮಾರ್ ಯಾಪಲದಿನ್ನಿ, ಕಾಂಗ್ರೆಸ್ ಹಿರಿಯ ಮುಖಂಡರಾದ ಜಯಣ್ಣ, ಕೆ ಶಾಂತಪ್ಪ, ರುದ್ರಪ್ಪ ಅಂಗಡಿ, ಜಿಂದಪ್ಪ, ಸತ್ಯ ನಾರಾಯಣ, ಸಂಗನಗೌಡ, ಶಿವಾನಂದ ಚುಕ್ಕಿ, ಶರಣಗೌಡ, ಮಲ್ಲನಗೌಡ ಪಾಟೀಲ್, ಚುಕ್ಕಿ ಶಿವಾನಂದ, ದೊಡ್ಡ ಬಸಪ್ಪಗೌಡ ಉದಯ ಕುಮಾರ್, ಬಸವರಾಜ ಪಾಟೀಲ್ ಅತ್ತನೂರು, ದಾನಗೌಡ ಸಿರವಾರ ಸೇರಿದಂತೆ ಅನೇಕರಿದ್ದರು.

# ಸಭಾಂಗಣ ಹಾಗೂ ಶಸ್ತ್ರ ಚಿಕಿತ್ಸಾ ವಿಭಾಗ ಉದ್ಘಾಟನೆಗೊಳ್ಳದಿರುವುದು ಏಕೆ ಎಂಬ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ವರದಿ: ಮಹಮ್ಮದ್ ಮುಸ್ತಾಫ್ ಲಿಂಗಸೂಗೂರು

**ಮಲ್ಲಮ್ಮ ನುಡಿ ವಾರ್ತೆ**

**ಲಿಂಗಸೂಗೂರು :** ತಾಲೂಕಿನ ರೋಗಿಗಳ ಅನುಕೂಲಕ್ಕಾಗಿ 2022-23 ನೇ ಸಾಲಿನ ಎಸ್ ಸಿ ಎಸ್ ಪಿ 1.5 ಕೋಟಿ ಅನುದಾನದಲ್ಲಿ ನಿರ್ಮಾಣಗೊಂಡಿರುವ ಸಭಾಂಗಣ ಹಾಗೂ ಶಸ್ತ್ರ ಚಿಕಿತ್ಸಾ ವಿಭಾಗ ಉದ್ಘಾಟನೆಗೊಳ್ಳದಿರುವುದು ಏಕೆ ಎಂಬ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ತಾಲೂಕು ಸಾರ್ವಜನಿಕ ಆಸ್ಪತ್ರೆ ಹಿಂಭಾಗದಲ್ಲಿ 1 ಕೋಟಿ 50 ಲಕ್ಷ ರೂಪಾಯಿಗಳ ಕಟ್ಟಡ ನಿರ್ಮಾಣಗೊಂಡಿದೆ. ಸಭಾಂಗಣ ಮತ್ತು ಶಸ್ತ್ರ ಚಿಕಿತ್ಸಾ ವಿಭಾಗವು ಎಲ್ಲ ಸೌಕರ್ಯಗಳನ್ನು ಒಳಗೊಂಡಿದ್ದು. ಉದ್ಘಾಟನೆ ಭಾಗ್ಯ ಕಂಡು ಜನರ ಸೇವೆಗೆ ಸಿದ್ದಗೊಳಿಸಬೇಕಿತ್ತು ಆದರೆ ಯಾವ ಕಾರಣಕ್ಕೆ ಈ ಕಟ್ಟಡವನ್ನು ಉಪಯೋಗಿಸಿಕೊಳ್ಳುತ್ತಿಲ್ಲ ಎಂಬುದು ಯಕ್ಷ ಪ್ರಶ್ನೆಯಾಗಿದೆ.

ಸರ್ಕಾರವು ಜನರ ಅನುಕೂಲಕ್ಕಾಗಿ ಕೋಟಿ ಕೋಟಿ ಅನುದಾನ ನೀಡಿ ಸೌಲಭ್ಯಗಳನ್ನು ನೀಡುತ್ತಿದೆ. ಆದರೆ ಸೇವೆಗೆ ಸಿದ್ದವಾಗಿರುವ ಕಟ್ಟಡವನ್ನು ಉದ್ಘಾಟನೆ ಮಾಡದೆ ಅಧಿಕಾರಿಗಳು, ಜನಪ್ರತಿನಿದಿಗಳು ಮೀನಾಮೇಶ ಮಾಡುತ್ತಿರುವುದು ಸಾರ್ವಜನಿಕರಿಗೆ ಮಾಡುತ್ತಿರುವ ಅನ್ಯಾಯವಾಗಿದೆ ಎಂದು ಜನ ಸಾಮಾನ್ಯರ ಮಾತುಗಳಾಗಿವೆ.

ಸದ್ಯ ತಾಲೂಕು ಆಸ್ಪತ್ರೆಯಲ್ಲಿ ಕಣ್ಣಿನ ಶಸ್ತ್ರ ಚಿಕಿತ್ಸೆ ಮಾಡುತ್ತಿದ್ದೂ. ಇದರಿಂದ ಬೇರೆ ಬೇರೆ ಶಸ್ತ್ರ ಚಿಕಿತ್ಸೆ ಮಾಡಲು ತೊಂದರೆಯಾಗುತಿದೆ. ಕಣ್ಣಿನ ಶಸ್ತ್ರ ಚಿಕಿತ್ಸೆ ಮಾಡಿಸಿಕೊಂಡವರು ವಿಶ್ರಾಂತಿ ಮಾಡಲು ಸ್ಥಳದ ಕೊರತೆಯಾಗುತ್ತಿತ್ತು.

ಈ ಕಾರಣಕ್ಕೆ ಕಣ್ಣಿನ ಶಸ್ತ್ರ ಚಿಕಿತ್ಸೆ ಮಾಡಿಸಿಕೊಳ್ಳುವವರಿಗೆ ತೊಂದರೆ ಆಗಬಾರದು ಎಂಬ ಉದ್ದೇಶದಿಂದ ಶಸ್ತ್ರ ಚಿಕಿತ್ಸೆ ಹಾಗೂ ಕೆಳಗಡೆ ಸಭಾಂಗಣ ನಿರ್ಮಾಣ ಮಾಡಲಾಗಿದೆ.

ಅನೈತಿಕ ತಾಣವಾಗಿ ಬದಲಾಗುತ್ತಿದೆ:






ಕಟ್ಟಡವು ಪೂರ್ಣ

ಗೊಂಡಿದ್ದು ನಿರ್ವಹಣೆ ಕೊರತೆಯಿಂದ ಕುಡುಕರ ಅಡ್ಡವಾಗಿ ಮಾರ್ಪಡಾಗುತ್ತಿದೆ. ಕಟ್ಟಡದ ಅವರದಲ್ಲಿ ಬೀಯರ್ ಬಾಟಲ್, ಸಿಗರೇಟ್, ಗುಟ್ಕಾ ಗಳೇ ತುಂಬಿವೆ.

ಪೂರ್ಣಗೊಂಡ ಕಟ್ಟಡವನ್ನು ಸಂಬಂಧಪಟ್ಟ ಇಲಾಖೆಯವರಿಗೆ ಹಸ್ತಾಂತರ ಮಾಡಿ ಒಂದು ವರ್ಷ ಗತಿಸಿದೆ. ಇದರ ಬಗ್ಗೆ ಗಮನ ಹರಿಸಬೇಕಾದ ಜನ ಪ್ರತಿನಿಧಿಗಳು ಯಾವುದೇ ಕಾರಣಗಳನ್ನು

ಹೇಳದೆ ಜನರ ಹಿತ ದೃಷ್ಟಿಯಿಂದ ತ್ವರಿತವಾಗಿ ತಾವುಗಳು ಮುಂದೆ ನಿಂತು ಉದ್ಘಾಟನೆ ಮಾಡಬೇಕು

ಎಂಬುದು ಜನರ ಒತ್ತಾಯವಾಗಿದೆ.

**ಎಲ್ಲ ಸೌಲಭ್ಯಗಳು ಹೊಂದಿದ್ದು, ಯಾವುದೇ ಕೊರತೆ ಇಲ್ಲ, ಸ್ಥಳೀಯ ಶಾಸಕರಿಗೆ ಉದ್ಘಾಟನೆಗೆ ಮನವಿ ಮಾಡಿದ್ದೇವೆ.ದಿನಾಂಕ ನಿಗದಿಯಾಗಿಲ್ಲ.**

**ಡಾ. ರುದ್ರಗೌಡ ಪಾಟೀಲ್**
ಮುಖ್ಯ ವೈದ್ಯಧಿಕಾರಿಗಳು
ತಾಲೂಕು ಸಾರ್ವಜನಿಕ ಆಸ್ಪತ್ರೆ
ಲಿಂಗಸೂಗೂರು

**ನಾವು ನಮ್ಮ ಸಿವಿಲ್ ಕೆಲಸ ಮುಗಿಸಿ ಕಟ್ಟಡವನ್ನು ಇಲಾಖೆಗೆ ಹಸ್ತಾಂತರ ಮಾಡಿ ಒಂದು ವರ್ಷವಾಗಿದೆ. ಇನ್ನು ಅಲ್ಲಿ ಉಪಯೋಗಕ್ಕೆ ಬೇಕಿರುವ ಸಲಕರಣೆಗಳು ಲಭ್ಯವಿಲ್ಲದ ಕಾರಣ ಉದ್ಘಾಟನೆ ಮಾಡಿಲ್ಲ ಎಂಬ ಮಾಹಿತಿ ನನಗಿದೆ.**

ರಾಜು ಮಹಿಂದ್ರಕರ್
ಗುತ್ತಿಗೆದಾರ

# ಮಾದರಿ ಸಿಎಂ ಆಗಿ ಪ್ರಥಮ ಸ್ಥಾನ ರಾಜ್ಯಮಟ್ಟಕ್ಕೆ ಗಂಗಾಧರ್ ಛಲವಾದಿ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ



ಲಿಂಗಸಗೂರು:ಬಳ್ಳಾರಿಯ ಜಿಲ್ಲಾ ಪಂಚಾಯತ್ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆ ಬೆಂಗಳೂರು ಹಾಗೂ ಉಂಕಿ ಸಣ್ಣರುದ್ರಪ್ಪ ಕಾನೂನು ಮಹಾವಿದ್ಯಾಲಯದ ಸಹಯೋಗದಲ್ಲಿ ನಾನಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಕಲಬುರ್ಗಿ ವಲಯ ಮಟ್ಟದ ಮಾದರಿ ವಿಧಾನಸಭಾ ಅಧಿವೇಶನ ಸ್ಪರ್ಧೆ ಕಾರ್ಯಕ್ರಮದಲ್ಲಿ ಕಲಬುರ್ಗಿ ವಲಯದ 15 ಕಾಲೇಜುಗಳ 55 ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಭಾಗವಹಿಸಿದ್ದ ವಿದ್ಯಾರ್ಥಿಗಳಲ್ಲಿ ಆಡಳಿತ ಪಕ್ಷ, ವಿರೋಧ ಪಕ್ಷದ ಶಾಸಕರನ್ನು ಆಯ್ಕೆ ಮಾಡಲಾಯಿತು. ನಂತರ ಸಭಾಧ್ಯಕ್ಷರ, ಮುಖ್ಯಮಂತ್ರಿಗಳ ಮತ್ತು ವಿರೋಧ ಪಕ್ಷದ ನಾಯಕರನ್ನು ಆಯ್ಕೆ ಮಾಡಿ ಸ್ಪರ್ಧೆಗೆ ಅಣಿಗೊಳಿಸಲಾಯಿತು.

ಮುಖ್ಯಮಂತ್ರಿಯಾಗಿ ಎಸ್ ಬಿ ಜಿ ಲಾ ಕಾಲೇಜು ಲಿಂಗಸುಗೂರಿನ ಅಂತಿಮ ವರ್ಷದ ವಿದ್ಯಾರ್ಥಿ ಗಂಗಾಧರ್ ಛಲವಾದಿ ಅವಿರೋಧವಾಗಿ ಆಯ್ಕೆಯಾದರು. ಮುಖ್ಯಮಂತ್ರಿಯ ಜವಾಬ್ದಾರಿಯನ್ನು ಅರಿತ ಅವರು ಅಚ್ಚುಕಟ್ಟಾಗಿ ಮಂತ್ರಿಪದವಿಗಳನ್ನು ಹಂಚಿಕೆ ಮಾಡಿ ಸಂಪುಟ ಸಹೋದ್ಯೋಗಿಗಳನ್ನು ಅವರಿಗೆ ನೀಡಿದ ಖಾತೆ ಅನುಸಾರ ಜವಾಬ್ದಾರಿ ನಿಭಾಯಿಸುವಂತೆ ಸಲಹೆ ಸೂಚನೆಗಳನ್ನು ನೀಡುತ್ತಾ, ವಿರೋಧ ಪಕ್ಷದ ನಾಯಕರು, ಶಾಸಕರುಗಳಿಂದ ಬಂದ ಪ್ರಶ್ನೆಗಳಿಗೆ ಅಂಕಿ ಸಂಖ್ಯೆ ಸಮೇತ ಉತ್ತಮ ರೀತಿಯಲ್ಲಿ ಉತ್ತರಿಸಿದ್ದಲ್ಲದೇ ತಮ್ಮ ಹಾವ–ಭಾವ ಉಡುಗೆ– ತೊಡುಗೆಗಳ ಮೂಲಕ ರಾಜಕಾರಣಿಗಳಂತೆ ನಡತೆ ಇದ್ದ ಕಾರಣ, ತೀರ್ಪುಗಾರರು ವೀಕ್ಷಕರು ಸ್ವಪಕ್ಷದ ಮಂತ್ರಿಗಳು, ಶಾಸಕರು ಮತ್ತು ವಿರೋಧ ಪಕ್ಷದ ನಾಯಕರ ಶಾಸಕರಿಂದ ಸೈ ಎನಿಸಿಕೊಂಡರು.

ನೆರೆದಿದ್ದ ಎಲ್ಲಾ ಜನರ ಅಚ್ಚು ಮೆಚ್ಚಿನ ಮುಖ್ಯಮಂತ್ರಿ ಎಂದು ಶುಭಾಷಯ ಕೋರಿ ಹಾರೈಸಿದರು. ಅಲ್ಲದೆ ಸ್ಪರ್ಧೆಯಲ್ಲಿ ಅಚ್ಚುಕಟ್ಟಾಗಿ ಜವಾಬ್ದಾರಿಯನ್ನು ನಿಭಾಯಿಸಿದನ್ನು ಗುರುತಿಸಿದ ತೀರ್ಪುಗಾರರು ಮಾದರಿ ಮುಖ್ಯಮಂತ್ರಿ ಎನ್ನುವುದರೊಂದಿಗೆ ಪ್ರಥಮ ಸ್ಥಾನವನ್ನು ನೀಡಿ ರಾಜ್ಯಮಟ್ಟಕ್ಕೆ ಆಯ್ಕೆ ಮಾಡಿದರು.

ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆ ಬೆಂಗಳೂರಿನ ನಿರ್ದೇಶಕರಾದ ಪ್ರೊಫೆಸರ್ ಡಾಕ್ಟರ್ ಸಿ ಎಸ್ ಪಾಟೀಲರು "ರಾಜಕೀಯ ವ್ಯಕ್ತಿಯಾಗುವುದಕ್ಕಿಂತ, ರಾಜಕೀಯ ಮುತ್ಸದ್ದಿಯಾಗಬೇಕಾಗಿದೆ" ಇದರಿಂದ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಕಾಪಾಡಬಹುದಾಗಿದೆ ಎಂದು ಹೇಳಿದರು.

ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆಯ ಸಂಶೋಧನಾ ಮುಖ್ಯಸ್ಥರಾದ ಡಾ. ರೇವಯ್ಯ ಒಡೆಯರ್ ತೀರ್ಪುಗಾರರು ಹಾಗೂ ವಂಕಿ ಸಣ್ಣ ರುದ್ರಪ್ಪ ಕಾನೂನು ಮಹಾವಿದ್ಯಾಲಯದ ಕಾರ್ಯದರ್ಶಿಗಳು, ಪ್ರಾಂಶುಪಾಲರು, ಸಿಬ್ಬಂದಿ ಮತ್ತು ಕಾನೂನು ವಿದ್ಯಾರ್ಥಿಗಳು ಒಟ್ಟಾಗಿ ಸೇರಿ ಗಂಗಾಧರ್ ಅವರಿಗೆ ಅಭಿನಂದಿಸಿ, ಹಾರೈಸಿದರು.

ಈ ವೇಳೆ ಎಸ್ ಬಿ ಜಿ ಲಾ ಕಾಲೇಜಿನ ಅಧ್ಯಕ್ಷರು, ಪ್ರಾಂಶುಪಾಲರು, ಮತ್ತು ಸಿಬ್ಬಂದಿ ವರ್ಗ ಕೂಡ ಅಭಿನಂದಿಸಿ ಗೌರವಿಸಿದರು.

# ಮಹಾನಗರ ಪಾಲಿಕೆಯ ನೂತನ ಮಹಾಪೌರರಾಗಿ ಪಿ.ಗಾದೆಪ್ಪ ಅಧಿಕಾರ ಸ್ವೀಕಾರ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ಬಳ್ಳಾರಿ ಮಹಾನಗರ ಪಾಲಿಕೆಯ ನೂತನ ಮಹಾಪೌರರಾಗಿ ಪಿ.ಗಾದೆಪ್ಪ ಅವರು ಸೋಮವಾರ ಅಧಿಕಾರ ಸ್ವೀಕಾರ ಮಾಡಿದರು. ಮಹಾನಗರ ಪಾಲಿಕೆಯ ಮೇಯರ್ ಕಚೇರಿ ಸಭಾಂಗಣದಲ್ಲಿ ನೂತನ ಮೇಯರ್ ಆದ ಪಿ.ಗಾದೆಪ್ಪ ಅವರು ದಾಖಲಾತಿಯಲ್ಲಿ ಸಹಿ ಹಾಕುವುದರ ಮೂಲಕ ಅಧಿಕೃತವಾಗಿ ಅಧಿಕಾರ ವಹಿಸಿಕೊಂಡರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಸದಸ್ಯರು, ಜನಪ್ರತಿನಿಧಿಗಳು ಹಾಗೂ ಪಾಲಿಕೆಯ ಅಧಿಕಾರಿಗಳು ಶುಭ ಕೋರಿದರು.

# ಸಿರುಗುಪ್ಪ: ಹಾಳು ಮುರುವಣಿ ಗ್ರಾಮದ ಸಿ.ಹೆಚ್. ಮಹಾಕಾಳಿ ರಾಜುಗೆ ಶ್ರೇಷ್ಠ ಮೀನು ಕೃಷಿಕ ಪ್ರಶಸ್ತಿ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ಸಿರುಗುಪ್ಪ ತಾಲ್ಲೂಕಿನ ಹಾಳು ಮುರುವಣೆ ಗ್ರಾಮದ ಸಿ.ಹೆಚ್.ಮಹಾಕಾಳಿ ರಾಜು ಅವರಿಗೆ 2025–26 ನೇ ಸಾಲಿನ ಶ್ರೇಷ್ಠ ಮೀನು ಕೃಷಿಕ ಪ್ರಶಸ್ತಿ ಲಭಿಸಿದೆ.

ಬೆಂಗಳೂರಿನ ಹೆಬ್ಬಾಳದ ಪಶುವೈದ್ಯಕೀಯ ಮಹಾವಿದ್ಯಾಲಯದ ಆವರಣದಲ್ಲಿ ನ.21 ರಿಂದ 23 ರ ವರೆಗೆ ನಡೆದ ಮತ್ಸ್ಯ ಮೇಳ ಕಾರ್ಯಕ್ರಮದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಸಿ.ಹೆಚ್.ಮಹಾಕಾಳಿ ರಾಜು ಅವರು 2012–13ನೇ ಸಾಲಿನಿಂದ ಇಲ್ಲಿಯವರೆಗೆ ಸುಮಾರು 50 ಎಕರೆ ಸ್ವಂತ ಜಮೀನಿನಲ್ಲಿ ಮೀನು ಕೃಷಿ ಕೊಳಗಳನ್ನು ನಿರ್ಮಿಸಿಕೊಂಡು ಪ್ರತಿ ಎಕರೆ ವಿಸ್ತೀರ್ಣದ ಮೀನುಕೊಳದಲ್ಲಿ 4.5 ರಿಂದ 5.0 ಟನ್ ನಂತೆ ಒಟ್ಟು 225 ಟನ್ ಮೀನನ್ನು ಉತ್ಪಾದನೆ ಮಾಡುತ್ತಿದ್ದು, ಪ್ರತಿ ವರ್ಷ ಕನಿಷ್ಠ 1.0 ಕೋಟಿಯಷ್ಟು ನಿವ್ವಳ ಲಾಭ ಪಡೆಯುತ್ತಾ ಜಿಲ್ಲೆಯ ಯಶಸ್ವಿ ಮೀನು ಕೃಷಿಕ ಎಂದೆನಿಸಿಕೊಂಡಿದ್ದಾರೆ.

ಇವರು ಪ್ರಾರಂಭದಿಂದಲೂ ವೈಜ್ಞಾನಿಕ ರೀತಿಯಲ್ಲಿ ಮೀನು ಕೃಷಿಯನ್ನು ಮಾಡುತ್ತಿದ್ದು, ಮೀನುಗಾರಿಕೆ ಇಲಾಖೆ ಮತ್ತು ಮೀನು ಕೃಷಿ ತಜ್ಞರ ಮಾರ್ಗದರ್ಶನದಿಂದ ಪ್ರತಿವರ್ಷವೂ ಉತ್ತಮ ಮೀನು ಬೆಳೆಯನ್ನು ಬೆಳೆಯುವಲ್ಲಿ ಯಶಸ್ವಿಯಾಗಿದ್ದಾರೆ. ಇವರ ಸಾಧನೆಯನ್ನು ಗುರುತಿಸಿದ ಮೀನುಗಾರಿಕೆ ಇಲಾಖೆಯು ನ.22 ರಂದು ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲಸಾರಿಗೆ ಸಚಿವ ಮಂಕಾಳಎಸ್.ವೈದ್ಯ ಅವರು ಪ್ರಶಸ್ತಿ ವಿತರಿಸಿದ್ದಾರೆ.

ಸಿರುಗುಪ್ಪ ತಾಲ್ಲೂಕಿನ ಹಾಳು ಮುರುವಣೆ ಗ್ರಾಮದ ಸಿ.ಹೆಚ್. ಮಹಾಕಾಳಿ ರಾಜು ಅವರು ಶ್ರೇಷ್ಠ ಮೀನು ಕೃಷಿಕ ಪ್ರಶಸ್ತಿ ಭಾಜನರಾಗಿದ್ದು, ಅತೀವ ಸಂತೋಷವಾಗಿದೆ ಎಂದು ಜಿಲ್ಲಾ ಮೀನುಗಾರಿಕೆ ಉಪನಿರ್ದೇಶಕ ಶಿವಣ್ಣ ಅವರು ಅಭಿನಂದನೆ ತಿಳಿಸಿದ್ದಾರೆ.

# ಮಹಿಳೆಯರ ಮೇಲಿನ ದೌರ್ಜನ್ಯ ನಿರ್ಮೂಲನೆಗೆ ಅಂತರಾಷ್ಟ್ರೀಯ ದಿನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ: ಜಿಲ್ಲಾ ನ್ಯಾಯಾಂಗ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಇವರ ಸಂಯುಕ್ತಾಶ್ರಯದಲ್ಲಿ ನ.25 ರಂದು ಸಂಜೆ 05 ಗಂಟೆಗೆ ನಗರದ ತಾಳೂರು ರಸ್ತೆಯ ಹೊಸ ನ್ಯಾಯಾಲಯದ ಸಭಾಂಗಣದಲ್ಲಿ 'ಮಹಿಳೆಯರ ಮೇಲಿನ ದೌರ್ಜನ್ಯ ನಿರ್ಮೂಲನೆಗೆ ಅಂತರಾಷ್ಟ್ರೀಯ ದಿನ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಕೆ.ಜಿ.ಶಾಂತಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ಸಂಪನ್ಮೂಲ ವ್ಯಕ್ತಿಗಳಾಗಿ ಜಿಲ್ಲಾ ವಕೀಲರ ಸಂಘದ ವಕೀಲರಾದ ಶಿವಲೀಲ ಅವರು ಭಾಗವಹಿಸುವರು.

ಕಾರ್ಯಕ್ರಮದಲ್ಲಿ ಜಿಲ್ಲಾ ನ್ಯಾಯಾಲಯದ ಎಲ್ಲಾ ನ್ಯಾಯಾಧೀಶರು ಹಾಗೂ ನ್ಯಾಯಾಲಯದ ಸಿಬ್ಬಂದಿ ವರ್ಗ ಉಪಸ್ಥಿತರಿರುವರು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ತಿಳಿಸಿದ್ದಾರೆ.

# ಸಾರಿಗೆ ಇಲಾಖೆಯಿಂದ ಬಾಕಿ ದಂಡಕ್ಕೆ ವಿಶೇಷ ರಿಯಾಯಿತಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು: ಕರ್ನಾಟಕ ರಾಜ್ಯ ಸಾರಿಗೆ ಇಲಾಖೆಯು 1991–92ರಿಂದ 2019–20ರ ಅವಧಿಯಲ್ಲಿ ಮೋಟಾರು ಕಾಯ್ದೆ ನಿಯಮಗಳ ಉಲ್ಲಂಘನೆ ಸಂಬಂಧ ದಾಖಲಾಗಿ ಬಾಕಿ ಉಳಿದಿರುವ ಡಿಎಸ್‌ಎ (ಇಲಾಖಾ ಶಾಸನ) ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50ರಷ್ಟು ರಿಯಾಯಿತಿ ನೀಡಲು ಸರ್ಕಾರ ವಿಶೇಷ ಅವಕಾ ಕಲ್ಪಿಸಿದ್ದು, ಈ ಹಿನ್ನೆಲೆಯಲ್ಲಿ 2025ರ ನವೆಂಬರ್ 21ರಿಂದ ಡಿಸೆಂಬರ್ 12ರವರೆಗೆ ವಾಹನ ಮಾಲೀಕರು ಬಾಕಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶ ನೀಡಲಾಗಿದೆ ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೃಹರಕ್ಷಕರ ರಾಜ್ಯಮಟ್ಟದ ವೃತ್ತಿಪರ ಕ್ರೀಡಾಕೂಟದಲ್ಲಿ ಬಳ್ಳಾರಿ ತಂಡ ಚಾಂಪಿಯನ್‌ಶಿಪ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ:ಬೆಂಗಳೂರಿನ ಬನ್ನೇರುಘಟ್ಟದ ಮುಂಡ್ಕೂರ್ ತರಬೇತಿಯ ಅಕಾಡೆಮಿ ಮೈದಾನದಲ್ಲಿ ಶುಕ್ರವಾರ ನಡೆದ 2025–26ನೇ ಸಾಲಿನ ಗೃಹರಕ್ಷಕರ ರಾಜ್ಯಮಟ್ಟದ ವೃತ್ತಿಪರ ಹಾಗೂ ಕ್ರೀಡಾಕೂಟಗಳಲ್ಲಿ ಬಳ್ಳಾರಿ ಜಿಲ್ಲೆಯ ಕ್ರೀಡಾಪಟುಗಳ ತಂಡ ಚಾಂಪಿಯನ್‌ಶಿಪ್ ಕಪ್ ಮುಡಿಗೇರಿಸಿಕೊಂಡಿದೆ.

ಅಂದು ಸಂಜೆ ನಡೆದ ಸಮಾರೋಪ ಸಮಾರಂಭದಲ್ಲಿ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು ಹಾಗೂ ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಹೆಚ್ಚುವರಿ ಮಹಾ ನಿರ್ದೇಶಕ ನಂಜುಂಡಸ್ವಾಮಿ ಅವರು ಕಪ್ ವಿತರಣೆ ಮಾಡಿದರು.

ಈಶಾನ್ಯ ವಲಯದ ವೃತ್ತಿಪರ ಕ್ರೀಡೆಗಳಾದ ರೈಫಲ್ ಡ್ರಿಲ್, ರಕ್ಷಣೆಯಲ್ಲಿ ಪುರುಷರ ವಿಭಾಗವು ಪ್ರಥಮ ಸ್ಥಾನ ಮತ್ತು ಮಹಿಳಾ ವಿಭಾಗವು ಪ್ರಥಮ ಚಿಕಿತ್ಸೆಯಲ್ಲಿ ಪ್ರಥಮ ಸ್ಥಾನ ಮತ್ತು ರೈಫಲ್‌ಡ್ರಿಲ್ ನಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.

ನ.16 ರಿಂದ 21 ರವರೆಗೆ ನಡೆದ ಕ್ರೀಡಾಕೂಟಗಳಲ್ಲಿ ಕ್ರೀಡೆಗಳಾದ 100 ಮೀ. ಓಟ, 400 ಮೀ. ಓಟ, 800 ಮೀ. ಓಟ, ಉದ್ದ ಜಿಗಿತ, ಎತ್ತರ ಜಿಗಿತ ಮತ್ತು ವೃತ್ತಿಪರ ಕ್ರೀಡೆಗಳಾದ ಪ್ರಥಮ ಚಿಕಿತ್ಸೆ, ಅಗ್ನಿಶಮನ, ರೈಫಲ್ ಡ್ರಿಲ್, ರಕ್ಷಣೆ ಮತ್ತು ರೈಫಲ್ ಸಹಿತ ಶೂಟಿಂಗ್ ಸ್ಪರ್ಧೆಗಳಲ್ಲಿ ಈಶಾನ್ಯ ವಲಯದ 65 ಜನ ಗೃಹರಕ್ಷಕರು ಭಾಗವಹಿಸಿದ್ದರು.

2025–26ನೇ ಸಾಲಿನ ಗೃಹರಕ್ಷಕ ವೃತ್ತಿಪರ ಹಾಗೂ ಕ್ರೀಡಾಕೂಟದಲ್ಲಿ ಬಳ್ಳಾರಿ ತಂಡವು ಚಾಂಪಿಯನ್‌ಶಿಪ್ ಕಪ್ ಗೆದ್ದ ಸಂದರ್ಭದಲ್ಲಿ ಬಳ್ಳಾರಿ ಜಿಲ್ಲೆಯ ಜಿಲ್ಲಾ ಸಮಾದೇಷ್ಟರಾದ ಯಮ್ಮಿಗನೂರು ಶೇಖ್ ಸಾಬು, ಭೋದಕ ಬಸವರಾಜ ಹಗಳಗಾರ, ಸೀನಿಯರ್ ಪ್ಲಟೂನ್ ಕಮಾಂಡರ್ ಬಿ.ಕೆ.ಬಸವಲಿಂಗ, ಪ್ಲಟೂನ್ ಕಮಾಂಡರ್ ಹೆಚ್.ಲಕ್ಷ್ಮೀನಾರಾಯಣ ಮತ್ತು ಗೃಹರಕ್ಷಕ–ಗೃಹರಕ್ಷಕಿಯರು, ಜಿಲ್ಲೆಯ ಎಲ್ಲಾ ಅಧಿಕಾರಿಗಳು ಮತ್ತು ಗೃಹರಕ್ಷಕರು ಅಭಿನಂದನೆ ತಿಳಿಸಿದ್ದಾರೆ.

# ಗರ್ಭಿಣಿ ಸ್ತ್ರೀಯರು ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಲು ಡಾ.ಹನುಮಂತಪ್ಪ ಸಲಹೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ಗರ್ಭಿಣಿ ಸ್ತ್ರೀಯರಿಗೆ ಪ್ರತಿ ತಿಂಗಳು 9ನೇ ಮತ್ತು 24ನೇ ತಾರೀಖಿನಂದು ಗಂಡಾಂತರ ಗರ್ಭಿಣಿಯರ ಆರೋಗ್ಯ ತಪಾಸಣೆ ಕೈಗೊಳ್ಳುವ ಕಾರ್ಯ ನಿರಂತರವಾಗಿ ನಡೆಯುತ್ತಿದ್ದು, ಎಲ್ಲಾ ಗರ್ಭಿಣಿ ಸ್ತ್ರೀಯರು ನಿಯಮಿತವಾಗಿ ಆರೋಗ್ಯ ತಪಾಸಣೆಗೆ ಒಳಗಾಗಬೇಕು ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಹೇಳಿದರು.

ಸೋಮವಾರ, ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ ಕಾರ್ಯಕ್ರಮ ಹಿನ್ನಲೆಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸಂಗನಕಲ್ಲು, ಸಮುದಾಯ ಆರೋಗ್ಯ ಕೇಂದ್ರ ಮೋಕ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಯರ್ರಗುಡಿಗೆ ಭೇಟಿ ನೀಡಿ ಪರಿಶೀಲಿಸಿ ಅವರು ಮಾತನಾಡಿದರು.

ಸಾಮಾನ್ಯವಾಗಿ 12 ವಾರದ ಒಳಗೆ ಗರ್ಭಿಣಿ ಎಂದು ತಿಳಿದ ದಿನವೇ ಹತ್ತಿರದ ಆಸ್ಪತ್ರೆಗೆ ಭೇಟಿ ನೀಡಿ ತಪಾಸಣೆ ಮಾಡಿಸುವ ಮೂಲಕ ತಾಯಿ ಕಾರ್ಡ್‌ನಲ್ಲಿ ತಮ್ಮ ಎಲ್ಲಾ ಮಾಹಿತಿ ಒದಗಿಸಬೇಕು. ಇಲಾಖೆಯಡಿ ವೈದ್ಯರ ಸೂಚನೆಯಂತೆ ಪ್ರತಿ ತಿಂಗಳು ತೂಕ, ರಕ್ತದ ಪ್ರಮಾಣ ಹಾಗೂ ಇತರೆ ಅಗತ್ಯ ಪರೀಕ್ಷೆಗಳನ್ನು ಮಾಡಿಸುವುದರಿಂದ ಹೆರಿಗೆ ಸಮಯದಲ್ಲಿ ಅನಗತ್ಯ ಒತ್ತಡ ಉಂಟಾಗದಂತೆ ಮಾಡಬಹುದಾಗಿದೆ ಎಂದು ತಿಳಿಸಿದರು.

ಪ್ರಸ್ತುತ ಪ್ರತಿ ತಿಂಗಳು 24 ನೇಯ ತಾರೀಖಿನಂದು ಎಲ್ಲಾ ಗರ್ಭಿಣಿ ಸ್ತ್ರೀಯರಿಗೆ ಆರೋಗ್ಯ ತಪಾಸಣೆ ಮಾಡಲಾಗುತ್ತಿದ್ದು, ಮುಖ್ಯವಾಗಿ ಗಂಡಾಂತರ ಗರ್ಭಿಣಿಯರು(ಚೊಚ್ಚಲು ಗರ್ಭಿಣಿ, ಎತ್ತರ ಕಡಿಮೆ, ಅಧಿಕ ರಕ್ತದೊತ್ತಡ, ರಕ್ತದಲ್ಲಿ ಕಬ್ಬಿಣಾಂಶ ಕೊರತೆ, ಅವಳಿ–ಜವಳಿ ಗರ್ಭಿಣಿ, ವಿವಾಹವಾಗಿ ಐದಕ್ಕಿಂತ ಹೆಚ್ಚು ವರ್ಷಗಳ ನಂತರ ಗರ್ಭಿಣಿಯಾಗಿರುವುದು, ಮೊದಲ ಹೆರಿಗೆ ಸಿಸೇರಿಯನ್) ಎಂದು ಗುರ್ತಿಸಿದ ನಂತರ ನಿರ್ಲಕ್ಷಿಸುವಂತಿಲ್ಲ ಎಂದು ಮನವರಿಕೆ ಮಾಡಿದರು.

ತೀವ್ರರಕ್ತಹೀನತೆಯಂತಹ ಸನ್ನಿವೇಶದಲ್ಲಿ ಸ್ಥಳೀಯವಾಗಿ ನೀಡುವ ಚಿಕಿತ್ಸೆ ಐಎಫ್‌ಎ ಮಾತ್ರೆ, ಐರನ್ ಸುಕ್ರೋಸ್, ರಕ್ತ ಹಾಕಿಸುವಿಕೆ ಮಾಡಬೇಕು. ಸುಧಾರಣೆಯಾಗದಿದ್ದಲ್ಲಿ ತಜ್ಞರ ಬಳಿ ತಪ್ಪದೇ ತೆರಳಬೇಕು. ಅಗತ್ಯವಿದ್ದಲ್ಲಿ ಸ್ಕ್ಯಾನ್ ಮಾಡಿಸಬೇಕು. ಮೊದಲ ಹೆರಿಗೆ ಶಸ್ತ್ರಚಿಕಿತ್ಸೆ ಮೂಲಕವಾದಲ್ಲಿ ಪುನಃಗರ್ಭಿಣಿಯಾಗುವ ಅವಧಿಯನ್ನು ಕನಿಷ್ಟ 3 ವರ್ಷಕ್ಕೆ ಕಡ್ಡಾಯವಾಗಿ ಮುಂದೂಡಬೇಕು. ಇದಕ್ಕಾಗಿ ಅಂತರ ಚುಚ್ಚುಮದ್ದು, ಕಾಪರ್–ಟಿ, ನಿರೋಧ ಬಳಸಲು ಸಲಹೆ ಮಾಡಿದರು.

ವೈದ್ಯರು ಎಲ್ಲಾ ಗರ್ಭಿಣಿಯರ ತಾಯಿಕಾರ್ಡ್ ಪರಿಶೀಲಿಸಿ ಗೆಸ್ಟೋಸಿಸ್ ಸ್ಕೋರ್ ಬಗ್ಗೆ ಪರಿಶೀಲಿಸಲು ಹಾಗೂ ತಾಯಿಕಾರ್ಡ್‌ನಲ್ಲಿ ಗರ್ಭಿಣಿಯ ಆರೋಗ್ಯ ತಪಾಸಣೆ ಮಾಹಿತಿಯನ್ನು ತುಂಬಲು ವೈದ್ಯರಿಗೆ ಸೂಚಿಸಿದರು.

ಗರ್ಭಿಣಿಯರು ಪೌಷ್ಟಿಕ ಆಹಾರ ಸೇವಿಸುವುದರ ಜೊತೆಗೆ ವೈದ್ಯರ ಸಲಹೆಯಂತೆ ಉಚಿತವಾಗಿ ನೀಡುವ ಕಬ್ಬಿಣಾಂಶ ಮಾತ್ರೆಗಳನ್ನು ಪ್ರತಿದಿನ ಒಂದರಂತೆ ಕನಿಷ್ಟ 180 ಹಾಗೂ ಒಂದು ವೇಳೆ ರಕ್ತಹೀನತೆಯ ಪ್ರಮಾಣ ತೀವ್ರವಾಗಿದ್ದಲ್ಲಿ ದಿನಕ್ಕೆ 2 ರಂತೆ 360 ಮಾತ್ರೆಗಳನ್ನು 6 ತಿಂಗಳ ಅವಧಿಯಲ್ಲಿ ಸೇವಿಸಲು ಮತ್ತು ಇದರ ಜೊತೆಯಲ್ಲಿ ದೈಹಿಕವಾಗಿ ಸದೃಢವಾಗಿರಲು ಕ್ಯಾಲ್ಸಿಯಮ್ ಮಾತ್ರೆಗಳನ್ನು ಸಹ ನುಂಗಲು ತಿಳಿಸಿದರು.

ಈ ಸಂದರ್ಭದಲ್ಲಿ ವೈದ್ಯಾಧಿಕಾರಿಗಳಾದ ಡಾ.ರೇವಣಸಿದ್ದಪ್ಪ, ಡಾ.ಭಾರತಿ, ಡಾ.ಶರತ್‌ಚಂದ್ರ, ಡಾ.ಸೈಯದ ಹಫೀಜ ಸೇರಿದಂತೆ ಶುಶ್ರೂಷಣಾಧಿಕಾರಿಗಳು, ಆಸ್ಪತ್ರೆ ಸಿಬ್ಬಂದಿ ವರ್ಗದವರು, ತಾಯಂದಿರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ಸಂಸ್ಕಾರ ಗುಣಮಟ್ಟದ ಶಿಕ್ಷಣ ಅಗತ್ಯ:ಸಿಪಿಐ

ಮಲ್ಲಮ್ಮ ನುಡಿ ವಾರ್ತೆ




ಕಮಲನಗರ:ವಿದ್ಯಾರ್ಥಿಗಳು ಸಂಸ್ಕಾರ ಹಾಗೂ ಗುಣಮಟ್ಟದ ಶಿಕ್ಷಣ ಅಗತ್ಯ, ಮಕ್ಕಳಿಗೆ ಶಿಕ್ಷಣ ಜೊತೆಯಲ್ಲಿ ಸಾಮಾಜಿಕ ಮತ್ತು ಸಂಸ್ಕಾರ ಜ್ಞಾನ ಬಗ್ಗೆ ಬಳಸಬೇಕು ಎಂದು ಕಮಲನಗರ ಪೊಲೀಸ ಠಾಣೆ ಸಿಪಿಐ ಶ್ರೀಕಾಂತ ಅಲ್ಲಾಪುರೆ ನುಡಿದರು. ಪಟ್ಟಣದ ಡಾ. ಚನ್ನಬಸವ ಪಟ್ಟದ್ದೇವರು ಪ್ರೌಢ ಶಾಲೆ ಶ್ರೀ ಗುರಪ್ಪಾ ಟೊಣ್ಣೆ ಪ್ರಾಥಮಿಕ ಶಾಲೆ ಹಾಗೂ ಗುರುಕಾರುಣ್ಯ ಪಬ್ಲಿಕ್ ಸ್ಕೂಲ್‌ನಲ್ಲಿ ಸಂಯುಕ್ತವಾಗಿ ಮಕ್ಕಳ ದಿನಾಚರಣೆ ಆಚರಣೆ ಕಾರ್ಯಕ್ರಮದಲ್ಲಿ ಉದ್ಘಾಟನೆ ಮಾಡಿ ಮಾತನಾಡಿದರು. ಇಂದಿನ ಮಕ್ಕಳು ಮುಂದಿನ ಭವಿಷ್ಯ ಈ ಶಾಲೆಯಲ್ಲಿನ ವಿದ್ಯಾರ್ಥಿಗಳು ಸಂಸ್ಕಾರ ಹಾಗೂ ಗುಣಮಟ್ಟದ ಶಿಕ್ಷಣ ಪಡೆಯುತ್ತಿರುವದು ಒಳ್ಳೆಯ ವಿಚಾರ ಎಂದು ಹೇಳಿದರು. ಬಸವ ಪೂಜೆ ಶ್ರೀಯುತ ಪ್ರಕಾಶ ಟೊಣ್ಣೆ ಅವರು ನೆರವೇರಿಸಿ ಮಾತನಾಡಿದರು, ಗಡಿ ಭಾಗದಲ್ಲಿ ಮಕ್ಕಳಿಗೆ ಗುಣ ಮಟ್ಟ ಶಿಕ್ಷಣ ನೀಡುವ ಕೆಲವು ಶಾಲೆಯಲ್ಲಿ ಈ ಶಾಲೆ ಒಂದಾಗಿದೆ, ಮಕ್ಕಳು ಒಳ್ಳೆಯ ರೀತಿ ಶಿಕ್ಷಣ ಪಡೆದು ದೇಶ ಹೆಮ್ಮೆ ಪಡುವಂತಹ ಸಾಧನೆ ಮಾಡುಬೇಕು ಎಂದು ಕಿವಿಮಾತು ಹೇಳಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಸಂಜುಕುಮಾರ ಜುಮ್ಮಾ ಮಾತನಾಡಿದರು. ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ಶಾಲೆಯ ಆಡಳಿತಾಧಿಕಾರಿಗಳಾದ ಚನ್ನಬಸವ ಘಾಳೆ ವಹಿಸಿಕೊಂಡು ಅಧ್ಯಕ್ಷ ಭಾಷಣ ಮಾಡಿದರು. ಕಾರ್ಯಕ್ರಮದಲ್ಲಿ ಶಾಲೆಯ ಸಲಹಾ ಸಮಿತಿಯ ಸದಸ್ಯರಾವ ಶ್ರೀ ಭಿಮರಾವ ಶ್ರೀಗಿರೆ, ಶಿವರಾಜ ಪಾಟೀಲ ವೈಜಿನಾಥ ಭವರಾ, ಗುರುಕಾರುಣ್ಯ ಪಬ್ಲಿಕ್ ಶಾಲೆಯ ಪ್ರಾಂಶುಪಾಲರಾದ ಶ್ರೀ ನಿಲಕಂಠ ಪಾಂಡ್ರೆ ಹಾಗೂ ಶಾಲಾ ಸಿಬಂಧಿ ಉಪಸ್ಥಿತರಿದ್ದರು. ಶಾಲೆಯ ಶಿಕ್ಷಕರಾದ ಹಾವಗಿರಾವ ಮಠಪತಿ ನಿರುಪಿಸಿದರು ಹಾಗೂ ಶೇಖರ ಖೆಳಗೆ ವಂದಿಸಿದರು.

# ಮೊರಾರ್ಜಿ ದೇಸಾಯಿ ವಸತಿ ಶಾಲೆ ನಿರ್ಮಾಣ ಶಾಸಕ ಪ್ರಭು ಚವ್ಹಾಣರಿಂದ ಸ್ಥಳ ಪರಿಶೀಲನೆ



ಔರಾದ(ಬಿ) : ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ನ.24ರಂದು ವನಮಾರಪಳ್ಳಿ ಗ್ರಾಮಕ್ಕೆ ಭೇಟಿ ನೀಡಿ, ಮೊರಾರ್ಜಿ ದೇಸಾಯಿ ವಸತಿ ಶಾಲೆ ನಿರ್ಮಾಣ ಸ್ಥಳವನ್ನು ಪರಿಶೀಲಿಸಿದರು.

ತಹಸೀಲ್ದಾರರು ಮತ್ತು ಮತ್ತಿತರೆ ಅಧಿಕಾರಿಗಳೊಂದಿಗೆ ವಸತಿ ಶಾಲೆ ನಿರ್ಮಾಣ ಸ್ಥಳದಲ್ಲಿ ಸಂಚರಿಸಿ ಅಧಿಕಾರಿಗಳಿಂದ ಯೋಜನೆಯ ಬಗ್ಗೆ ಮಾಹಿತಿ ಪಡೆದರು. ಕಟ್ಟಡ ನಿರ್ಮಾಣಕ್ಕೆ ಬೇಕಿರುವ ಎಲ್ಲ ರೀತಿಯ ಪ್ರಕ್ರಿಯೆಗಳನ್ನು ಬೇಗ ಮುಗಿಸಿಕೊಳ್ಳುವಂತೆ ಸೂಚಿಸಿದರು. ವಸತಿ ಶಾಲೆ ನಿರ್ಮಿಸಲು ಗುರುತಿಸಿದ ಸ್ಥಳದಲ್ಲಿ ನೀರಿನ ಸಮಸ್ಯೆಯಿದೆ ಎಂದು ಅಧಿಕಾರಿಗಳು ಗಮನಕ್ಕೆ ತಂದಾಗ ಶಾಸಕರು ಮಾತನಾಡಿ, ಪಕ್ಕದ ಊರುಗಳಿಂದ ಅಥವಾ ಅನ್ಯ ಮೂಲಗಳಿಂದ ನೀರಿನ ವ್ಯವಸ್ಥೆ ಮಾಡಲಾಗುತ್ತದೆ. ಈಗಾಗಲೇ ಬಹಳಷ್ಟು ವಿಳಂಬವಾಗಿದ್ದು, ಇನ್ನು ಕಾಲಹರಣ ಮಾಡುವುದು ಬೇಡ ಎಂದರು. ಶಿಕ್ಷಣ ಕ್ಷೇತ್ರದ ಅಭಿವೃದ್ಧಿ ನನ್ನ ಮೊದಲ ಆದ್ಯತೆಯಾಗಿದ್ದು, ಅದರಂತೆ ಔರಾದ(ಬಿ) ವಿಧಾನಸಭಾ ಕ್ಷೇತ್ರದಲ್ಲಿ ಶಿಕ್ಷಣದ ಅಭಿವೃದ್ಧಿಗೆ ಎಲ್ಲ ರೀತಿಯ ಪ್ರಯತ್ನಗಳನ್ನು ಮಾಡುತ್ತಿದ್ದೇನೆ. ಶಿಕ್ಷಣಕ್ಕೆ ಸಂಬಂಧಿಸಿದಂತೆ ಕ್ಷೇತ್ರದಲ್ಲಿ ಸಾಕಷ್ಟು ಕೆಲಸ ಕಾರ್ಯಗಳಾಗಿವೆ. ಶಾಲಾ–ಕಾಲೇಜು, ವಸತಿ ಶಾಲೆ, ವಸತಿ ನಿಲಯಗಳು, ಐಟಿಐ, ಪಾಲಿಟೆಕ್ನಿಕ್, ಡಿಗ್ರಿ ಕಾಲೇಜುಗಳನ್ನು ಸ್ಥಾಪಿಸಲಾಗಿದೆ. ಬಲ್ಲೂರ(ಜೆ), ಚಿಂತಾಕಿ, ಹೊರಂಡಿ, ವನಮಾರಪಳ್ಳಿಯಲ್ಲಿ ಈಗಾಗಲೇ ವಸತಿ ಶಾಲೆಗಳನ್ನು ನಿರ್ಮಿಸಲಾಗಿದೆ.

ಪ್ರಸ್ತುತ ಔರಾದ(ಬಿ) ಪಟ್ಟಣದಲ್ಲಿ ಖಾಸಗಿ ಕಟ್ಟಡದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆ ನಡೆಸಲಾಗುತ್ತಿದೆ. ಅಲ್ಲಿಗೆ ನಾನು ಭೇಟಿ ನೀಡಿದಾಗ ಮಕ್ಕಳು ಸಾಕಷ್ಟು ಸಮಸ್ಯೆ ಎದುರುಸುತ್ತಿರುವುದು ಗಮನಕ್ಕೆ ಬಂದಿದೆ. ಸಣ್ಣ ಕೋಣೆಗಳಲ್ಲಿ ಬಹಳಷ್ಟು ವಿದ್ಯಾರ್ಥಿಗಳು ವಾಸಿಸುತ್ತಿದ್ದು, ನಾನಾ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಈ ಮಕ್ಕಳಿಗೆ ಅನುಕೂಲ ಕಲ್ಪಿಸಬೇಕೆಂಬ ಉದ್ದೇಶದಿಂದ ಸಾಧ್ಯವಾದಷ್ಟು ಬೇಗ ಹೊಸ ಕಟ್ಟಡ ನಿರ್ಮಿಸಬೇಕೆಂದು ನಿರ್ಧರಿಸಿ ಅವಶ್ಯಕ ಅನುದಾನ ತಂದು ಕಾಮಗಾರಿಗೆ ಮಂಜೂರಾತಿ ಪಡೆದಿದ್ದೇನೆ ಎಂದರು. ವನಮಾರಪಳ್ಳಿ ಗ್ರಾಮದಲ್ಲಿ ಈಗಾಗಲೇ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಯನ್ನು ಭವ್ಯ ಕಟ್ಟಡದಲ್ಲಿ ನಡೆಸಲಾಗುತ್ತಿದೆ. ಇದೀಗ ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಮಂಜೂರು ಮಾಡಿಸಿದ್ದೇನೆ. ಟೆಂಡರ್ ಆಗಿದೆ. ಶೀಘ್ರದಲ್ಲೇ 10 ಎಕರೆ ವಿಸ್ತೀರ್ಣದಲ್ಲಿ 21 ಕೋಟಿ ಮೊತ್ತದ ಬೃಹತ್ ವಸತಿ ಶಾಲೆ ನಿರ್ಮಾಣಗೊಳ್ಳಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರರಾದ ಮಹೇಶ ಪಾಟೀಲ, ಜಿಲ್ಲಾ ಸಮನ್ವಯಾಧಿಕಾರಿ ಶರಣಪ್ಪ ಬಿರಾದಾರ, ಮುಖಂಡರಾದ ಶಿವರಾಜ ಅಲ್ಮಾಜೆ, ನಾಗನಾಥ ಮೋರ್ಗೆ, ಅನೀಲ ನಾರಾಯಣಪೂರ, ಹುಲ್ಲಪ್ಪ ಚೋಪಡೆ, ಉಮಾಕಾಂತ ಚಂದಾಪೂರೆ, ಸುನೀಲ ಚೋಪಡೆ, ಬಸವರಾಜ ಚಂದಾಪೂರೆ, ಗೋವಿಂದ ಮಚಕೂರಿ, ಬಸವರಾಜ ಹಳ್ಳೆ, ಅಂಬಾದಾಸ ನೇಳಗೆ, ಪಪ್ಪು ಪಾರಾ, ಕ್ರೈಸ್ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬಾಲಕ ಕಾಣೆ: ಪತ್ತೆಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ: ಸಂಡೂರು ತಾಲ್ಲೂಕಿನ ಕುರೇಕುಪ್ಪ ಗ್ರಾಮದ ಮಲ್ಲಿಕಾರ್ಜುನ ಎನ್ನುವ 13 ವರ್ಷದ ಬಾಲಕ ಬಳ್ಳಾರಿ ತಾಲ್ಲೂಕಿನ ಚೇಳ್ಳಗುರ್ಕಿಯ ಗಾಂಧಿತತ್ವ ಆಧಾರಿತ ವಸತಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದು,

ನ.13 ರಂದು ಚೆಳ್ಳಗುರ್ಕಿಯಿಂದ ಬಳ್ಳಾರಿಗೆ ಹೋಗುತ್ತೇನೆ ಎಂದು ಕಾಣೆಯಾಗಿದ್ದು, ಈ ಕುರಿತು ಪಿ.ಡಿ.ಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಬಾಲಕನ ಪತ್ತೆಗೆ ಸಹಕರಿಸಬೇಕು ಎಂದು ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

ಕಾಣೆಯಾದ ಬಾಲಕನ ಚಹರೆ: ಎತ್ತರ 05 ಅಡಿ, ಕೋಲು ಮುಖ, ಎಣ್ಣೆಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿರುತ್ತಾನೆ.

ಕಾಣೆಯಾದ ಸಂದರ್ಭದಲ್ಲಿ ಪಿಂಕ್ ಮತ್ತು ಬಿಳಿ ಬಣ್ಣಗಳ ಮಿಶ್ರಿತ ಉದ್ದ ಗೆರೆವುಳ್ಳ ಫುಲ್ ಶರ್ಟ್ ಮತ್ತು ಬಿಳಿ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಪಿ.ಡಿ ಹಳ್ಳಿ ಪೊಲೀಸ್ ಠಾಣೆಯ ದೂ.08392–295010, ಪಿಎಸ್‌ಐ ಮೊ.9480803052, ಪಿಐ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100, ಎಸ್‌ಪಿ ಕಚೇರಿ ದೂ.08392–258400, ಸಿರುಗುಪ್ಪ ಡಿಎಸ್‌ಪಿ ಕಚೇರಿ ದೂ.08392–27600 ಅಥವಾ ಪಿ.ಡಿ ಹಳ್ಳಿ ವೃತ್ತದ ಸಿಪಿಐ ದೂ.08392–276461 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಗತ್ಯವುಳ್ಳವರಿಗೆ ಸಹಾಯ ಮಾಡುವುದೇ ಸಮಾಜ ಸೇವೆ: ಸನ್ನಪ್ಪನವರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಉದಾರತೆ ಹಾಗೂ ಶ್ರದ್ಧೆಯಿಂದ ದಾನ – ಧರ್ಮ ಮಾಡುವುದರಿಂದ ಉತ್ತಮ ಫಲದ ಜೊತೆ ಪುಣ್ಯ ಪ್ರಾಪ್ತಿಯೂ ಲಭಿಸುತ್ತದೆ ಎಂದು ಬಾಗಲಕೋಟೆ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಪಾಂಡುರಂಗ ಸನ್ನಪ್ಪನವರ ಹೇಳಿದರು. ಸಮೀಪದ ಬೆನಕಟ್ಟಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಬೆಳಗಾವಿಯ ಪ್ರಿಯಾನ್ಸ್ ಬಯೋಟೆಕ್ ಪ್ರೈವೇಟ್ ಕಂಪನಿ ವತಿಯಿಂದ ನೀಡಲಾದ(ಬಿಸಿಯೂಟಕ್ಕೆ) ತಟ್ಟೆ, ಗ್ಲಾಸ್ ಮತ್ತಿತರ ವಸ್ತುಗಳನ್ನು ಮಕ್ಕಳಿಗೆ ವಿತರಿಸಿ ಅವರು ಮಾತನಾಡಿದರು.

ಬಡವರು ಮತ್ತು ಅಗತ್ಯವಿರುವವರಿಗೆ ಸಹಾಯ ಮಾಡುವುದೇ ದಾನ. ಇದು ಸಮಾಜ ಸೇವೆ ಹಾಗೂ ದೇವರ ಸೇವೆಯೇ ಆಗಿದ್ದು, ಸರ್ಕಾರಿ ಶಾಲೆಗಳಲ್ಲಿ ಓದುವ ಬಡ ಹಾಗೂ ಮಧ್ಯಮ ವರ್ಗದ ಮಕ್ಕಳಿಗೆ ಸಹಾಯ ಮಾಡುವುದು ದೊಡ್ಡ ಪುಣ್ಯದ ಕಾರ್ಯ ಎಂದ ಸನ್ನಪ್ಪನವರ, ನಾವು ಒಳ್ಳೆಯದಕ್ಕೆ ದಾನ, ಧರ್ಮ ಮಾಡಿದರೆ ನಮಗೂ ಒಳ್ಳೆಯದೇ ಆಗುತ್ತದೆ ಎಂದರು. ಅತಿಥಿಗಳಾಗಿದ್ದ ಪ್ರಿಯಾನ್ಸ್ ಬಯೋಟೆಕ್ ಕಂಪನಿಯ ಬಾಗಲಕೋಟೆ ವಲಯ ಅಧಿಕಾರಿ ಮಲ್ಲಿಕಾರ್ಜುನ ಮಾತನಾಡಿ, ಶಾಲಾ ಮಕ್ಕಳಿಗೆ ಅಗತ್ಯ ವಸ್ತುಗಳನ್ನು ದೇಣಿಗೆ ನೀಡುವುದು ಪುಣ್ಯದ ಕಾರ್ಯವೇ ಸರಿ. ಆ ನಿಟ್ಟಿನಲ್ಲಿ ಈ ಶಾಲೆಗೆ ಮಕ್ಕಳಿಗಾಗಿ 100 ತಟ್ಟೆ, ಸ್ಟೀಲ್ ಗ್ಲಾಸ್ ಮತ್ತಿತರರ ನಿತ್ಯ ಬಳಕೆಯ ವಸ್ತುಗಳನ್ನು ಕಂಪನಿಯ ವತಿಯಿಂದ ನೀಡಲಾಗಿದೆ. ಮಕ್ಕಳು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು. ಶಿಕ್ಷಕ ರವಿ ಕೆಂಚನ್ನವರ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ಡಿ.ಎಂ.ಸಿ ಅಧ್ಯಕ್ಷ ಮಹಾಂತಗೌಡ ಪಾಟೀಲ ಅತಿಥಿಗಳಾಗಿದ್ದರು. ಶಾಲೆಯ ಮುಖ್ಯ ಶಿಕ್ಷಕ ಜಗನ್ನಾಥ ಪತ್ತಾರ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಕಿಯರಾದ ಎಸ್.ಆರ್. ಅಬ್ಬಿಗೇರಿ, ಎ.ಎಸ್.ಮಂತ್ರಿ, ಅಂಜಲಿ ಎಲ್., ಎ.ಬಿ.ಮೇಟಿ ವೇದಿಕೆಯಲ್ಲಿದ್ದರು.

# ಲೆಕ್ಕಪತ್ರ ಇಲಾಖೆ ನೌಕರರ ಕ್ರೀಡಾಕೂಟ ರಾಜ್ಯಮಟ್ಟದ ಕ್ರಿಕೆಟ್ ಪಂದ್ಯಾವಳಿಯಲ್ಲಿ ಜಿಲ್ಲೆಗೆ ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯ ಅಧಿಕಾರಿಗಳ ಹಾಗೂ ಸಿಬ್ಬಂದಿ ವರ್ಗದವರಿಗೆ ಹಮ್ಮಿಕೊಂಡ ರಾಜ್ಯಮಟ್ಟದ ಕ್ರೀಡಾಕೂಟದಲ್ಲಿ ಬಾಗಲಕೋಟೆ ಜಿಲ್ಲೆಯ ತಂಡ ಕ್ರಿಕೆಟ್ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಪಡೆದುಕೊಂಡಿದೆ.

ದಾವಣಗೇರಿಯಲ್ಲಿ ಇತ್ತೀಚೆಗೆ ನಡೆದ ರಾಜ್ಯಮಟ್ಟದ ಕ್ರೀಡಾಕೂಟದಲ್ಲಿ ಬಾಗಲಕೋಟೆಯ ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ ಅವರ ನೇತೃತ್ವದ ಕ್ರಿಕೆಟ್ ತಂಡ ಹಾಸನ ಜಿಲ್ಲಾ ತಂಡದ ವಿರುದ್ಧ ಗೆಲುವು ಸಾಧಿಸಿ ಪ್ರಥಮ ಸ್ಥಾನ ಪಡೆದುಕೊಂಡಿದೆ.

ಫೈನಲ್ ಪಂದ್ಯದಲ್ಲಿ ಹಾಸನ ತಂಡ ಟಾಸ್ ಗೆದ್ದು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡು 6 ಓವರ್‌ಗಳಲ್ಲಿ 6 ವಿಕೆಟ್ ಗೆ 38 ರನ್ ಗಳಿಸಿತು. ಬಾಗಲಕೋಟೆ ತಂಡ 3 ವಿಕೆಟ್ ಕಳೆದುಕೊಂಡು 39 ರನ್ ಪಡೆಯುವ ಮೂಲಕ ವಿಜಯ ಸಾಧಿಸಿದ್ದಾರೆ.

ತಂಡದ ನಾಯಕ ಎನ್.ಎ.ಮುಲ್ಲಾ ಪಂದ್ಯ ಪುರುಷ ಪ್ರಶಸ್ತಿ ಪಡೆದು–ಕೊಂಡರು. ಕಳೆದ ಸಾಲಿನಲ್ಲಿ ತುಮಕೂರಿನಲ್ಲಿ ನಡೆದ ರಾಜ್ಯ ಮಟ್ಟದ ಕ್ರಿಕೆಟ್ ಪಂದ್ಯಾವಳಿಯಲ್ಲಿ ಬಾಗಲಕೋಟೆ ಜಿಲ್ಲಾ ತಂಡ ರನ್ನರ ಅಪ್ ಸ್ಥಾನ ಪಡೆದುಕೊಂಡಿತ್ತು.

ವಿಜೇತ ಬಾಗಲಕೋಟೆ ತಂಡಕ್ಕೆ ರಾಜ್ಯ ಲೆಕ್ಕ ಪರಿಶೋಧನ ಮತ್ತು ಲೆಕ್ಕಪತ್ರ ಇಲಾಖೆಯ ಪ್ರಧಾನ ನಿರ್ದೇಶಕ ರಾಮಪ್ರಸಾದ ಶೀಲ್ಡ ನೀಡಿದರು. ಜಿಲ್ಲೆಯ ತಂಡದ ಸಾಧನೆಗೆ ಜಿಲ್ಲಾ ಪಂಚಾಯತ ಸಿಇಓ ಶಶಿಧರ ಕುರೇರ ಅಭಿನಂದನೆ ಸಲ್ಲಿಸಿದ್ದಾರೆ.



ಬಸವಕಲ್ಯಾಣ :ತಾಲೂಕಿನ ಆಲಗೂಡ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ನಿವೃತ್ತ ಶಿಕ್ಷಕಿ ಇಂದಿರಾ ಬಾಯಿ ಸಾಳೊಂಕೆ ಅವರ ಸನ್ಮಾನ ಸಮಾರಂಭದಲ್ಲಿ ಇಲ್ಲಿನ ಪ್ರೌಢ ಶಾಲೆಯ ಶಿಕ್ಷಕರಾದ ನಾಗಪ್ಪಾ ನಿಣ್ಣೆ ಯವರಿಗೆ ಶಾಸಕರಾದ ಶರಣು ಸಲಗರ್ ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಮುಖ್ಯಗುರುಗಳಾದ ವಿಜಯಕುಮಾರ್ ಉಕ್ಕಾ ವಾಲೆ. ಗೋಪಾಲ ಸೋಮವಂಶಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಮಹಿಳಾ ಕಾಲೇಜಿನ ರಜತ ಮಹೋತ್ಸವ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ನಗರದ ಬಿ.ವಿ.ವಿ.ಸಂಘದ ಅಕ್ಕಮಹಾದೇವಿ ಕಲಾ.ವಿಜ್ಞಾನ.ವಾಣಿಜ್ಯ ಮಹಾವಿದ್ಯಾಲಯದ ರಜತ ಮಹೋತ್ಸವ ನಿಮಿತ್ಯ ನವೆಂಬರ್ 26 ಬುಧವಾರ ಬಿವಿವಿ ಸಂಘದ ನೂತನ ಸಭಾಭವನದಲ್ಲಿ 'ಸೃಜನ 2025 ಮಹಿಳಾ ಸಂಭ್ರಮ' ಜರುಗಲಿದೆ. ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಗುರುಬಸವ ಸೂಳಿಭಾವಿ ಉದ್ಘಾಟಿಸುವರು.

ಪದವಿ ಪೂರ್ವ ಕಾಲೇಜುಗಳ ಆಡಳಿತ ಮಂಡಳಿ ಪದನಿಮಿತ್ಯ ಕಾರ್ಯದರ್ಶಿ ಕೆ.ಎಚ್.ಹೊಸೂರ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಮಹಾವಿದ್ಯಾಲಯದ ಪ್ರಾಚಾರ್ಯೆ ಎಸ್. ಜೆ. ಒಡೆಯರ ಅಧ್ಯಕ್ಷತೆ ವಹಿಸುವರು.

ಐಕ್ಯೂಎಸಿ ಸಂಯೋಜಕಿ ಪಿ.ಕೆ.ಚೌಗಲಾ, ಸೃಜನ 25ರ ಕಾರ್ಯದರ್ಶಿ ಡಾ.ಜಿ.ಐ.ನಂದಿಕೋಲಮಠ, ಸಂಯೋಜಕಿ ಕೆ.ವಿ.ಜುಕ್ತಿಮಠ. ವಿದ್ಯಾರ್ಥಿ ಪ್ರತಿನಿಧಿ ಪದ್ಮಾ ಗಾಳಿಗಟ್ಟಿ ಭಾಗವಹಿಸಲಿದ್ದಾರೆ.

ಮಹಾವಿದ್ಯಾಲಯದ ರಜತ ಮಹೋತ್ಸವ ನಿಮಿತ್ತ ವಿದ್ಯಾರ್ಥಿಗಳಿಗಾಗಿ ವಚನ ಸ್ಪರ್ಧೆ, ಚರ್ಚಾಸ್ಪರ್ಧೆ, ಪ್ರಬಂಧ ಸ್ಪರ್ಧೆ, ಸಾಮೂಹಿಕ ನೃತ್ಯ ಸ್ಪರ್ಧೆಗಳು ಜರುಗಲಿವೆ.

# ಮಕ್ಕಳ ಮಾನಸಿಕ ಆರೋಗ್ಯ ಸುಧಾರಿಸುವ ಕಾರ್ಯವಾಗಬೇಕು: ಜಿಲ್ಲಾಧಿಕಾರಿ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.24–ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ಜಿಲ್ಲಾ ಮಾನಸಿಕ ಆರೋಗ್ಯ ತಜ್ಞ–ರಿಂದ ಶಿಕ್ಷಕರಿಗೆ ಒಂದು ದಿನದ ಕಾರ್ಯಾಗಾರವನ್ನು ಏರ್ಪಡಿಸಿ, ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ಸುಧಾರಿಸುವ ಕಾರ್ಯವಾಗಬೇಕೆಂದು ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಮಕ್ಕಳ ಮಾನಸಿಕ ಆರೋಗ್ಯ ಸುಧಾರಿಸುವ ಮತ್ತು ಆತ್ಮಹತ್ಯೆ ತಡೆಗಟ್ಟುವ ಸಮಿತಿಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ತರಬೇತಿ ಕಾರ್ಯಕ್ರಮಕ್ಕೆ ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳನ್ನು ಕರೆದು ಅವರಿಗೂ ಈ ವಿಷಯದ ಬಗ್ಗೆ ಅರಿವು ಮೂಡಿಸುವ ಕೆಲಸವಾಗಬೇಕು ಎಂದರು.

ಪ್ರತಿಯೊಂದು ಶೈಕ್ಷಣಿಕ ಸಂಸ್ಥೆಗಳಲ್ಲಿ ಸಮಲೋಚಕರನ್ನು ನಿಯೋಜಿಸಿಕೊಂಡು ಕಾಲಕಾಲಕ್ಕೆ ವಿದ್ಯಾರ್ಥಿಗಳೊಡನೆ ಸಮಾಲೋಚನೆ ಮಾಡಿ ವಿದ್ಯಾರ್ಥಿಗಳ ಆತಂಕ ದೂರು ಮಾಡಬೇಕು. ಶಾಲೆಗಳಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆಗಳಾದ 1098, 112 ಮತ್ತು ಟೆಲಿ ಮಾನಸ ಸಂಖ್ಯೆಯಾದ 11416 ಎಲ್ಲಾ ಶಾಲೆಗಳಲ್ಲಿ ಎದ್ದು ಕಾಣುವಂತೆ ಗೋಡೆಯ ಮೇಲೆ ಬರೆಯಿಸಲು ಸೂಚಿಸಿದರು. ಪಟ್ಟಣ ಮತ್ತು ನಗರಗಳಲ್ಲಿ ಪೌರಾಡಳಿತದ ನೆರವು ಪಡೆದು ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ಸುಧಾರಿಸುವ ಮತ್ತು ಆತ್ಮಹತ್ಯೆ ತಡೆಗಟ್ಟಲು ವ್ಯಾಪಕ ಪ್ರಚಾರ ಮಾಡಿ ಕಾರ್ಯಕ್ರಮ ಹಮ್ಮಿಕೊಳ್ಳಲು ಡಿಸಿ ಸೂಚಿಸಿದರು.

ವಸತಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ತಪಾಸಣೆ ಕಡ್ಡಾಯವಾಗಿ ಮಾಡಿಸಲು ಸೂಚಿಸಿದ ಜಿಲ್ಲಾಧಿಕಾರಿಗಳು, ಪ್ರತಿಯೊಂದು ಶೈಕ್ಷಣಿಕ ಸಂಸ್ಥೆಗಳಲ್ಲಿ ಸಮಲೋಚಕರನ್ನು ನಿಯೋಜಿಸಿಕೊಂಡು ಕಾಲಕಾಲಕ್ಕೆ ವಿದ್ಯಾರ್ಥಿಗಳೊಡನೆ ಸಮಾಲೋಚನೆ ಮಾಡಿ ವಿದ್ಯಾರ್ಥಿಗಳ ಆತಂಕ ದೂರು ಮಾಡಬೇಕು. ವಿದ್ಯಾರ್ಥಿಗಳಲ್ಲಿ ಯಾವುದೇ ರೀತಿಯ ಭೇದ ಭಾವ ಮಾಡಬಾರದು. ಕಡಿಮೆ ಅಂಕ ಪಡೆದ ವಿದ್ಯಾರ್ಥಿಗಳು ಹಾಗೂ ಜಾಣ ವಿದ್ಯಾರ್ಥಿಗಳು ಎಂಬ ಭೇದ ಮಾಡಬಾರದು ಎಂದರು.

ಎಲ್ಲಾ ಇಲಾಖೆಗಳು ಸಮನ್ವಯ ಸಾಧಿಸಿಕೊಂಡು ಈ ವಿಷಯದ ಕುರಿತು ಕಾರ್ಯನಿರ್ವಹಿಸಲು ತಿಳಿಸಿದರು. ಮಕ್ಕಳ ಸಮಸ್ಯೆಗಳ ಕುರಿತು ಶಿಕ್ಷಕರು ವಿದ್ಯಾರ್ಥಿಗಳ ಜೊತೆ ಸಮಾಲೋಚನೆಯ ಮೂಲಕ ಸಮಸ್ಯೆಗಳನ್ನು ಪರಿಹರಿಸಲು ಪ್ರಯತ್ನಿಸಬೇಕು. ಮಕ್ಕಳ ರಕ್ಷಣಾ ನೀತಿಯನ್ನು ಎಲ್ಲ ಶಾಲೆಗಳಲ್ಲಿ ಅನುಷ್ಠಾನಗೊಳಿಸಲು ಸೂಚಿಸಲಾಯಿತು. ಜಿಲ್ಲಾಮಟ್ಟದ ಅಧಿಕಾರಿಗಳು ವಸತಿ ನಿಲಯಗಳಿಗೆ, ಶಾಲೆಗಳಿಗೆ ಭೇಟಿ ನೀಡಿ ಮಕ್ಕಳ ಸಮಸ್ಯೆಗಳ ಕುರಿತು ಚರ್ಚಿಸಿ ಪರಿಹಾರ ನೀಡುವ ಕಾರ್ಯವಾಗಬೇಕು ಎಂದು ಅವರು ಹೇಳಿದರು.

ಒಬ್ಬ ವಿದ್ಯಾರ್ಥಿ ಶಾಲೆಯಲ್ಲಿ ಒಂದೇ ಕಡೆ ಕೂರದೇ ಪ್ರತಿನಿತ್ಯ ಎಲ್ಲ ವಿದ್ಯಾರ್ಥಿಗಳ ಜೊತೆ ಬೆರೆತು ಬೇರೆ ಸ್ಥಳಗಳಲ್ಲಿ ಕುಳಿತು ವಿದ್ಯಾಭ್ಯಾಸ ಮಾಡುವಂತೆ ವ್ಯವಸ್ಥೆ ಮಾಡಬೇಕು. ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯದ ತಪಾಸನೆ ಮತ್ತು ಆತ್ಮಹತ್ಯೆ ತಡೆಗಟ್ಟುವ ತೆ–ಗೆದುಕೊಂಡ ಕ್ರಮಗಳ ಕುರಿತು ವರದಿಗಳನ್ನು ಕ್ರೋಢೀಕರಿಸಿ ಕ್ರಮವಹಿಸಲು ಸೂಚಿಸಿದರು.

ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಸಿ.ಮನ್ನಿಕೇರಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ, ಜಿಲ್ಲಾ ಶಸ್ತ್ರಚಿಕಿತ್ಸಕ ಮಹೇಶ ಕೋನಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಪುಡಲೀಕ ಕಾಂಬಳೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪ್ರಭಾಕರ ಕೆ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಮೇಶ ಚವ್ಹಾಣ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪಂಕಜ, ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ ಶಿವಾನಂದ ಪಟ್ಟಣಶೆಟ್ಟಿ ಸೇರಿದಂತೆ ಜಿಲ್ಲಾ ಮಾನಸಿಕ ಆರೋಗ್ಯ ತಜ್ಞರು ಉಪಸ್ಥಿತರಿದ್ದರು.

# ಸಾರ್ವಜನಿಕರ ಕುಂದುಕೊರತೆ ಸಭೆ

ರಾಯಚೂರು: ಜಿಲ್ಲಾ ಲೋಕಾಯುಕ್ತ ಪೊಲೀಸ್ ಇಲಾಖೆಯಿಂದ ನವೆಂಬರ್ 28ರ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಗೆವರೆಗೆ ರಾಯಚೂರಿನ ಮಾನವಿ ತಾಲೂಕಿನ ತಹಸೀಲ್ದಾರ್ ಕಚೇರಿಯ ಸಭಾಂಗಣದಲ್ಲಿ ಸಾರ್ವಜನಿಕರ ಕುಂದುಕೊರತೆ ಹಾಗೂ ಅಹವಾಲುಗಳ ಸಭೆ ಆಯೋಜಿಸಲಾಗಿದ್ದು, ಸಾರ್ವಜನಿಕರಿಗೆ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ಪೋಲೀಸ್ ಉಪಾಧೀಕ್ಷಕರ ಕಚೇರಿಯ ಪ್ರಕಟಣೆ ತಿಳಿಸಿದೆ.

# ಗೃಹಲಕ್ಮೀ ಯೋಜನೆಯ ಹಣ ಬಿಡುಗಡೆ ಪ್ರಕ್ರಿಯೆ ಆರಂಭ

ರಾಯಚೂರು: ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆಯ 2025–26ನೇ ಸಾಲಿನ ಐದನೇ ಕಂತಿನ ಅನುದಾನದಲ್ಲಿ ಒಟ್ಟು ರೂ. 89,74,82,000, ಗಳ ಮೊತ್ತವನ್ನು ರಾಯಚೂರು ಜಿಲ್ಲೆಯ 4,48,741 ಫಲಾನುಭವಿಗಳಿಗೆ ಬಿಡುಗಡೆ ಮಾಡುವ ಪ್ರಕ್ರಿಯೆಯು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಮೂಲಕ ಚಾಲ್ತಿ ಮಾಡಲಾಗಿದೆ. ಮುಂದಿನ ಎರಡು ಮೂರು ದಿನಗಳೊಳಗೆ ಈ ಅನುದಾನ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಜಮಾ ಆಗಲಿದೆ ಎಂದು ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯ ಮಾನ್ಯ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹುದ್ದೆಗಳ ಭರ್ತಿಗೆ ಸಂದರ್ಶನ

ರಾಯಚೂರು : ಜಿಲ್ಲೆಯ ಲಿಂಗಸುಗೂರು ತಾಲೂಕಿನ ಆಸ್ಪತ್ರೆಯಲ್ಲಿ 50 ಹಾಸಿಗೆಗಳ ಸಾಮರ್ಥ್ಯದ ಕ್ರಿಟಿಕಲ್ ಕೇರ್ ಘಟಕವನ್ನು ಕಾರ್ಯಗತಗೊಳಿಸಲು ಅವಶ್ಯವಿರುವ ವಿವಿಧ ವೃಂದದ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಅರ್ಹತೆ ಹಾಗೂ ರೋಸ್ಟರ್ ಆಧಾರದ ಮೇಲೆ ಭರ್ತಿ ಮಾಡಲು ನೇರ ಸಂದರ್ಶನಕ್ಕೆ ಅರ್ಜಿಗಳನ್ನು ಅರ್ಹ ಅಭ್ಯರ್ಥಿಗಳಿಂದ ಆಹ್ವಾನಿಸಲಾಗಿದೆ.

45 ವಯೋಮಿತಿ ಒಳಗಿರುವ ಆಸಕ್ತ ಅಭ್ಯರ್ಥಿಗಳು, ಫಿಸಿಷಿಯನ್ ತಜ್ಞರು 01 ಹುದ್ದೆಗೆ ಎಂ.ಡಿ ಅಥವಾ ಡಿ.ಎನ್.ಬಿ ಜನರಲ್ ಮೆಡಿಸಿನ್ ಎಂ.ಬಿ.ಬಿ.ಎಸ್ ವಿದ್ಯಾಹರ್ತೆ ಹೊಂದಿರುವ ಅಭ್ಯರ್ಥಿಗಳಿಗೆ ಮಾಸಿಕ ಸಂಚಿತ ವೇತನವಾಗಿ 1,40,000 ರೂ.ಗಳು ನೀಡಲಾಗುತ್ತದೆ.

ಅರಿವಳಿಕೆ ತಜ್ಞ 01 ಹುದ್ದೆಗೆ ಅನಸ್ಥೇಸಿಯಾ ಎಂ.ಬಿ.ಬಿ.ಎಸ್, ಎಂ.ಡಿ ಅನಸ್ಥೇಸಿಯಾ ವಿದ್ಯಾಹರ್ತೆ ಹೊಂದಿರುವ ಅಭ್ಯರ್ಥಿಗಳಿಗೆ ಮಾಸಿಕ ಸಂಚಿತ ವೇತನವಾಗಿ 1,40,000 ರೂ.ಗಳು ನೀಡಲಾಗುವುದು.

ಆರ್ಥೋಪೆಡಿಷಿಯನ್ 01 ಹುದ್ದೆಗೆ ಎಂ.ಎಸ್ ಆರ್ಥೋ, ಡಿ.ಎನ್.ಬಿ ಆರ್ಥೋಪಿಡಿಕ್ಸ್,ಎಂ.ಬಿ.ಬಿ.ಎಸ್ ವಿದ್ಯಾಹರ್ತೆ ಹೊಂದಿರುವ ಅಭ್ಯರ್ಥಿಗಳಿಗೆ ಮಾಸಿಕ ಸಂಚಿತ ವೇತನವಾಗಿ 1,40,000 ರೂ.ಗಳು ನೀಡಲಾಗುತ್ತದೆ.

ರೇಡಿಯಾಲಜಿ 01 ಹುದ್ದೆಗೆ ರೇಡಿಯಾಲಜಿಯಲ್ಲಿ ಎಂ.ಡಿ ವಿದ್ಯಾಹರ್ತೆ ಹೊಂದಿರುವ ಅಭ್ಯರ್ಥಿಗಳಿಗೆ ಮಾಸಿಕ ಸಂಚಿತ ವೇತನವಾಗಿ 1,30,000 ರೂ.ಗಳು ಹಾಗೂ ಸ್ಟಾಫ್ ನರ್ಸ್ ಒಟ್ಟು 15 ಹುದ್ದೆಗೆ ಎನ್.ಎಚ್.ಎಂ ಮಾರ್ಗಸೂಚಿ ಪ್ರಕಾರ ವೇತನ ನೀಡಲಾಗುವುದು. ಈ ಒಟ್ಟಾರೆ ಹುದ್ದೆಗಳಿಗೆ ನೇರ ಸಂದರ್ಶನ ಮೂಲಕ ಭರ್ತಿ ಮಾಡಲು ನವೆಂಬರ್ 27ರ ಬೆಳಗ್ಗೆ 10.30ಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಸಭಾಂಗಣ ರಾಯಚೂರು ಇಲ್ಲಿ ನೇರ ಸಂದರ್ಶನ ನಡೆಯಲಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಪ್ರಕಟಣೆ ತಿಳಿಸಿದೆ.


**: CITATION:**

**IN THE COURT OF THE I ADDL. CIVIL JUDGE AND JMFC., AT HUMNABAD.**

**CRL. MISC. No.2228/2025.**

Petitioners:

1. Mohammed Sultan Ahmed S/o late Mastan Sab, Age: 49-yrs. Occu: Agriculture.
2. Sardar Ali S/o late Mastan Sab. Age: 77-yrs. Occu: Agriculture.
3. Shah Akhtar Begum D/o late Mastan Sab. Age: 75-yrs. Occu: Household.
4. Khaja Bee D/o late Mastan Sab, Age: 62-yrs. Occu: Household.
5. Raziya Begum D/o late Mastan Sab, Age: 60-yrs. Occu: Household.
6. Fakir Rehana Begum D/o late Mastan Sab, Age: 57-yrs. Occu: Household.
7. Latifa Begum D/o late Mastan Sab, Age: 48-yrs. Occu: Household.

All R/o Manna-E-Khelli. Tq. Chitguppa. Dist. Bidar.

Respondent:

The Registrar of Birth and Death through the Tahasildar Chitguppa.

Sub:- Petition U/Sec. 13(3) of Birth and Death Registration Act-1969

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Mother of petitioner No.1 to 7 by namely LATE. SHARIFA BEE W/O MASTAN SHA, who was died on 10.10.2000 at Village Manna-E-Kheli, Tq. Chitguppa. Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection In this regard, may approach to this Court on 19.12.2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 13-11-2025

//By order of the court//
Chief Ministerial Officer,
Prl. Civil Judge & JMFC Court,
Humnabad.



**: CITATION :**

**IN THE COURT OF THE I ADDL. CIVIL JUDGE AND JMFC., AT HUMNABAD.**

**CRL. MISC. No.2777/2025.**

Petitioners:

1. Baliram S/o Ramchandra, Age: 64-yrs. Occu: Agriculture.
2. Ghamuku Bai D/o Ramchandra, W/o Mannu, Age: 67-yrs. Occu: House hold.
3. Devi Bai D/o Ramchandra, W/o Parashuram, Age: 56-yrs. Occu: House hold.
4. Kamala Bai W/o late Laxman, Age: 62-yrs. Occu: House hold.
5. Anusha Bai W/o late Nathuram, Age: 51-yrs. Occu: House hold.

All R/o Bhadrapur, Tq. Chitguppa. Dist. Bidar.

Respondent:

The Registrar of Birth and Death through the Tahasildar Chitguppa.

Sub:- Petition U/Sec. 13(3) of Birth and Death Registration Act-1969

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Mother of petitioner No.1 to 3 and Daughter in law of petitioner No.4 and 5 by namely LATE. HUNAKABAI W/O LATE RAMCHNDRA, she was died on 23.05.2014 at Village Bhadrapur, Tq.Chitguppa. Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 06.01.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 19-11-2025

//By order of the court//
Chief Ministerial Officer,
Prl. Civil Judge & JMFC Court,
Humnabad.



**PAPER PUBLICATION**

**IN THE COURT OF SENIOR CIVIL JUDGE AT HUMNABAD**

**P&SC No.03/2025**

Petitioner : Ghudma Bee

**// Vs//**

Respondent : To whom so ever it may concern.

Sub:- Petition under section 372 of Indian Succession Act..

To,

Respondent-To whom so ever it may concern.

Whereas, the petitioner has filed the above petition, for obtaining the succession certificate amount of Rs 58,000/- in PKGB bank branch Ghatboral, the deceased late Ismail Bee W/o Ajmoddin Serikar who is died leaving behind her legal heirs and successors petitioner. Therefore any legal heirs or interested persons to appear through person or through pleader and able to answer all material questions relating to the claim of petitioner on the day of 05-01-2026 at about 10-30 AM before the Hon'ble Senior Civil Judge Court Humnabad, failing which heard and determined in your absence.

Given under my hand and the seal of the court, on 18th day of November -2025.

//By order of the Court//
(C.M.O)
Senior Civil Judge & JMFC Court
Humnabad.

# ಹದಗೆಟ್ಟ ರಸ್ತೆ ಅಭಿವೃದ್ಧಿ ಯಾವಾಗ



(ವರದಿ.ಡಿ.ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:ನಗರದ ಸಮಿಪ ಇರುವ ದತ್ತಾತ್ರೇಯ ದೇವಸ್ಥಾನ ಪಕದಿಂದ ಹಾದುಹೋಗುವ ರಸ್ತೆಯ ಬಹಳಷ್ಟು ಹದಗೆಟ್ಟು ಹೋಗಿದೆ ಈ ರಸ್ತೆಯು ಗೌರವ. ಖಂಡಾಳ ರಸ್ತೆ ಅಲ್ಲ ಅಲ್ಲಿ ಹದಗೆಟ್ಟು ಹೋಗಿದೆ ಎಂದು ಸಮಾಜ ಸೇವಕ ಧನರಾಜ ರಾಜೋಳೆ ಒತ್ತಾಯಿಸಿದ್ದಾರೆ. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇತ ಕಡೆ ಗಮನ ಹರಿಸುತ್ತಿಲ್ಲ ಎಂದು ದೂರಿದ್ದಾರೆ. ಇಲ್ಲಿಂದಲೆ ಬಹಳಷ್ಟು ವಾಹನ ಸಂಚರಿಸುತ್ತವೆ ದ್ವಿಚಕ್ರವಾಹನ ಅಟು ಸೇರಿದಂತೆ ಅನೇಕ ವಾಹನಗಳು ಸಂಚರಿಸುತ್ತವೆ ಅಲ್ಲದೆ ಇಲ್ಲಿಂದಲೆ ಅನೇಕ ಗ್ರಾಮಗಳಿಗೆ ಸಂಚರಿಸುತ್ತವೆ ಎಂದರು. ಈ ಭಾಗದ ಜನರು ರಸ್ತೆಯ ಮೇಲೆ ಓಡಾಡುವ ಬೈಕ್ ಸವಾರರು ಬಿದ್ದು ಸಣ್ಣಪುಟ್ಟ ಗಾಯಗಳಾಗಿವೆ ಎಂದು ತಿಳಿಸಿದರು. ಇನ್ನುಮುಂದೆ ಯಾದರು ಸಂಬಂಧಿಸಿದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇತ ಕಡೆ ಗಮನ ಹರಿಸಿ ಆದಷ್ಟು ಬೇಗ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಧನರಾಜ ರಾಜೋಳೆ ಒತ್ತಾಯಿಸಿದ್ದಾರೆ.

# ಇಂದು ಮತ್ತು ನಾಳೆ ಬೀದರ ಜಿಲ್ಲಾ ಉಸ್ತುವಾರಿ

## ಸಚಿವರಾದ ಈಶ್ವರ ಬಿ.ಖಂಡ್ರೆ ಅವರ ಬೀದರ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

**ಬೀದರ:** ನ, ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆಅವರು ನವೆಂಬರ್.25 ಮತ್ತು 26 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.

ನವೆಂಬರ್.25 ರಂದು ಬೆಳಿಗ್ಗೆ 6.20ಕ್ಕೆ ಬೆಂಗಳೂರಿನಿಂದ ಹೊರಟು ಬೆಳಿಗ್ಗೆ 7.35ಕ್ಕೆ ಬೀದರಗೆ ಆಗಮಿಸಲಿದ್ದಾರೆ. ಬೆಳಿಗ್ಗೆ 8 ರಿಂದ ಸಂಜೆ 6 ಗಂಟೆಯವರೆಗೆ ಬೀದರನ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ನಂತರ ಸಂಜೆ 6 ಗಂಟೆಗೆ ಖಾಸಗಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಸಂಜೆ 7.30ಕ್ಕೆ ಬೀದರನಿಂದ ರಸ್ತೆ ಮೂಲಕ ಭಾಲ್ಕಿಗೆ ಪ್ರಯಾಣಿಸಿ ಅಲ್ಲಿಯೇ ವಾಸ್ತವ್ಯ ಮಾಡಲಿದ್ದಾರೆ. ನವೆಂಬರ್.26 ರಂದು ಬೆಳಿಗ್ಗೆ 9 ಗಂಟೆಗೆ ಭಾಲ್ಕಿಯಿಂದ ರಸ್ತೆ ಮೂಲಕ ಪ್ರಯಾಣಿಸಿ ಬೆಳಿಗ್ಗೆ 9.55ಕ್ಕೆ ಬೀದರಗೆ ಆಗಮಿಸಲಿದ್ದಾರೆ. ಬೆಳಿಗ್ಗೆ 10 ಗಂಟೆಗೆ ಬೀದರನಲ್ಲಿ ಹಮ್ಮಿಕೊಂಡಿರುವ ಸಂವಿಧಾನ ಸಮರ್ಪಣ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನಂತರ ಮಧ್ಯಾಹ್ನ 12 ರಿಂದ 4 ಗಂಟೆಗೆ ಬೀದರನ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

ಸಂಜೆ 4 ಗಂಟೆಗೆ ಬೀದರನಲ್ಲಿ ನಮ್ಮ ಕರ್ನಾಟಕ ಸೇನೆ ಜಿಲ್ಲಾ ಕಛೇರಿ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಸಂಜೆ 5 ಗಂಟೆಗೆ ಬೀದರನ ಕರ್ನಾಟಕ ಫಾರ್ಮಸಿ

ಕಾಲೇಜಿನಲ್ಲಿ ಹಮ್ಮಿಕೊಂಡಿರುವ ಕನ್ನಡ ಸಂಸ್ಕೃತಿ ಉತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಸಂಜೆ 6 ಗಂಟೆಗೆ ಬೀದರನಿಂದ ರಸ್ತೆ ಮೂಲಕ ಭಾಲ್ಕಿಗೆ ಪ್ರಯಾಣಿಸಿ ಅಲ್ಲಿಯೇ ವಾಸ್ತವ್ಯ ಮಾಡಲಿದ್ದಾರೆಂದು ಸಚಿವರ ಆಪ್ತ ಕಾರ್ಯಕ್ರಮದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆಯುಡಬ್ಲ್ಯುಜೆ ನೂತನ ಪದಾಧಿಕಾರಿಗಳ ಪದಗ್ರಹಣ

## ಮಾಧ್ಯಮಗಳಿಗೆ ಸ್ವಯಂ ನಿಯಂತ್ರಣ ಅತ್ಯಗತ್ಯ: ಸಚಿವ ಈಶ್ವರ ಖಂಡ್ರೆ




ಬೆಂಗಳೂರು:ಮಾಧ್ಯಮಗಳು ಸ್ವ–ಯಂ ನಿಯಂತ್ರಣ ವಿಧಿಸಿಕೊಂಡು ಸತ್ಯ ಮತ್ತು ನಿಖರ ಸುದ್ದಿಗಳನ್ನು ಜನರಿಗೆ ತಲುಪಿಸಲು ಸಂಘಟಿತ ನಡೆಸುವ ಮೂಲಕ ವಿಶ್ವಾಸರ್ಹತೆ ಕಾಪಾಡಿಕೊಳ್ಳಬೇಕು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.ನಗರದ ಗಾಂಧೀಭವನದಲ್ಲಿಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲೂಣಟಿಜಜಜಿಟಿಜಜಜೆ) ರಾಜ್ಯ ಮಟ್ಟದ ಪದಾಧಿಕಾರಿಗಳ ಅಧಿಕಾರ ಸ್ವೀಕಾರ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಸುದ್ದಿಯನ್ನು ತಲುಪಿಸುವ ನಿಟ್ಟಿನಲ್ಲಿ ಧಾವಂತ ಬೇಡ. ಸರಿಯಾದ ಸುದ್ದಿಯನ್ನು ಜನರಿಗೆ ತಲುಪಿಸುವುದು ಆದ್ಯತೆಯಾಗಬೇಕು ಎಂದು ಸಲಹೆ ನೀಡಿದರು.

ಇದು ಕೃತಕ ಬುದ್ಧಿಮತ್ತೆ (ಎ.ಐ.) ಕಾಲವಾಗಿದ್ದು, ಮಾಧ್ಯಮಗಳು ಸುದ್ದಿ ಪ್ರಸಾರಕ್ಕೆ ಮುನ್ನ ಸುದ್ದಿ ಚಿತ್ರಗಳ ನೈಜತೆಯನ್ನು ಖಚಿತ ಪಡಿಸಿಕೊಳ್ಳುವುದು ಅಗತ್ಯ. ಸುಳ್ಳು ಸುದ್ದಿಗಳು, ನಕಲಿ ಚಿತ್ರ, ದೃಶ್ಯಗಳ ಬಗ್ಗೆ ಎಚ್ಚರಿಕೆ ಅಗತ್ಯ. ಒಮ್ಮೆ ಚಾರಿತ್ರ್ಯವಧೆ ಆದರೆ ಮತ್ತೆ ಅದನ್ನು ಸರಿಪಡಿಸಲು ಸಾಧ್ಯವಿಲ್ಲ ಎಂದು ಹೇಳಿದರು.

ಮಾಧ್ಯಮಗಳಿಗೆ ವಿಶ್ವಾಸಾರ್ಹತೆ ಮುಖ್ಯ. ಹೀಗಾಗಿ ಪೂರ್ವಾಗ್ರಹ ಪೀಡಿತವಾಗಿ ಮತ್ತು ರೋಚಕ ಸುದ್ದಿಗಳನ್ನು ಬಿತ್ತಸಿರುವ ಧಾವಂತದಲ್ಲಿ ಸುಳ್ಳೇ ಸತ್ಯ ಎಂಬಂತೆ ಬಿಂಬಿಸಬಾರದು, ಇದು ಜನರ ನಂಬಿಕೆಯನ್ನು ದೂರ ಮಾಡುತ್ತದೆ ಎಂದರು.

ಸ್ವಾತಂತ್ರ್ಯ ಸಂಗ್ರಾಮ ಕಾಲದಲ್ಲಿ ಪತ್ರಿಕೆಗಳು ಮಹತ್ವದ ಪಾತ್ರ ವಹಿಸಿದ್ದವು. ಸ್ವಾತಂತ್ರ್ಯೋತ್ತರದಲ್ಲೂ ಪತ್ರಿಕೆಗಳು, ಮಾಧ್ಯಮಗಳು ದೊಡ್ಡ ಪಾತ್ರ ನಿರ್ವಹಿಸುತ್ತಿವೆ. ಮಾಧ್ಯಮಗಳಿಗೆ, ಸಾರ್ವಜನಿಕ ಅಭಿಪ್ರಾಯ ಮೂಡಿಸುವ ಶಕ್ತಿ ಇದ್ದು, ಅತ್ಯಂತ ಪ್ರಭಾವಶಾಲೀ ಸಾಧನವಾಗಿದೆ. ಇದರ ಸದ್ಬಳಕೆ ಆಗಬೇಕು ಎಂದರು.

ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯ ಪ್ರತೀಕೂಲ ಪರಿಸ್ಥಿತಿಯನ್ನು ಇಡೀ ಜಗತ್ತು ಎದುರಿಸುತ್ತಿದೆ. ಈ ನಿಟ್ಟಿನಲ್ಲಿ ಮಾಧ್ಯಮಗಳು ಪ್ರಕೃತಿ, ಪರಿಸರ, ವೃಕ್ಷ ಸಂರಕ್ಷಣೆಯ ಬಗ್ಗೆ ಹೆಚ್ಚಿನ ಒತ್ತು ನೀಡಬೇಕು ಎಂದರು.ಡಿವಿಜಿ ಸ್ಥಾಪಿಸಿದ ಪತ್ರಕರ್ತರ ಸಂಘವು ಬೃಹತ್ತಾಗಿ ಬೆಳೆದಿದ್ದು, ರಾಜ್ಯ ಮತ್ತು ಜಿಲ್ಲಾ ಘಟಕಗಳಿಗೆ ಸುಸೂತ್ರವಾಗಿ ಪ್ರಜಾಸತ್ತಾತ್ಮಕವಾಗಿ ಚುನಾವಣೆ ನಡೆಸಿರುವುದು ಅಭಿನಂದನಾರ್ಹ ಎಂದರು.ಎಂ.ಎಸ್.ಗುರುಪಾದಸ್ವಾಮಿ, ಖಾದ್ರಿ ಶಾಮಣ್ಣ, ಜಯಶೀಲರಾವ್, ಪೊತೇನ್ ಜೋಸ್ ಣಟಿಜಜಜಿಟಿಜಜ ಮೊದಲಾದವರು ಅಧ್ಯಕ್ಷರಾಗಿ ಮೇಲ್ಪಂಕ್ತಿ ಹಾಕಿಕೊಟ್ಟಿದ್ದಾರೆ. ಶಿವಾನಂದ ತಗಡೂರು ಅವರ ಮಾರ್ಗದಲ್ಲಿ ಸಾಗುತ್ತಿದ್ದಾರೆ ಎಂದು ಪ್ರಶಂಸಿಸಿದರು.

1955ರಲ್ಲೇ ಪತ್ರಕರ್ತರಿಗೆ ಸೂಕ್ತ ವೇತನ, ಭತ್ಯೆ ಸಿಗಬೇಕು ಎಂಬುದನ್ನು ಮನಗಂಡ ಅಂದಿನ ಪ್ರಧಾನಿ ಪಂಡಿತ್ ಜವಾಹರಲಾಲ್ ನೆಹರೂ ಅವರು ಕಾರ್ಯನಿರತ ಪತ್ರಕರ್ತರು ಮತ್ತು ಇತರ ಸುದ್ದಿ ಪತ್ರಿಕೆಗಳ ನೌಕರರ ಕಾಯಿದೆ 1955 ನ್ನು ಜಾರಿಗೆ ತಂದರು. ಮಾಧ್ಯಮಗಳು ಖಾಸಗಿ ವಲಯವೇ ಆಗಿದ್ದರೂ ವೇತನ ಆಯೋಗ ರಚಿಸಿ ಪತ್ರಕರ್ತರ ನೆರವಿಗೆ ನಿಂತರು ಎಂದರು.

ಐಬ್ಲ್ಯುಜೆ ಅಧ್ಯಕ್ಷ ಬಿ.ವಿ.ಮಲ್ಲಿಕಾರ್ಜುನಯ್ಯ, ಕೆಯುಡಬ್ಲೂಣಟಿಜಜಜಿಟಿಜಜಜೆ ರಾಜ್ಯ ಉಪಾಧ್ಯಕ್ಷರಾದ ಎಚ್.ಬಿ.ಮದನಗೌಡ, ಮತ್ತಿಕೆರೆ ಜಯರಾಂ, ಅಜ್ಜಮಾಡ ಕುಟ್ಟಪ್ಪ, ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಕಾರ್ಯದರ್ಶಿಗಳಾದ ನಿಂಗಪ್ಪ ಚಾವಡಿ, ಸೋಮಶೇಖರ ಕೆರಗೋಡು, ಪುಂಡಲೀಕ ಭಾಳೋಜಿ, ಖಜಾಂಚಿ ವಾಸುದೇವ ಹೊಳ್ಳ ವೇದಿಕೆಯಲ್ಲಿದ್ದರು. ರಾಜ್ಯ ಉಪಾಧ್ಯಕ್ಷರಾದ ಎಚ್.ಬಿ.ಮದನಗೌಡ ಸ್ವಾಗತಿಸಿದರು. ಸುಖನ್ಯ ಕಾರ್ಯಕ್ರಮ ನಿರೂಪಿಸಿದರು

# ದೇಶ ಭಕ್ತಿ ದೇಶ ಅಭಿಮಾನ ಮೈಗುಡಿಸಿಕೊಳ್ಳಿ:ಸಂಜಿವಕುಮಾರ ಹಂಚಾಟೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ದೇಶ ಭಕ್ತಿ, ದೇಶ ಅಭಿಮಾನ ಮೈಗುಡಿಸಿಕೊಳ್ಳಿ, ಸಮಾಜಕ್ಕಾಗಿ ನಾನೆ ಕೂಡ ಬಲ್ಲೆ ಎಂದು ನಿಮ್ಮನ್ನು ನೀವು ಪರೋಪಕಾರಿ ಜೀವನಕ್ಕೆ ಸಿದ್ದ ಮಾಡಿ ಎಂದು ಕರ್ನಾಟಕ ಉಚ್ಚನ್ಯಾಯಾಲಯದ ನ್ಯಾಯಮೂರ್ತಿ ಸಂಜಿವಕುಮಾರ ಹಂಚಾಟೆ ಹೇಳಿದರು.ಪಟ್ಟಣದ ಶಾಂತಿವರ್ಧಕ ಪದವಿ ಪೂರ್ವ ಕಾಲೇಜಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ಅಡಿಯಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಅವರು ಪಾಲ್ಗೊಂಡು ಮಾತನಾಡಿ, ಒಬ್ಬ ವಿದ್ಯಾರ್ಥಿ ಪ್ರತಿ ವರ್ಷ ಒಂದು ಗಿಡ ವನ್ನು ಹಚ್ಚಿ ಪೋಷಣೆ ಮಾಡಿ ಬೆಳೆಸಬೇಕು,ಪರಿಸರದ ಬಗ್ಗೆ ಕಾಳಜಿ ಇರಬೇಕು, ಸ್ವಚ್ಚತೆ ಕಾಪಾಡಿ ಕೊಳ್ಳಬೇಕು, ಹಾಗೂ ಅನ್ನ ಬೆಳೆಯುವ ರೈತರಿಗೆ ಮತ್ತು ದೇಶ ಕಾಯೋಯೋದರಿಗೆ ಗೌರವ ಭಾವನೆ ಯಿಂದ ಕಾಣಬೇಕು ಎಂದು ಹೇಳಿದರು.

ವಿದ್ಯಾರ್ಥಿಗಳು ಕಾನೂನಿನ ಜ್ಞಾನ ಬೆಳೆಸಿಕೊಳ್ಳಬೇಕು, ಶೋಷಣೆ, ಅನ್ಯಾಯ ಮತ್ತು ದೌರ್ಜನ್ಯ ತಡೆಯಲು ಮುಂದಾಗ ಬೇಕು, ಅನ್ಯಾಯದ ವಿರುದ್ದ ಧ್ವನಿ ಎತ್ತಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮುಖಂಡ ಪ್ರವೀಣ ಪಾಟೀಲ್, ಪಾಲಕ ಪ್ರತಿನಿಧಿಗಳಾದ ಬಾಬುರಾವ್ ಪಾಟೀಲ್ ಹೊರಂಡಿ, ಪ್ರಾಂಶುಪಾಲರಾದ ಶಿವಾಜಿ ಆರ್ ಎಚ್, ಪದವಿ ಕಾಲೇಜಿನ ಪ್ರಾಂಶುಪಾಲರಾದ ಡಾ.ರಮೇಶ ಚವ್ವಾಣ, ಒ.ಕೆ.ಸೂರ್ಯವಂಶಿ ಹಾಗು ಸಿಬ್ಬಂದಿ, ವಿದ್ಯಾರ್ಥಿ, ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಜಾತ್ರೆಯಲ್ಲಿ ಡಿಜೆ ಬಳಸಲು ಅನುಮತಿ ಇಲ್ಲ ಸಿಪಿಐ ಬಿರಾದಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ:ತಾಲೂಕಿನ ಶಿರೂರ ಪಟ್ಟಣದ ಭವ್ಯ ಸಿದ್ದೇಶ್ವರ ಜಾತ್ರೆಯ ನಿಮಿತ್ತ ಡಿಸೆಂಬರ್ 6 ರಂದು ನಡೆಯಲಿರುವ ಲಿಂ.ಸಿದ್ಧಲಿಂಗ ಶಿವಯೋಗಿಗಳ ಪಲ್ಲಕ್ಕಿ ಉತ್ಸವದ ಸಂದರ್ಭದಲ್ಲಿ ಡಿಜೆ ಬಳಸದಿರುವಂತೆ ಸೂಚನೆ ನೀಡಿರುವ ಪೋಲಿಸ್ ಇಲಾಖೆ ಇದಕ್ಕಾಗಿ ಅನುಮತಿ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದೆ.

ಶಿರೂರ ಪಟ್ಟಣದಲ್ಲಿ ಸೋಮವಾರ ಸಂಜೆ ನಡೆದ ಸಭೆಯಲ್ಲಿ ಬಾಗಲಕೋಟೆ ಗ್ರಾಮೀಣ ಠಾಣೆಯ ಸಿಪಿಐ ರಾಮಣ್ಣ ಬಿರಾದಾರ ಮಾತನಾಡಿ, ಡಿಜೆ ಬಳಸುವುದಕ್ಕೆ ಅನುಮತಿ ಕೋರಿ ಯಾರೂ ಇಲಾಖೆಯ ಬಳಿ ಬರಬಾರದು ಎಂದು ಸೂಚನೆ ನೀಡಿದರು.

ಡಿಜೆ ಬಳಕೆಯಿಂದಾಗಿ ಊರಿನ ಜನರಿಗೆ ಬಹಳಷ್ಟು ತೊಂದರೆ–ಯಾಗುತ್ತದೆ. ಜೊತೆಗೆ ಜಾತ್ರೆಯ ವೈಭವಕ್ಕೆ ಕಳಂಕ ತರುತ್ತಿದೆ. ಈ ದಿಸೆಯಲ್ಲಿ ಯುವಕರು ಡಿಜೆ ವಿಚಾರ ಕೈಬಿಟ್ಟು, ಜಾನಪದ ಕಲಾ ತಂಡಗಳನ್ನು ಕರೆಸಿ ಜಾತ್ರೆಯನ್ನು ವೈಭವಪೂರಿತವಾಗಿ ಆಚರಣೆ ಮಾಡುವ ಮೂಲಕ ಊರಿನ ಸಂಪ್ರದಾಯ, ಪರಂಪರೆಯನ್ನು ಕಾಪಾಡಿಕೊಳ್ಳಬೇಕೆಂದು ತಿಳಿಸಿದರು.

ಡಿಜೆ ಬಳಕೆಯಿಂದ ಯಾವ ಲಾಭವಿದೆ ಎಂದು ಯುವಕರನ್ನು ಪ್ರಶ್ನಿಸಿದ ಸಿಪಿಐ ಬಿರಾದಾರ, ಅದರಿಂದ ಕಲಿಯುವುದು ಯಾವುದು ಇಲ್ಲ, ಅದಕ್ಕೆ ಬಳಸುವ ಲಕ್ಷಗಟ್ಟಲೆ ಹಣವನ್ನು ಒಳ್ಳೆಯ ಕಾರ್ಯಗಳಿಗೆ ಬಳಸಿ ಗ್ರಾಮದ ಸರ್ವ ಜನಾಂಗಕ್ಕೂ ಉಪಯೋಗವಾಗುವ ಅಭಿವೃದ್ಧಿ ಕೆಲಸಕ್ಕೆ ಬಳಸಿ ಎಂದು ಸಲಹೆ ನೀಡಿದರು.

ಪ್ರತಿಯೊಬ್ಬರೂ ಕಾನೂನು ಪಾಲನೆ ಮಾಡಬೇಕು. ಕಾನೂನು ಉಲ್ಲಂಘನೆಗೆ ಮುಂದಾದರೆ ಪೋಲಿಸ್ ಇಲಾಖೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಿದೆ ಎಂದು ಹೇಳಿದ ಅವರು, ಒಳ್ಳೆಯ ಕಾರ್ಯಗಳಿಗೆ ಪೋಲಿಸ್ ಇಲಾಖೆ ಸಹಕಾರ ಸದಾ ಇರುತ್ತದೆ ಎಂದರು. ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಶಿವಾನಂದ ಆಲೂರ ಮಾತನಾಡಿ, ಆರೋಗ್ಯ ಮೇಲೆ ದುಷ್ಪರಿಣಾಮ ಬೀರುವ ಡಿಜೆ ಬಳಕೆಯಿಂದ ಯುವಕರು ಹಿಂದೆ ಸರಿದು, ಕಾನೂನು ಪಾಲಿಸಿ ಜಾತ್ರೆಯನ್ನು ವೈಭವದಿಂದ ಆಚರಿಸುವಂತೆ ಹೇಳಿದರು.

ಎಸ್ ಐ ಗಿರೀಶ ಮಾತನಾಡಿ, ಅವಘಡಗಳಿಗೆ ಅವಕಾಶ ನೀಡಬಹುದಾದ ಡಿಜೆ ಬಳಕೆಯನ್ನು ಕೈಬಿಟ್ಟು ಜಾನಪದ ಕಲಾ ತಂಡಗಳನ್ನು ತರಿಸಿ ಎಲ್ಲರೂ ಒಗ್ಗಟ್ಟಿನಿಂದ ಸಂಭ್ರಮದಿಂದ ಜಾತ್ರೆಯನ್ನು ಮಾಡುವಂತೆ ಕರೆಯಿತ್ತರು. ಹಿರಿಯರಾದ ರಂಗಪ್ಪ ಮಳ್ಳಿ, ರಾಜಶೇಖರ ಅಂಗಡಿ, ಕಲ್ಲಪ್ಪ ಭಗವತಿ ಮಾತನಾಡಿ, ಡಿಜೆ ಬಳಕೆಯನ್ನು ಕೈಬಿಡುವಂತೆ ಯುವಕರಿಗೆ ಮನವಿ ಮಾಡಿದರು. ಸಿದ್ದಪ್ಪ ಗಾಳಿ, ಸಿದ್ದಪ್ಪ ದಂಡಿನ ಮತ್ತಿತರರು ಇದ್ದರು.



ಬಸವಕಲ್ಯಾಣ: ತಾಲೂಕಿನ ಸುಕ್ಷೇತ್ರ ಹಾರಕೂಡ ಶ್ರೀಮಠದಲ್ಲಿ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪಡೆದ ಎಲ್ ಬಿ ಕೆ ಶೇಕ್ ಮಾಸ್ಟರ್ ಹಾಗೂ ಶಿವಯ್ಯ ಸ್ವಾಮಿ ಬಿಬ್ಬಳ್ಳಿ ಅವರಿಗೆ ಶ್ರೀಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ ಸತ್ಕರಿಸಿ ಗೌರವಿಸಿದರು.ಈ ಸಂದರ್ಭದಲ್ಲಿ ಅನೇಕರು ಉಪಸ್ಥಿತರಿದ್ದರು. ಮಲ್ಲಮ್ಮ ನುಡಿ ಚಿತ್ರ

# ಅಧಿಕಾರದ ಹಿಂದೆ ಬಿದ್ದ ರಾಜ್ಯ ಸರ್ಕಾರ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ರೈತರ ಸಮಸ್ಯೆಗಳಿಗೆ ಸ್ಪಂದಿಸದೆ, ಕೇವಲ ಅಧಿಕಾರದ ಹಪಾಹಪಿಗೆ ಬಿದ್ದಿದೆ ಎಂದು ಬಿಜೆಪಿ ರಾಜ್ಯ ಕಾರ್ಯದರ್ಶಿ ಮತ್ತು ಶಾಸಕ ಬಸವರಾಜ ಮತ್ತಿಮೂಡ ಆರೋಪಿಸಿದರು.

ನಗರದ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಸೋಮವಾರ ರೈತರೊಂದಿಗೆ ಸಭೆ ನಡೆಸಿ ಮಾತನಾಡಿ, ಈ ಸಾಲಿನಲ್ಲಿ ರಾಜ್ಯದಲ್ಲಿ ಅದರಲ್ಲೂ ಕಲ್ಯಾಣ ಕರ್ನಾಟಕ ಭಾಗದಲ್ಲಿ ಹಿಂದೆಂದೂ ಕಾಣದಂಥ ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ರೈತರು ತತ್ತರಿಸಿದ್ದಾರೆ. ಆದರೆ, ಮುಖ್ಯಮಂತ್ರಿಗಳು ಬೆಳೆ ಪರಿಹಾರ ಘೋಷಣೆ ಮಾಡುವಲ್ಲಿ ಹಿಂದೇಟು ಹಾಕಿದರು. ವಿಪಕ್ಷಗಳು ಪ್ರತಿಭಟನೆ ಹಾದಿ ಹಿಡಿದ ನಂತರವಷ್ಟೇ ಸಿಎಂ ಸಿದ್ದರಾಮಯ್ಯ ಬರ ವೀಕ್ಷಣೆ ಕೈಗೊಂಡರು ಎಂದರು.

ರಾಜ್ಯದಲ್ಲಿ ಕಬ್ಬು ಬೆಳೆದ ರೈತರು ಬೀದಿಗಳಿದು ಹೋರಾಟ ನಡೆಸಿದ್ದಾರೆ. ಸರ್ಕಾರಕ್ಕೆ ಚಾಟೀ ಬೀಸಿದ್ದಾರೆ. ಕೇಂದ್ರ ಸರ್ಕಾರ ಅಭಿವೃದ್ಧಿಗೆ ನೆರವು ನೀಡುವುದಾಗಿ ಹೇಳಿದರೂ ಮುಖ್ಯಮಂತ್ರಿಗಳು ಮೊಂಡುತನ ಪ್ರದರ್ಶಿಸುತ್ತಿದ್ದಾರೆ. ಇದರಿಂದ ರಾಜ್ಯದಲ್ಲಿನ ಅನ್ನದಾತ ಸಂಕಷ್ಟಕ್ಕೆ ಸಿಲುಕಿದ್ದಾನೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕೂಡಲೇ ಸರ್ಕಾರ ರೈತರ ಸಮಸ್ಯೆಗಳ ಪರಿಹಾರಕ್ಕೆ ಹೆಚ್ಚಿನ ಒತ್ತು ಕೊಡಬೇಕು. ಇಲ್ಲದಿದ್ದಲ್ಲಿ ಪಕ್ಷದಿಂದ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಜಿಲ್ಲಾಧ್ಯಕ್ಷ ಬಸವರಾಜಪ್ಪ ಗೌಡ ಬಿಹುತಿಹಳ್ಳಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೇಲಪ್ಪ ಗುಳಗಿ, ಪರಶುರಾಮ್ ಕುರುಕುಂದಿ, ಜಿಲ್ಲಾ ಖಜಾಂಜಿ ತಿರುಪತಿ ರೆಡ್ಡಿ,

ನಿಕಟಪೂರ್ವ ಜಿಲ್ಲಾಧ್ಯಕ್ಷರುಗಳಾದ ಅಮೀನ್ ರೆಡ್ಡಿ ಯಾಳಗಿ, ಡಾ. ಶರಣಭೂಪಾಲರೆಡ್ಡಿ, ಚಂದ್ರಶೇಖರಗೌಡ ಮಾಗನೂರ್, ಸಿದ್ದನಗೌಡ ಕಾಡಮ್ನೂರ್, ಗುರುಮಿಠಕಲ್ ಮಂಡಲ ಅಧ್ಯಕ್ಷ ನರಸಿಂಹಲು ನೀರಹಟ್ಟಿ, ಯಾದಗಿರಿ ಗ್ರಾಮೀಣ ಮಂಡಲ ಅಧ್ಯಕ್ಷ ರಾಜಶೇಖರ್ ಕಾಡನ್ನೂರ್, ಯುವಮೋರ್ಚಾ ಜಿಲ್ಲಾಧ್ಯಕ್ಷ ಶ್ರೀಧರ್ ಸಾಹುಕಾರ, ಶಿವಪ್ಪ ವಿಶ್ವಕರ್ಮ ಇದ್ದರು.

# ಚಿಕ್ಕಸಂಗಮಕ್ಕೆ ಶಾಸಕ ಜೆ.ಟಿ.ಪಾಟೀಲ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ:ಬೀಳಗಿ ತಾಲೂಕಿನ ಚಿಕ್ಕಸಂಗಮದಲ್ಲಿರುವ ಐತಿಹಾಸಿಕ ಸಂಗಮನಾಥನ ದೇವಸ್ಥಾನಕ್ಕೆ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ ರವಿವಾರ ಭೇಟಿ ನೀಡಿ ಮೂಲಭೂತ ಸೌಲಭ್ಯಗಳನ್ನು ಪರಿಶೀಲಿಸಿದರು.

ದೇವಸ್ಥಾನದ ಆವರಣದಲ್ಲಿ ಪಿವರ್ಸ್ ಹಾಕುವುದು, ಭಕ್ತರ ಸಂಚಾರಕ್ಕೆ ಅನುಕೂಲವಾಗುವಂತೆ ಹೊಸದಾಗಿ ಸೂರ್ಯ ದೇವರ ಮೂರ್ತಿ ಹಾಗೂ ಈಗಾಗಲೇ ಪೂರ್ವ ಚಿಕ್ಕ ಸಂಗಮನಾಥನ ಸನ್ನಿದಾನದಲ್ಲಿದ್ದ ಆಂಜನೇಯ ದೇವರ

ಮೂರ್ತಿಯನ್ನು ಸಂಪ್ರದಾಯದಂತೆ ಪ್ರತಿಷ್ಠಾಪನೆ ಮಾಡಲು ಶಾಸಕರು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದರು.

ಪ್ರಸ್ತುತ ದೇವಸ್ಥಾನದಲ್ಲಿರುವ ರಥವನ್ನು ಕೂಡಲೇ ಸುಸಜ್ಜಿತಗೊಳಿಸಲು ಹಾಗೂ ಹೊಸದಾಗಿ ಈಗಾಗಲೇ ಚಿಕ್ಕಸಂಗಮನಾಥನ ದೇವಾಲಯದ ಭಕ್ತಾಧಿಗಳು ಹಾಗೂ ಸಾಂಸ್ಕೃತಿಕ ಹಿನ್ನೆಲೆ ಹೊಂದಿರುವದರಿಂದ ನೂತನ ಭವ್ಯವಾದ ರಥವನ್ನು ನಿರ್ಮಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದರು.

ಶಾಸಕರು ಚಿಕ್ಕಸಂಗಮದ ಧಾರ್ಮಿಕ, ಪರಿಸರ ಮತ್ತು ಪ್ರವಾಸೋದ್ಯಮ ಸಾಮರ್ಥ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮವಹಿಸಲು ಸೂಚಿಸಿದರು. ದೇವಸ್ಥಾನಕ್ಕೆ ಬರುವ ಭಕ್ತಾಧಿಗಳಿಗೆ ಅನ್ನದಾಸೋಹ ವ್ಯವಸ್ಥೆಯನ್ನು ದೇವಸ್ಥಾನವತಿಯಿಂದ ಏರ್ಪಡಿಸಲು ಹಾಗೂ ಕೃಷ್ಣಾ ಮತ್ತು ಘಟಪ್ರಭಾ ನದಿಗಳ ಸಂಗಮ ಪ್ರದೇಶದ ನೈಸರ್ಗಿಕ ಸೌಂದರ್ಯ,

ದಟ್ಟವಾದ ಹಸಿರಿನ ಬೆಲ್ಟ್ ಹಾಗೂ ಪಕ್ಷಿಧಾಮವಾಗಿ ಅಭಿವೃದ್ಧಿ ಪಡಿಸಬೇಕಿದೆ. ದೇಶ ವಿದೇಶಗಳಿಂದ ಹಕ್ಕಿಗಳು ಬರುತ್ತಿದ್ದು,

ಪ್ರವಾಸಿಗರ ಆಕರ್ಷಣೆಯ ಸ್ಥಳವನ್ನಾಗಿಸಲು ಈ ಮೇಲಿನ ಎಲ್ಲಾ ಅಂಶಗಳ ಒಳಗೊಂಡ ಪ್ರಸ್ತಾವನೆಯನ್ನು ಅನುಮೊದನೆಗೆ ಸಲ್ಲಿಸಲು ಪ್ರಾಧಿಕಾರದ ಅಧಿಕಾರಿಗಳಿಗೆ ಅವರು ತಿಳಿಸಿದರು.

ಈ ಸಮಯದಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಸಿಇಒ ಶಶಿಧರ ಕುರೇರ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ

ಹಾಗೂ ಚಿಕ್ಕಸಂಗಮ ಪ್ರಾಧಿಕಾರದ ಆಯುಕ್ತರು ಇದ್ದರು.

# ಪೌರಾಡಳಿತ ಸಚಿವ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

**ಬೀದರ:** ಪೌರಾಡಳಿತ ಮತ್ತು ಹಜ್ ಸಚಿವರಾದ ರಹೀಂ ಖಾನ್ ಅವರು ನವೆಂಬರ್.25 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.

ನವೆಂಬರ್.25 ರಂದು ಮಧ್ಯಾಹ್ನ 2.40ಕ್ಕೆ ರಾಜೀವ್ ಗಾಂಧಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಹೈದರಾಬಾದ್ ರಸ್ತೆ ಮೂಲಕ (ಸಂಗಾರೆಡ್ಡಿ ಮಾರ್ಗವಾಗಿ) ಸಂಜೆ 5 ಗಂಟೆಗೆ ಬೀದರಗೆ ಆಗಮಿಸಲಿದ್ದಾರೆ. ನಂತರ ಸಂಜೆ 5 ರಿಂದ ಬೀದರ ಜಿಲ್ಲೆಯಲ್ಲಿ ನಿಗಧಿಪಡಿಸಿದ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಅಲ್ಲಿಯೇ ವಾಸ್ತವ್ಯ ಮಾಡಲಿದ್ದಾರೆಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)